23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 304 | ನವದೆಹಲಿ | ಬೆಲೆ ₹10 | ಮೇ 10 2026, ಭಾನುವಾರ

## ಒಳಪುಟಗಳಲ್ಲಿ

ಜಲಮಂಡಳಿ ಬ್ಲ್ಯೂಫೋರ್ಸ್ ಭರ್ಜರಿ ಕಾರ್ಯಾಚರಣೆ- ಪು.5

## ತ.ನಾಡು ಮುಖ್ಯಮಂತ್ರಿಯಾಗಿ ವಿಜಯ್ ಇಂದು ಪ್ರಮಾಣವಚನ

* ಭಾನುವಾರ ಬೆಳಗ್ಗೆ ನೆಹರು ಕ್ರೀಡಾಂಗಣದಲ್ಲಿ 10ಕ್ಕೆ ಕಾರ್ಯಕ್ರಮ ವಿಜಯ್ ಪ್ರಮಾಣವಚನ
* ಐಯುಎಂಎಲ್ ಸೇರ್ಪಡೆಯೊಂದಿಗೆ ಟಿವಿಕೆ ಬೆಂಬಲಿತ ಶಾಸಕರ 120ಕ್ಕೆ ಏರಿಕೆ
* ಸರ್ಕಾರ ರಚನೆಗೆ ಹಕ್ಕು ಮಂಡನೆ: ಭಾನುವಾರ
* ಅಗತ್ಯ ಬೆಂಬಲ ಸಿಗುತ್ತಿದ್ದಂತೆ ರಾಜ್ಯಪಾಲರ ಭೇಟಿ: ಐದು ದಿನಗಳ ರಾಜಕೀಯ ಮೇಲಾಟಕ್ಕೆ ತೆರೆ
* ಮೇ 13ರಂದು ಬಹುಮತ ಸಾಬೀತಿಗೆ ಸೂಚನೆ



**ಚೆನ್ನೈ, ಮೇ 9:** ಸರ್ಕಾರ ರಚನೆಗೆ ಅಗತ್ಯ ಶಾಸಕರ ಬೆಂಬಲ ಸಿಗುತ್ತಿದ್ದಂತೆ ರಾಜ್ಯಪಾಲರನ್ನು ಶನಿವಾರ ಭೇಟಿ ಮಾಡಿದ ಟಿವಿಕೆ ಮುಖ್ಯಸ್ಥ ಹಾಗೂ ನಟ ವಿಜಯ್ ಸರ್ಕಾರ ರಚನೆಗೆ ಹಕ್ಕು ಮಂಡಿಸಿದರು. ಇದರೊಂದಿಗೆ ಕಳೆದ ಐದು ದಿನದಿಂದ ತಮಿಳುನಾಡಿನಲ್ಲಿ ನಡೆಯುತ್ತಿದ್ದ ರಾಜಕೀಯ ಕಣ್ಣಾಮುಚ್ಚಾಲೆ ಕೊನೆಗೊಂಡಿದೆ. ಹಲವು ಪ್ರಯತ್ನಗಳ ಟಿವಿಕೆ ಪಕ್ಷಕ್ಕೆ 120 ಶಾಸಕರ ಬೆಂಬಲ ಸಿಕ್ಕಿದ್ದು, ವಿಜಯ್ ಲೋಕಭವನಕ್ಕೆ ತೆರಳಿ ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರ ರಚಿಸಲು ಹಕ್ಕು ಮಂಡಿಸಿದರು.

ಕಾಂಗ್ರೆಸ್‌ನ 5, ಎಡಪಂಥೀಯ ಪಕ್ಷಗಳ 4 ಶಾಸಕರು ಸೇರಿ ಟಿವಿಕೆಗೆ 116 ಶಾಸಕರ ಬೆಂಬಲ ಸಿಕ್ಕಿತ್ತು. ಇದು ಸರಳ ಬಹುಮತಕ್ಕೆ ಬೇಕಾದ ಸಂಖ್ಯೆ 118ಕ್ಕಿಂತ 2 ಸ್ಥಾನ ಕಡಿಮೆಯಿತ್ತು. ನಂತರ ವಿಸಿಕೆ ಬೆಂಬಲ ಘೋಷಿಸುವುದರೊಂದಿಗೆ ಈ ಸಂಖ್ಯೆ 118ಕ್ಕೆ ಏರಿತ್ತು. ಈಗ ಐಯುಎಂಎಲ್‌ನ 2 ಶಾಸಕರು ಬೆಂಬಲ ಘೋಷಿಸುತ್ತಿದ್ದಂತೆ ವಿಜಯ್‌ಗೆ ಒಟ್ಟು 120 ಶಾಸಕರ ಸಿಕ್ಕಂತಾಗಿದೆ. ಈ ನಡುವೆ ತಮಿಳುನಾಡು ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅವರು ಶನಿವಾರದಿಂದ ಎರಡು ದಿನಗಳ ಕೇರಳ ಪ್ರವಾಸ ಕೈಗೊಳ್ಳಬೇಕಿತ್ತು. ಆದರೆ, ವಿಜಯ್‌ಗೆ ಸರ್ಕಾರ ರಚಿಸಲು ಬೇಕಿರುವಷ್ಟು ಶಾಸಕರ ಬಲ ಸಿಕ್ಕಿದ್ದರಿಂದ ರಾಜ್ಯಪಾಲರು ತಮ್ಮ ಕೇರಳ ಪ್ರವಾಸವನ್ನು ರದ್ದುಪಡಿಸಿದರು. ಸಂಜೆ ಲೋಕಭವನಕ್ಕೆ ತೆರಳಿದ ವಿಜಯ್ 120 ಶಾಸಕರ ಬೆಂಬಲದ ಪತ್ರವನ್ನು ರಾಜ್ಯಪಾಲರಿಗೆ ನೀಡಿ ಸರ್ಕಾರ ರಚನೆಗೆ ಹಕ್ಕು ಮಂಡಿಸಿದರು.

ಫಲಿತಾಂಶ ಪ್ರಕಟಗೊಂಡ ನಂತರ 108 ಸ್ಥಾನಗಳಲ್ಲಿ ಗೆಲುವು ಸಾಧಿಸುವ ಮೂಲಕ ಅತಿದೊಡ್ಡ ಪಕ್ಷವಾಗಿ ಟಿವಿಕೆ ಹೊರಹೊಮ್ಮಿದ ಬಳಿಕ ನಾಲ್ಕು ದಿನದಲ್ಲಿ ನಾಲ್ಕು ಬಾರಿ ರಾಜ್ಯಪಾಲರನ್ನು ವಿಜಯ್ ಭೇಟಿ ಮಾಡಿದ್ದರು. ಆದರೆ ಸರ್ಕಾರ ರಚಿಸುವ ಅವರ ಪ್ರಯತ್ನಗಳು ಅಗತ್ಯ ಬೆಂಬಲ ಇರದಿದ್ದರಿಂದ ವಿಫಲವಾಗಿದ್ದವು. ಆದರೆ 5ನೇ ಬಾರಿಗೆ ಶನಿವಾರ ರಾಜ್ಯಪಾಲರನ್ನು ವಿಜಯ್ ಭೇಟಿಯಾಗಿದ್ದು ಸರ್ಕಾರ ರಚನೆಗೆ ರಾಜ್ಯಪಾಲರು ಅವಕಾಶ ನೀಡಿದ್ದಾರೆ. ಇನ್ನು ಭಾನುವಾರ ಬೆಳಗ್ಗೆ 10 ಗಂಟೆಗೆ ವಿಜಯ್ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ.

### ವಿಸಿಕೆ ಜತೆಗೆ ಐಯುಎಂಎಲ್ ಕೂಡ ಬೆಂಬಲ

ವಿಡುದಲೈ ಚಿರುತೈಗಳ್ ಕಚ್ಚಿ (ವಿಸಿಕೆ) ಪಕ್ಷ ತಮಿಳಗ ವೆಟ್ರಿ ಕಳಗಂ (ಟಿವಿಕೆ)ಗೆ ಬೇಷರತ್ ಬೆಂಬಲ ನೀಡಿದ್ದು ವಿಜಯ್ ಸರ್ಕಾರ ರಚನೆಯ ಮತ್ತಷ್ಟು ಸುಲಭವಾಯಿತು. ವಿಸಿಕೆ ಬೆಂಬಲದಿಂದ ರಾಜ್ಯದಲ್ಲಿ ಮೊದಲ ಮೈತ್ರಿ ಸರ್ಕಾರ ರಚನೆಗೆ ದಾರಿ ತೆರೆಯಲ್ಪಟ್ಟಿದ್ದು, ಮೂರು ದಿನಗಳಿಗಿಂತ ಹೆಚ್ಚು ಕಾಲ ಮುಂದುವರಿದ ರಾಜಕೀಯ ಗೊಂದಲಕ್ಕೆ ತೆರೆ ಬಿದ್ದಂತಾಗಿದೆ. ಇದರಿಂದ ತಮಿಳುನಾಡಿನಲ್ಲಿ ಸರ್ಕಾರ ರಚಿಸಲು ಟಿವಿಕೆ ಪಕ್ಷಕ್ಕೆ ಸ್ಪಷ್ಟ ಬಹುಮತ ದೊರಕಿದಂತಾಗಿದೆ.

ವಿಜಯ್‌ರ ಟಿವಿಕೆ ಪಕ್ಷಕ್ಕೆ ವಿಸಿಕೆ ಬೆಂಬಲ ಘೋಷಣೆ ಮಾಡಿದ ಬೆನ್ನಲ್ಲೇ ಇತ್ತ ಡಿಎಂಕೆ ಮೈತ್ರಿಕೂಟದ ಐಯುಎಂಎಲ್ ಕೂಡ ಟಿವಿಕೆಗೆ ಬೆಂಬಲ ಘೋಷಿಸಿದೆ. 2 ಸದಸ್ಯರನ್ನು ಹೊಂದಿರುವ ಐಯುಎಂಎಲ್ ಡಿಎಂಕೆ ಮೈತ್ರಿಕೂಟದಲ್ಲೇ ಉಳಿಯುವುದಾಗಿ ಘೋಷಣೆ ಮಾಡಿ ಟಿವಿಕೆಗೆ ಬೆಂಬಲ ನಿರಾಕರಿಸಿತ್ತು. ಆದರೆ ಇಂದು ಬದಲಾದ ರಾಜಕೀಯ ಸನ್ನಿವೇಶದಲ್ಲಿ ಟಿವಿಕೆ ಪಕ್ಷಕ್ಕೆ ಬೆಂಬಲ ಘೋಷಣೆ ಮಾಡಿದೆ.

### ಮೈತ್ರಿ ಲೆಕ್ಕಾಚಾರ

ವಿಸಿಕೆಯ ಬೆಂಬಲದಿಂದ ಟಿವಿಕೆಗೆ ಅತ್ಯಂತ ಮಹತ್ವದ ಎರಡು ಸ್ಥಾನಗಳು ಸೇರ್ಪಡೆಯಾಗುತ್ತವೆ. ವಿಜಯ್ ನೇತೃತ್ವದ ಮೈತ್ರಿಗೆ ಈಗಾಗಲೇ 116 ಶಾಸಕರ ಬೆಂಬಲವಿತ್ತು. ಇದರಲ್ಲಿ ಕಾಂಗ್ರೆಸ್‌ನ ಐವರು ಶಾಸಕರು ಹಾಗೂ ಎಡಪಂಥೀಯ ಪಕ್ಷಗಳ ನಾಲ್ವರು ಶಾಸಕರೂ ಸೇರಿದ್ದಾರೆ. ವಿಸಿಕೆಯ ಇಬ್ಬರು ಶಾಸಕರ ಬೆಂಬಲ ಸೇರಿಸಿದರೆ, ಮೈತ್ರಿಯ ಬಲ 118ಕ್ಕೆ ಏರುತ್ತದೆ. ತಮಿಳುನಾಡಿನಲ್ಲಿ ಸರ್ಕಾರ ರಚಿಸಲು ಅಗತ್ಯವಿರುವ ಕನಿಷ್ಠ ಶಾಸಕರ ಸಂಖ್ಯೆ ಇದೇ 118. ಆದರೆ ಕಾಂಗ್ರೆಸ್ ಬೆಂಬಲ ಕೆಲವು ಷರತ್ತುಗಳೊಂದಿಗೆ ಬಂದಿದ್ದು, ಎರಡು ಸಚಿವ ಸ್ಥಾನಗಳ ನಿರೀಕ್ಷೆಯಲ್ಲಿದೆ ಎಂದು ಮೂಲಗಳು ತಿಳಿಸಿವೆ. ಇದಲ್ಲದೆ ಎಡಿಎಂಕೆಯ ಮೂವರು ಶಾಸಕರು ಬಂಡಾಯ ಎದ್ದು ಟಿವಿಕೆಗೆ ಸೇರುವ ಸಾಧ್ಯತೆಯೂ ಇದೆ ಎನ್ನಲಾಗಿದೆ.

## ಅಮೆರಿಕ - ಇರಾನ್ ಶಾಂತಿ ಮಾತುಕತೆ ಮುಂದಿನ ವಾರ ಇಸ್ಲಾಮಾಬಾದ್‌ನಲ್ಲಿ

**ವಾಷಿಂಗ್ಟನ್/ಟೆಹ್ರಾನ್, ಮೇ 9:** ಸಂಘರ್ಷವನ್ನು ಕೊನೆಗೊಳಿಸುವ ಪ್ರಸ್ತಾವಿತ ಯೋಜನೆಯ ಕುರಿತು ಇರಾನ್‌ನಿಂದ ಪ್ರತಿಕ್ರಿಯೆಯನ್ನು ಶ್ವೇತಭವನ ನಿರೀಕ್ಷಿಸುತ್ತಿರುವಂತೆಯೇ, ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನಲ್ಲಿ ಮುಂದಿನ ವಾರದ ಆರಂಭದಲ್ಲಿ ಅಮೆರಿಕ ಮತ್ತು ಇರಾನ್ ನಡುವಿನ ಮಾತುಕತೆಗಳು ಪುನರಾರಂಭಗೊಳ್ಳಬಹುದು ಎಂದು ವರದಿಗಳು ಹೊರಬಿದ್ದಿವೆ. ಈ ವಿಷಯದ ಬಗ್ಗೆ ಪರಿಚಿತರಾಗಿರುವ ಜನರನ್ನು ಉಲ್ಲೇಖಿಸಿ, ವಾಲ್ ಸ್ಟ್ರೀಟ್ ಜರ್ನಲ್, ಎರಡೂ ಕಡೆಯವರು ಒಂದು ಪುಟದ, 14 ಅಂಶಗಳ ತಿಳುವಳಿಕೆ ಪತ್ರವನ್ನು ರೂಪಿಸಲು ಮಧ್ಯವರ್ತಿಗಳೊಂದಿಗೆ ಕೆಲಸ ಮಾಡುತ್ತಿದ್ದಾರೆ ಎಂದು ವರದಿ ಮಾಡಿದೆ. ಪ್ರಸ್ತಾವಿತ ಚೌಕಟ್ಟು ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸುವ ಗುರಿಯನ್ನು ಹೊಂದಿರುವ ಒಂದು ತಿಂಗಳ ಅವಧಿಯ ಮಾತುಕತೆ ಪ್ರಕ್ರಿಯೆಗೆ ವೇದಿಕೆಯನ್ನು ಸಿದ್ಧಪಡಿಸುತ್ತದೆ. ಕರಡು ಇರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ಚರ್ಚೆಗಳು, ಹಾರ್ಮುಜ್ ಜಲಸಂಧಿಯಲ್ಲಿನ ಉದ್ವಿಗ್ನತೆಯನ್ನು ಕಡಿಮೆ ಮಾಡುವುದು ಮತ್ತು ಇರಾನ್ನ ಹೆಚ್ಚು ಸಮೃದ್ಧವಾಗಿರುವ ಯುರೇನಿಯಂ ದಾಸ್ತಾನುಗಳನ್ನು ಮತ್ತೊಂದು ದೇಶಕ್ಕೆ ವರ್ಗಾಯಿಸುವ ಸಾಧ್ಯತೆಯನ್ನು ಒಳಗೊಂಡಿದೆ ಎಂದು ವರದಿಯಾಗಿದೆ. ಆದಾಗ್ಯೂ, ಹಲವಾರು ಪ್ರಮುಖ ಸಮಸ್ಯೆಗಳು ಬಗೆಹರಿಯದೆ ಉಳಿದಿವೆ.

## ಬೆಂಗಳೂರಿಗೆ ಇಂದು ಪ್ರಧಾನಿ ಆರ್ಟ್ ಆಫ್ ಲಿವಿಂಗ್ ಕಾರ್ಯಕ್ರಮದಲ್ಲಿ ಭಾಗಿ






**ಬೆಂಗಳೂರು, ಮೇ 9:** ರಾಜ್ಯಕ್ಕೆ ಆಗಮಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರು ಆರ್ಟ್ ಆಫ್ ಲಿವಿಂಗ್‌ನ ವರ್ಷಾಚರಣೆ, ರವಿಶಂಕರ್ ಗುರೂಜಿಯವರ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಇದೇ ವೇಳೆ ಪ್ರಧಾನಿಗೆ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಬಿಜೆಪಿ ವತಿಯಿಂದ ಸನ್ಮಾನ ಕಾರ್ಯಕ್ರಮ ಹಮಿಕೊಳ್ಳಲಾಗಿದೆ.

ಪ್ರಸಿದ್ಧ ಆಧ್ಯಾತ್ಮಿಕ ಕೇಂದ್ರವಾಗಿರುವ ಆರ್ಟ್ ಆಫ್ ಲಿವಿಂಗ್‌ನ 45ನೇ ವರ್ಷಾಚರಣೆ ಹಾಗೂ ರವಿಶಂಕರ್ ಗುರೂಜಿಯವರ 70ನೇ ವರ್ಷದ ಹುಟ್ಟುಹಬ್ಬ ಆಚರಣೆ ನೆರವೇರಲಿದೆ. ನಗರದ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ನಡೆಯಲಿದೆ.

ಇದೇ ವೇಳೆ ಆಶ್ರಮದ ಆವರಣದಲ್ಲಿ ನಿರ್ಮಾಣಗೊಂಡಿರುವ ನೂತನ ಧ್ಯಾನಮಂದಿರ ಉದ್ಘಾಟನೆಯಾಗಲಿದ್ದು, ಹಲವು ವಿಶೇಷಗಳನ್ನು ಹೊಂದಿರುವ ಧ್ಯಾನ ಮಂದಿರದ ಅನಾವರಣದ ಜತೆಗೆ ವಿಶೇಷ ಕಾರ್ಯಕ್ರಮಗಳು ಜರುಗಲಿವೆ.

ಆರ್ಟ್ ಆಫ್ ಲಿವಿಂಗ್‌ನ ಈ ನೂತನ ಧ್ಯಾನಮಂದಿರದಲ್ಲಿ ವಾರ್ಲಿ, ಮಧುಬನಿ, ಪಟ್ಟಚಿತ್ರ, ತಂಜಾವೂರು, ಸೋಹ್ರಾಹ್, ಕೊಹ್ಬರ್, ಗೊಂಡ್ ಮತ್ತು ಪಿಚ್ವಾಯಿ ಕಲೆಗಳನ್ನು ಬಳಕೆ ಮಾಡಲಾಗಿದ್ದು, ಈ ಸುಂದರ ಧ್ಯಾನ ಮಂದಿರದಲ್ಲಿ ಧ್ಯಾನ ಮಾಡಲು ಅಂದಿನಿಂದ ಅವಕಾಶ ಸಿಗಲಿದೆ. ಮಾನಸಿಕ, ಆಧ್ಯಾತ್ಮಿಕ ಸಾಧನೆಗಳ ಮೂಲಕ ಜನರಿಗೆ ಮಾರ್ಗದರ್ಶನ ನೀಡುತ್ತಾ ಬಂದಿರುವ ಆರ್ಟ್ ಆಫ್ ಲಿವಿಂಗ್ 45 ವರ್ಷಗಳನ್ನು ಪೂರೈಸುತ್ತಿದ್ದು, ಮೇ 10 ರಿಂದ 25ರವರೆಗೆ ಹಲವು ಕಾರ್ಯಕ್ರಮಗಳು ನಡೆಯಲಿವೆ. ನಾನಾ ಕ್ಷೇತ್ರಗಳ ಗಣ್ಯರು ಸಂಭ್ರಮಾಚರಣೆಯಲ್ಲಿ ಭಾಗಿಯಾಗಲಿದ್ದಾರೆ.

## ದೀಕ್ಷಿತ್ ಸಾಧನೆ ಕನ್ನಡಿಗರಿಗೆ ಸ್ಫೂರ್ತಿ: ಸಿಎಂ

**ಬೆಂಗಳೂರು, ಮೇ 9:** ಭಾರತೀಯ ಅರಣ್ಯ ಸೇವೆ ಪರೀಕ್ಷೆಯಲ್ಲಿ ದೇಶಕ್ಕೆ ಪ್ರಥಮ ರ್‍ಯಾಂಕ್ ಪಡೆದು ಅನನ್ಯ ಸಾಧನೆ ಮಾಡಿದ ಕನ್ನಡಿಗ ಬಸವರಾಜ ಕೆಂಪವಾಡ ಹಾಗೂ ಇದೇ ಪರೀಕ್ಷೆಯಲ್ಲಿ 14ನೇ ರ್‍ಯಾಂಕ್ ಪಡೆದ ದೀಕ್ಷಿತ್.ಎನ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ.

ಕನ್ನಡಿಗರ ಪರಿಶ್ರಮ, ಪ್ರಯತ್ನ ಮತ್ತು ಆತ್ಮವಿಶ್ವಾಸವಿದ್ದರೆ ಕಠಿಣಾತಿ ಕಠಿಣ ಗುರಿಯನ್ನು ಕೂಡ ಮುಟ್ಟಲು ಸಾಧ್ಯವೆಂಬುದಕ್ಕೆ ಇವರ ಸಾಧನೆಯೇ ಸಾಕ್ಷಿ. ಅರಣ್ಯ, ವನ್ಯಜೀವಿ ಹಾಗೂ ಪರಿಸರ ಸಂಪನ್ಮೂಲಗಳನ್ನು ಉಳಿಸಿ, ಬೆಳೆಸುವಲ್ಲಿ ನಿಮ್ಮ ಪ್ರತಿಭೆ, ಶ್ರದ್ಧೆಯಿಂದ ರಾಷ್ಟ್ರಕ್ಕೆ ಗರಿಷ್ಠ ಅನುಕೂಲವಾಗಲಿ ಎಂದು ಹಾರೈಸುತ್ತೇನೆ ಎಂದಿದ್ದಾರೆ.

ಈ ಇಬ್ಬರ ಸಾಧನೆಯು ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆ ಮತ್ತು ಸ್ಫೂರ್ತಿದಾಯಕವಾದುದ್ದು. ಮತ್ತೊಮ್ಮೆ ವಿಶಿಷ್ಟ ಸಾಧನೆಗೈದ ಯುವ ಕನ್ನಡಿಗರಿಗೆ ಹೃತ್ಪೂರ್ವಕ ಅಭಿನಂದನೆ ಎಂದು ಫೋಟೋ ಸಮೇತ ಸಿಎಂ ಶುಭ ಹಾರೈಸಿದ್ದಾರೆ. 2025ನೇ ಸಾಲಿನ ಭಾರತೀಯ ಅರಣ್ಯ ಸೇವೆ ಪರೀಕ್ಷೆಯ ಫಲಿತಾಂಶ ಶುಕ್ರವಾರ (ಮೇ 08, 2026) ರಂದು ಪ್ರಕಟವಾಗಿದೆ. ಇದರಲ್ಲಿ ಅಥಣಿ ತಾಲೂಕಿನ ಸವದಿಯ ಬಸವರಾಜ ಕೆಂಪವಾಡ ಅವರು ದೇಶಕ್ಕೆ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಇವರು ಒಂದರಿಂದ ಐದನೇ ತರಗತಿವರೆಗೆ ಸ್ವಗ್ರಾಮ ಸವದಿಯಲ್ಲಿ ಮತ್ತು ರಾಯಬಾಗ್‌ನ ಅಳಗವಾಡಿ ಮುರಾರ್ಜಿ ದೇಸಾಯಿ ವಸತಿಯಲ್ಲಿ ಶಾಲೆಯಲ್ಲಿ ಹೈಸ್ಕೂಲ್ ಕಲಿತಿದ್ದಾರೆ. ಜಮಖಂಡಿಯಲ್ಲಿ ಪಿಯುಸಿ ಬಳಿಕ ಶಿರಸಿಯಲ್ಲಿ ಅರಣ್ಯ ವಿಭಾಗದಲ್ಲಿ ಬಿಎಸ್‌ಸಿ ಮುಗಿಸಿ ಬೆಂಗಳೂರಿನಲ್ಲಿ ಅಧ್ಯಯನ ಕೈಗೊಂಡಿದ್ದಾರೆ.

## ಪಶ್ಚಿಮ ಬಂಗಾಳದಲ್ಲಿ ಕೇಸರಿ ಯುಗಾರಂಭ, ಪ್ರಧಾನಿ ಮೋದಿ, ಶಾ ಭಾಗಿ

# ಬಿಜೆಪಿ ಮೊದಲ ಸಿಎಂ ಸುವೇಂದು ಅಧಿಕಾರಿ ಪದಗ್ರಹಣ





ಕೋಲ್ಕತ್ತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆದ ಬಿಜೆಪಿ ಪ್ರಮಾಣವಚನ ಸಮಾರಂಭದಲ್ಲಿ ಕಲಾವಿದರು ಪ್ರದರ್ಶನ ನೀಡಿದರು.



ಕೋಲ್ಕತ್ತಾದ ಬ್ರಿಗೇಡ್ ಮೈದಾನದಲ್ಲಿ ನಡೆದ ಪ್ರಮಾಣವಚನ ಸಮಾರಂಭದಲ್ಲಿ ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಮತ್ತು ಇತರ ಸದಸ್ಯರೊಂದಿಗೆ ಪ್ರಧಾನಿ ನರೇಂದ್ರ ಮೋದಿ.



ಬ್ರಿಗೇಡ್ ಮೈದಾನದಲ್ಲಿ ಶನಿವಾರ ನಡೆದ ಬಿಜೆಪಿ ನಾಯಕರ ಪ್ರಮಾಣವಚನ ಸಮಾರಂಭದಲ್ಲಿ ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ. ನಡ್ಡಾ ಮತ್ತು ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್ ಅವರು ಉತ್ಸಾಹಭರಿತ ಜನಸಮೂಹಕ್ಕೆ ಕೈಬೀಸಿದರು.

**ಕೋಲ್ಕತ್ತಾ, ಮೇ 9:** ಪಶ್ಚಿಮ ಬಂಗಾಳದ ರಾಜಕೀಯ ಇತಿಹಾಸದಲ್ಲಿ ಹೊಸ ಪರ್ವ ಶುರುವಾಗಿದೆ. ಬಿಜೆಪಿ ನಾಯಕ ಸುವೇಂದು ಅಧಿಕಾರಿ ಬಂಗಾಳದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ಸ್ವೀಕಾರ ಮಾಡಿದ್ದಾರೆ. ಕೋಲ್ಕತ್ತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆದ ಅದ್ದೂರಿ ಕಾರ್ಯಕ್ರಮದಲ್ಲಿ ಸುವೇಂದು ಅಧಿಕಾರಿ ಪ್ರಮಾಣ ಸ್ವೀಕರಿಸಿದ್ದು, ಈ ಐತಿಹಾಸಿಕ ಕ್ಷಣಕ್ಕೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಹಾಗೂ ಎನ್‌ಡಿಎ ಆಡಳಿತದ 20 ರಾಜ್ಯಗಳ ಮುಖ್ಯಮಂತ್ರಿಗಳು ಸಾಕ್ಷಿಯಾದರು.

ಸುವೇಂದು ಅಧಿಕಾರಿ ಅವರೊಂದಿಗೆ ಇತರ ಶಾಸಕರಾದ ದಿಲೀಪ್ ಘೋಷ್, ಅಗ್ನಿಮಿತ್ರಾ ಪೌಲ್, ಅಶೋಕ್ ಕೀರ್ತನ್ಯ, ಕ್ಷುದಿರಂ ತಡು, ನಿಶಿತ್ ಪ್ರಾಮಾಣಿಕ್ ಸಚಿವರಾಗಿ ಪ್ರಮಾಣ ಸ್ವೀಕಾರ ಮಾಡಿದರು. ರಾಜ್ಯಪಾಲ ಆರ್.ಎನ್ ರವಿ ಪ್ರಮಾಣ ವಚನ ಬೋಧಿಸಿದರು.

ಪಟ್ಟಾಭಿಷೇಕ ಸಮಾರಂಭಕ್ಕೆ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ವೇದಿಕೆಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ, ಜನ್ಮ ವಾರ್ಷಿಕೋತ್ಸವದ ಅಂಗವಾಗಿ ರವೀಂದ್ರನಾಥ ಟ್ಯಾಗೋರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

**ಜೈಂಟ್ ಕಿಲ್ಲರ್ ಸುವೇಂದು ಅಧಿಕಾರಿ**

ಮೂಲತಃ ನಂದಿಗ್ರಾಮ ಚಳವಳಿಯ ಮೂಲಕ ಜನನಾಯಕರಾಗಿ ಹೊರಹೊಮ್ಮಿದ ಸುವೇಂದು ಅಧಿಕಾರಿ, ಒಂದು ಕಾಲದಲ್ಲಿ ಮಮತಾ ಬ್ಯಾನರ್ಜಿ ಅವರ ಬಲಗೈ ಬಂಟನಾಗಿದ್ದವರು.

ನಂತರ ಬಿಜೆಪಿ ಸೇರಿ ಬಂಗಾಳದಾದ್ಯಂತ ಪಕ್ಷವನ್ನು ತಳಮಟ್ಟದಿಂದ ಸಂಘಟಿಸುವಲ್ಲಿ ಯಶಸ್ವಿಯಾದರು. ಇವರ ಸಂಘಟನಾ ಚಾತುರ್ಯವನ್ನು ಅಮಿತ್ ಶಾ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದರು.

ಸೋಲಿಲ್ಲದ ನಾಯಕಿ ಎನಿಸಿಕೊಂಡಿದ್ದ ಮಮತಾ ಬ್ಯಾನರ್ಜಿ ಅವರಿಗೆ ಅವರದ್ದೇ ನೆಲದಲ್ಲಿ ಸೋಲುಣಿಸಿದ ಸುವೇಂದು ಅಧಿಕಾರಿ, ಈಗ ಸುವರ್ಣ ಬಂಗಾಳ ನಿರ್ಮಾಣದ ಜವಾಬ್ದಾರಿ ಹೊತ್ತುಕೊಂಡಿದ್ದಾರೆ. ಇತ್ತೀಚೆಗಷ್ಟೇ ಮುಕ್ತಾಯಗೊಂಡ ಬಂಗಾಳ ಚುನಾವಣೆಯಲ್ಲಿ ಬಿಜೆಪಿ 207 ಸ್ಥಾನಗಳನ್ನು ಗಳಿಸಿ ಅಧಿಕಾರದ ಗದ್ದುಗೆ ಹಿಡಿದಿದೆ. ಇನ್ನೂ ತೃಣಮೂಲ ಕಾಂಗ್ರೆಸ್ (ಟಿಎಂಸಿ) 80 ಸ್ಥಾನಗಳನ್ನು ಗೆದ್ದಿದೆ.

## ಬಿಜೆಪಿಯ ಹಿರಿಯ ನಾಯಕ - ಮಾಜಿ ಸಿಎಂ ಯಡಿಯೂರಪ್ಪ ರಾಜಕೀಯದಲ್ಲಿ 50 ವರ್ಷಗಳ ಪೂರೈಕೆ




ಯಶಸ್ವಿಯಾಗಿ ಸಂಪನ್ನಗೊಂಡ ಯಡಿಯೂರಪ್ಪ 'ಅಭಿಮಾನೋತ್ಸವ' ಕಾರ್ಯಕ್ರಮ, ಕೇಂದ್ರ ಸಚಿವರಾದ ಅಮಿತ್ ಶಾ ಮತು ಪ್ರಲ್ಹಾದ್ ಜೋಶಿ, ಸಂಸದರಾದ ಗೋವಿಂದ ಕಾರಜೋಳ, ಬಿ.ವೈ.ವಿಜಯೇಂದ್ರ. ಇನ್ನಿತರ ಗಣ್ಯರು ಪಾಲ್ಗೊಂಡಿದ್ದರು.

ಪೂರ್ಣ ವಿವರ 8ನೇ ಪುಟದಲ್ಲಿ

## ಬೆಂಗಳೂರಿಗೆ ತಮಿಳುನಾಡು ಶಾಸಕರು: ವದಂತಿ




**ಬೆಂಗಳೂರು, ಮೇ 9:** ತಮಿಳುನಾಡಿನ ಕಾಂಗ್ರೆಸ್ ಶಾಸಕರು ಬೆಂಗಳೂರಿಗೆ ಆಗಮಿಸಿ ರೆಸಾರ್ಟ್ ರಾಜಕಾರಣ ಆರಂಭಿಸಿದ್ದಾರೆ ಎಂಬ ವದಂತಿಗಳನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಳ್ಳಿಹಾಕಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ತಮಿಳುನಾಡು ಶಾಸಕರು ನಗರಕ್ಕೆ ಬಂದಿದ್ದಾರೆ ಎನ್ನುವುದು ಕೇವಲ ಮಾಧ್ಯಮಗಳ ಸೃಷ್ಟಿ. ಹೈಕಮಾಂಡ್‌ನಿಂದ ಈ ಬಗ್ಗೆ ಯಾವುದೇ ಸೂಚನೆ ಬಂದಿಲ್ಲ. ನಾನಂತೂ ಯಾರನ್ನೂ ಕರೆಸಿಕೊಂಡಿಲ್ಲ" ಎಂದು ಸ್ಪಷ್ಟಪಡಿಸಿದರು. ಪ್ರಮುಖವಾಗಿ ಈಗಲ್‌ಟನ್ ರೆಸಾರ್ಟ್‌ನಲ್ಲಿ ಶಾಸಕರು ತಂಗಿದ್ದಾರೆ ಎಂಬ ಸುದ್ದಿಗೆ ಪ್ರತಿಕ್ರಿಯಿಸಿದ ಅವರು, ಆ ರೆಸಾರ್ಟ್ ನವೀಕರಣದ ಹಿನ್ನೆಲೆಯಲ್ಲಿ ಸದ್ಯ ಮುಚ್ಚಲ್ಪಟ್ಟಿದೆ. ಅಲ್ಲಿ ಯಾವುದೇ ಶಾಸಕರು ಇಲ್ಲ. ಕೆಲವು ಮಾಧ್ಯಮಗಳು ಹೈದರಾಬಾದ್‌ಗೆ ಹೋಗಿದ್ದಾರೆ ಎಂದರೆ, ಇನ್ನು ಕೆಲವು ಬೆಂಗಳೂರಿಗೆ ಬಂದಿದ್ದಾರೆ ಎನ್ನುತ್ತಿವೆ. ಇದರಲ್ಲಿ ಸತ್ಯಾಂಶವಿಲ್ಲ" ಎಂದರು.

ತಮಿಳುನಾಡು ಚುನಾವಣಾ ಫಲಿತಾಂಶದ ನಂತರ ಅಲ್ಲಿನ ರಾಜಕೀಯ ಅಸ್ಥಿರತೆಯ ಹಿನ್ನೆಲೆಯಲ್ಲಿ ಶಾಸಕರನ್ನು ರಕ್ಷಿಸಲು ಇಲ್ಲಿಗೆ ಕರೆತರಲಾಗಿದೆ ಎಂಬ ಮಾತುಗಳು ಹರಿದಾಡುತ್ತಿದ್ದವು. ಪಕ್ಷ ನೀಡಿದ ಪ್ರಣಾಳಿಕೆ ಬಿಡುಗಡೆ ಮತ್ತು ಪ್ರಚಾರದ ಜವಾಬ್ದಾರಿಯನ್ನು ನಾನು ಮುಗಿಸಿದ್ದೇನೆ, ಉಳಿದಂತೆ ಅಲ್ಲಿನ ಆಂತರಿಕ ವಿದ್ಯಮಾನಗಳ ಬಗ್ಗೆ ನನಗೆ ಮಾಹಿತಿ ಇಲ್ಲ" ಎಂದು ಶಿವಕುಮಾರ್ ಹೇಳಿದರು. ಡಿಕೆಶಿ ಹೇಳಿಕೆಯಿಂದ ಕಳೆದ ಎರಡು ದಿನಗಳಿಂದ ನಡೆಯುತ್ತಿದ್ದ ರೆಸಾರ್ಟ್ ರಾಜಕಾರಣದ ಚರ್ಚೆಗೆ ತೆರೆ ಬಿದ್ದಿದೆ.

**ಯಡಿಯೂರಪ್ಪ ಅವರಿಗೆ ಒಳ್ಳೆಯದಾಗಲಿ**

ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮದ ಬಗ್ಗೆ ಕೇಳಿದಾಗ, "ಅವರು ರಾಜ್ಯದ ಸೇವೆ ಮಾಡಿದ್ದಾರೆ. ಅವರ ಜನ್ಮದಿನವಿದ್ದರೆ ಅವರಿಗೆ ಒಳ್ಳೆಯದಾಗಲಿ. ಅವರ ಪಕ್ಷದವರು ಪಕ್ಷ ಸಂಘಟನೆ ಹಾಗೂ ಅವರಿಗೆ ಗೌರವ ನೀಡುತ್ತಿದ್ದಾರೆ. ಅದರಲ್ಲಿ ತಪ್ಪೇನಿಲ್ಲ. ಅವರಿಗೆ ಉತ್ತಮ ಆರೋಗ್ಯ ಸಿಗಲಿ ಎಂದು ಆಶಿಸುತ್ತೇನೆ. ಭಗವಂತ ಅವರಿಗೆ ಹೆಚ್ಚಿನ ಆಯಸ್ಸು ನೀಡಲಿ. ರಾಜಕೀಯವಾಗಿ ಅವರ ವಿಚಾರಧಾರೆ ಬೇರೆ, ನಮ್ಮ ವಿಚಾರಧಾರೆ ಬೇರೆ" ಎಂದು ತಿಳಿಸಿದರು. ಪುದುಚೆರಿ ಪ್ರವಾಸದ ಬಗ್ಗೆ ಕೇಳಿದಾಗ, "ನಾನು ಬಹಳ ದಿನಗಳಿಂದ ದೇವಾಲಯಕ್ಕೆ ಹೋಗಿರಲಿಲ್ಲ. ಹೀಗಾಗಿ ಶನೇಶ್ವರ ದೇವಾಲಯಕ್ಕೆ ಹೋಗುತ್ತಿದ್ದೇನೆ" ಎಂದು ತಿಳಿಸಿದರು. ಕೇರಳಂ ಸಿಎಂ ಆಯ್ಕೆ ವಿಚಾರವಾಗಿ, "ನಮ್ಮ ಎಲ್ಲಾ ನಾಯಕರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತಾರೆ. ಅದು ಎಲ್ಲಾ ಪಕ್ಷಗಳಲ್ಲೂ ನಡೆಯುವ ಪ್ರಕ್ರಿಯೆ" ಎಂದರು.

**ಅಶೋಕ್ ಹೇಳಿರುವ ಎಲ್ಲ ಕೆಲಸ ಮಾಡಲಾಗುತ್ತಿದೆ**

ನಗರದಲ್ಲಿ ಮರಗಳ ತೆರವಿಗೆ ಸಮಯವಿಲ್ಲ ಎಂಬ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಟೀಕೆಗೆ ಉತ್ತರಿಸಿದ ಡಿಕೆಶಿ, "ಬಿದ್ದಿರುವ ಎಲ್ಲ ಮರಗಳ ತೆರವು ಮಾಡಲಾಗುತ್ತಿದೆ. ಅರಮನೆ ಮೈದಾನ ಸುತ್ತಮುತ್ತ ಸೇರಿದಂತೆ ಎಲ್ಲೆಡೆ ಈ ಕಾರ್ಯ ಮಾಡಲಾಗುತ್ತಿದೆ. ದುರ್ಬಲವಾಗಿರುವ ಮರಗಳ ತೆರವಿಗೂ ಸೂಚಿಸಲಾಗಿದೆ. 480 ಮರಗಳ ಪಟ್ಟಿ ನೀಡಿದ್ದು, ಅವುಗಳ ರೆಂಬೆ ಕತ್ತರಿಸಲು ಅನುಮತಿ ನೀಡಲಾಗಿದೆ. ಅಶೋಕ್ ಅವರು ಹೇಳಿರುವ ಎಲ್ಲಾ ಕೆಲಸ ಮಾಡಲಾಗುತ್ತಿದೆ ಎಂದು ಡಿಕೆಶಿ ತಿಳಿಸಿದರು.

**300 ಟಿಕೆಟ್ ಕೇಳಿದ್ದೇ ದೊಡ್ಡದಾಯ್ತಾ?**

ಆರ್.ಅಶೋಕ್ ಅವರು ಶಾಸಕರಾದ ಕಾಶಪ್ಪನವರು ಐಪಿಎಲ್ ಟಿಕೆಟ್ ಕೇಳಿದ್ದರು. ಈಗ ಅದನ್ನು ನನ್ನ ಮೇಲೆಯೇ ಹಾಕಿಕೊಂಡಿದ್ದೇನೆ. ಗುಜರಾತಿನವರಿಗೆ ಟಿಕೆಟ್‌ಗಳು ಹೆಚ್ಚಾಗಿ ಬೇಕಾಗಿತ್ತು, ವ್ಯಾಪಾರ ಜಾಸ್ತಿ ಆಗಬೇಕಿತ್ತು. ಅದಕ್ಕೆ ಈ ರೀತಿ ರಾಜಕೀಯ ಮಾಡುತ್ತಿದ್ದಾರೆ. ಅವರಿಗೆ ನಾವು ಕೇಳಿದ್ದ 300 ಟಿಕೆಟ್ ದೊಡ್ಡದಾಯ್ತಾ. ಬೇರೆ ರಾಜ್ಯಗಳಲ್ಲಿ 60% ಟಿಕೆಟ್ ಅನ್ನು ರಾಜ್ಯ ಸರ್ಕಾರಗಳಿಗೆ ಕೊಡುತ್ತಿದ್ದಾರೆ. ನಾನು ಕರ್ನಾಟಕದ ಪ್ರತಿನಿಧಿಯಾಗಿ ಶಾಸಕರು ಏನು ಹೇಳುತ್ತಾರೋ ಅದನ್ನು ಮಾಡಿದ್ದೇನೆ ಎಂದು ಸ್ಪಷ್ಟಪಡಿಸಿದರು. ಎಲ್ಲ ಪಕ್ಷದವರು ಸೇರಿ ಬೇಡಿಕೆ ಇಟ್ಟರಲ್ಲವೇ, ದಳದವರಿಗೆ ಬೇಡವಾದರೆ ತಮ್ಮ ಪಕ್ಷದ ಶಾಸಕರಿಗೆ ಟಿಕೆಟ್ ಬೇಡ ಎಂದು ವಾಪಸ್ ನೀಡಲಿ. ಎಂದರು.

## ನಿತ್ಯ ಪಂಚಾಂಗ 10.05.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಅಷ್ಟಮಿ,
ಧನಿಷ್ಟ ನಕ್ಷತ್ರ,
ಕಾಲಾಷ್ಟಮಿ,
ಮದರ್ಸ್ ಡೇ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# 2ನೇ ವಿಮಾನ ನಿಲ್ದಾಣ: ಕನಕಪುರ ರಸ್ತೆಯತ್ತ ಸರ್ಕಾರ ಹೆಚ್ಚಿನ ಒಲವು

**ಬೆಂಗಳೂರು, ಮೇ 9:** ಬೆಂಗಳೂರಿನ ಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ದಕ್ಷಿಣ ಬೆಂಗಳೂರಿನ ಕನಕಪುರ ರಸ್ತೆಯತ್ತ ಹೆಚ್ಚಿನ ಒಲವು ತೋರುತ್ತಿದೆ. ಈ ಯೋಜನೆಗಾಗಿ ಕನಕಪುರ ರಸ್ತೆಯಲ್ಲಿ ಪಟ್ಟಿ ಮಾಡಲಾದ ಚೂಡಹಳ್ಳಿ ಮತ್ತು ಸೋಮನಹಳ್ಳಿ ಎಂಬ ಎರಡು ಪ್ರತ್ಯೇಕ ಭೂಭಾಗಗಳನ್ನು ವಿಲೀನಗೊಳಿಸಿ, ವಿಮಾನ ನಿಲ್ದಾಣದ ಅವಶ್ಯಕತೆಗೆ ತಕ್ಕಂತೆ ಒಂದು ಬೃಹತ್ ಮತ್ತು ಪರಿಪೂರ್ಣ ಜಾಗವನ್ನಾಗಿ ರೂಪಿಸಲು ಗಂಭೀರ ಚಿಂತನೆ ನಡೆಸಲಾಗುತ್ತಿದೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ದಕ್ಷಿಣ ಬೆಂಗಳೂರೇ ವಿಮಾನ ನಿಲ್ದಾಣಕ್ಕೆ ಸೂಕ್ತ ಸ್ಥಳ ಎಂದು ಹಲವು ಬಾರಿ ಬಹಿರಂಗವಾಗಿ ಹೇಳಿಕೆ ನೀಡಿದ್ದು, ಅಧಿಕಾರಿಗಳ ಮಟ್ಟದಲ್ಲೂ ಇದೇ ಸ್ಥಳಕ್ಕೆ ಆದ್ಯತೆ ನೀಡಲಾಗುತ್ತಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ಸಾರ್ವಜನಿಕವಾಗಿ ವ್ಯಕ್ತಪಡಿಸಿರುವಂತೆ, ಸರ್ಕಾರದ ಆದ್ಯತೆ ದಕ್ಷಿಣ ಬೆಂಗಳೂರಿನತ್ತಲೇ ಇದೆ. ಕನಕಪುರ ರಸ್ತೆಯಲ್ಲಿ ಶಾರ್ಟ್‌ಲಿಸ್ಟ್ ಮಾಡಲಾದ ಎರಡು ಸ್ಥಳಗಳನ್ನು ಒಗ್ಗೂಡಿಸುವುದರಿಂದ ವಿಮಾನಗಳ ಹಾರಾಟಕ್ಕೆ (ಯಢಿಠಿಚಿಛಿಜ) ಇರುವ ನಿರ್ಬಂಧಗಳು ಕಡಿಮೆಯಾಗಲಿವೆ ಮತ್ತು ಉತ್ತಮ ಸಂಪರ್ಕ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗಲಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಮತ್ತು ಕೆಐಎಡಿಬಿ ಅಧಿಕಾರಿಗಳ ಪ್ರಕಾರ, ಪಟ್ಟಿ ಮಾಡಲಾದ ಮೂರು ಸ್ಥಳಗಳ ಕಾರ್ಯಸಾಧ್ಯತೆಯ ಅಧ್ಯಯನ ನಡೆಸಲು ಸಿಂಗಪೂರ್ ಮೂಲದ ಕಂಪನಿಯನ್ನು ಸರ್ಕಾರ ಆಯ್ಕೆ ಮಾಡಿದೆ. ಎರಡು ಸೈಟ್‌ಗಳನ್ನು ವಿಲೀನಗೊಳಿಸುವುದರಿಂದ ವಿಮಾನಗಳ ಸುಗಮ ಸಂಚಾರಕ್ಕೆ ಹೆಚ್ಚಿನ ಅವಕಾಶ ಸಿಗಲಿದೆ. ದಕ್ಷಿಣ ಬೆಂಗಳೂರು ಮತ್ತು ತಮಿಳುನಾಡಿನ ಗಡಿ ಭಾಗದ ಜನರಿಗೆ ಇದು ಹೆಚ್ಚಿನ ಅನುಕೂಲ ಒದಗಿಸಲಿದೆ. ವಿಮಾನ ನಿಲ್ದಾಣಕ್ಕೆ ಬೇಕಾದ ಬೃಹತ್ ವಿಸ್ತೀರ್ಣದ ಜಾಗ ಒಂದೇ ಕಡೆ ಲಭ್ಯವಾಗಲಿದೆ. ಪ್ರಸ್ತುತ ದೇವನಹಳ್ಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಈ ಎರಡನೇ ವಿಮಾನ ನಿಲ್ದಾಣದ ನಿರ್ಮಾಣ ಅತ್ಯಗತ್ಯವಾಗಿದ್ದು, ಕನಕಪುರ ರಸ್ತೆಯ ಈ ಜಾಗವು ತಾಂತ್ರಿಕವಾಗಿ ಹೆಚ್ಚು ಸೂಕ್ತವೆಂದು ಕಂಡುಬರುತ್ತಿದೆ.

ಪ್ರಸ್ತುತ ಸರ್ಕಾರದ ಮುಂದೆ ಕನಕಪುರ ರಸ್ತೆಯಲ್ಲಿರುವ ಎರಡು ನಿವೇಶನಗಳು ಹಾಗೂ ತುಮಕೂರು ರಸ್ತೆಯ ನೆಲಮಂಗಲ ಮತ್ತು ಕುಣಿಗಲ್ ನಡುವೆ ಇರುವ ಮತ್ತೊಂದು ಜಾಗ ಸೇರಿದಂತೆ ಮೂರು ಆಯ್ಕೆಗಳಿವೆ. ಕನಕಪುರ ರಸ್ತೆಯ ಎರಡು ಸೈಟ್‌ಗಳು ಕ್ರಮವಾಗಿ 4,800 ಮತ್ತು 5,000 ಎಕರೆ ವಿಸ್ತೀರ್ಣ ಹೊಂದಿದ್ದರೆ, ನೆಲಮಂಗಲದ ನಿವೇಶನ 5,200 ಎಕರೆ ವಿಸ್ತೀರ್ಣದಲ್ಲಿದೆ. ಆದರೆ, ಕೆಐಎಡಿಬಿ ಅಧಿಕಾರಿಗಳ ಪ್ರಕಾರ ನೆಲಮಂಗಲಕ್ಕೆ ಹೋಲಿಸಿದರೆ ಕನಕಪುರ ರಸ್ತೆಯ ಭಾಗದಲ್ಲಿ ಸರ್ಕಾರಕ್ಕೆ ಭೂಸ್ವಾಧೀನ ಪ್ರಕ್ರಿಯೆ ಸುಲಭವಾಗಲಿದೆ. ಅಲ್ಲದೆ, ಇಲ್ಲಿನ ಎರಡು ಜಾಗಗಳು ಅಕ್ಕಪಕ್ಕದಲ್ಲೇ ಇರುವುದರಿಂದ ಇವೆರಡನ್ನೂ ಒಗ್ಗೂಡಿಸಿ ಸುಮಾರು 4,500 ರಿಂದ 5,000 ಎಕರೆ ಜಾಗವನ್ನು ವಿಮಾನ ನಿಲ್ದಾಣಕ್ಕೆ ಬೇಕಾದ ವಾಯುಪ್ರದೇಶದ ನಿಯಮಗಳಿಗೆ ತಕ್ಕಂತೆ ಅಚ್ಚುಕಟ್ಟಾಗಿ ವಿನ್ಯಾಸಗೊಳಿಸಲು ಸಾಧ್ಯವಾಗುತ್ತದೆ ಎನ್ನಲಾಗಿದೆ.

ನೆಲಮಂಗಲ ಭಾಗಕ್ಕಿಂತ ಕನಕಪುರ ರಸ್ತೆಯನ್ನೇ ಆಯ್ಕೆ ಮಾಡಿಕೊಳ್ಳಲು ಮತ್ತೊಂದು ಪ್ರಮುಖ ಕಾರಣವೆಂದರೆ ಪರಿಸರ ಮತ್ತು ಬೇಡಿಕೆ. ನೆಲಮಂಗಲದ ಜಾಗದಲ್ಲಿ ಹಸಿರು ಹೊದಿಕೆ ಹಾಗೂ ಮರಗಿಡಗಳು ಹೆಚ್ಚಾಗಿವೆ. ಇದು ಪರಿಸರ ಅನುಮತಿ ಪಡೆಯುವಲ್ಲಿ ಸವಾಲಾಗಬಹುದು. ಮತ್ತೊಂದೆಡೆ ದಕ್ಷಿಣ ಬೆಂಗಳೂರು ಭಾಗದಲ್ಲಿ ವಿಮಾನ ನಿಲ್ದಾಣದ ಅಗತ್ಯ ಮತ್ತು ಬೇಡಿಕೆ ಹೆಚ್ಚಾಗಿದ್ದು, ಇದು ತಮಿಳುನಾಡಿನ ಹೊಸೂರು ಮತ್ತು ಸುತ್ತಮುತ್ತಲ ಕೈಗಾರಿಕಾ ಪ್ರದೇಶಗಳಿಗೂ ಉತ್ತಮ ಸಂಪರ್ಕ ಒದಗಿಸಲಿದೆ. ನೆಲಮಂಗಲದಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುತ್ತದೆ ಎಂಬ ವಾದವಿದ್ದರೂ, ತಾಂತ್ರಿಕವಾಗಿ ದಕ್ಷಿಣ ಭಾಗವೇ ಹೆಚ್ಚು ಲಾಭದಾಯಕ ಎಂದು ವಿಶ್ಲೇಷಿಸಲಾಗಿದೆ.

ಈ ಯೋಜನೆಯ ಕಾರ್ಯಸಾಧ್ಯತೆಯನ್ನು ಅಧ್ಯಯನ ಮಾಡಲು ಸರ್ಕಾರವು ಸಿಂಗಾಪುರ ಮೂಲದ ಮೈನ್ಹಾರ್ಡ್ ಇಪಿಸಿಎಂ ಎಂಬ ಸಲಹಾ ಸಂಸ್ಥೆಗೆ 4.96 ಕೋಟಿ ರೂ.ಗಳ ಗುತ್ತಿಗೆ ನೀಡಿದೆ. ಈ ಸಂಸ್ಥೆಯು ಮುಂದಿನ ಐದು ತಿಂಗಳಲ್ಲಿ ಮೂರೂ ಸ್ಥಳಗಳ ತಾಂತ್ರಿಕ ಸವಾಲುಗಳು, ವಾಯುಪ್ರದೇಶದ ನಿರ್ಬಂಧಗಳು ಮತ್ತು ಭವಿಷ್ಯದ ಪ್ರಯಾಣಿಕರ ದಟ್ಟಣೆಯ ಬಗ್ಗೆ ಸಮಗ್ರ ವರದಿ ನೀಡಲಿದೆ. ತಾಂತ್ರಿಕ ವರದಿ ಬಂದ ನಂತರವೇ ಅಂತಿಮ ನಿರ್ಧಾರ ಪ್ರಕಟವಾಗಲಿದ್ದರೂ, ಸರ್ಕಾರದ ಪ್ರಸ್ತುತ ತಯಾರಿಗಳನ್ನು ಗಮನಿಸಿದರೆ ಕನಕಪುರ ರಸ್ತೆಯಲ್ಲೇ ಎರಡನೇ ವಿಮಾನ ನಿಲ್ದಾಣ ತಲೆಯೆತ್ತುವ ಸಾಧ್ಯತೆಗಳು ದಟ್ಟವಾಗಿವೆ.

# ಅನಿಲ ಸಿಲಿಂಡರ್ ಕಾಳಸಂತೆ ಮಾರಾಟಗಾರರ ವಿರುದ್ಧ ಕಠಿಣ ಕ್ರಮ: ಸಚಿವ ಕೆ.ಎಚ್. ಮುನಿಯಪ್ಪ ಎಚ್ಚರಿಕೆ

**ರಾಜ್ಯದಲ್ಲಿ ಗೃಹಬಳಕೆ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗಿಲ್ಲ**



**ಬೆಂಗಳೂರು, ಮೇ 9:** ರಾಜ್ಯದಲ್ಲಿ ಗೃಹಬಳಕೆ ಸಿಲಿಂಡರ್‌ಗಳ ಪೂರೈಕೆಯಲ್ಲಿ ಸದ್ಯಕ್ಕೆ ಯಾವುದೇ ವ್ಯತ್ಯಯ ಉಂಟಾಗುತ್ತಿಲ್ಲ. ಆದರೆ ವಾಣಿಜ್ಯ ಸಿಲಿಂಡರ್‌ಗಳ ಲಭ್ಯತೆಯಲ್ಲಿ ಸಮಸ್ಯೆ ಕಂಡುಬರುತ್ತಿದ್ದು, ಇದನ್ನು ಬಂಡವಾಳ ಮಾಡಿಕೊಂಡು ಯಾರಾದರೂ ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಎಚ್ಚರಿಸಿದ್ದಾರೆ.

ರಾಜ್ಯದ ಜನತೆಗೆ ಭರವಸೆ ನೀಡಿದ ಸಚಿವರು, ಮನೆಗಳಲ್ಲಿ ಬಳಸುವ ಅಡುಗೆ ಅನಿಲ ವಿತರಣೆ ಸುಗಮವಾಗಿ ನಡೆಯುತ್ತಿದೆ. ಹೀಗಾಗಿ ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಆದರೆ ಹೋಟೆಲ್ ಹಾಗೂ ವಿವಿಧ ಉದ್ದಿಮೆಗಳ ಚಟುವಟಿಕೆಗಳಿಗೆ ಬಳಸುವ ವಾಣಿಜ್ಯ ಸಿಲಿಂಡರ್‌ಗಳ ಪೂರೈಕೆಯಲ್ಲಿ ತುಸು ಏರುಪೇರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈ ಕೊರತೆಯನ್ನು ನೀಗಿಸಲು ತೈಲ ಕಂಪನಿಗಳೊಂದಿಗೆ ನಿರಂತರ ಮಾತುಕತೆ ನಡೆಸಲಾಗುತ್ತಿದ್ದು, ಶೀಘ್ರದಲ್ಲೇ ಪೂರೈಕೆ ವ್ಯವಸ್ಥೆ ಸರಿಪಡಿಸಲಾಗುವುದು ಎಂದು ಅವರು ತಿಳಿಸಿದರು.

ಅಕ್ರಮ ಮಾರಾಟಗಾರರಿಗೆ ದಂಡ ಹಾಗೂ ಮೊಕದ್ದಮೆ ಸಿಲಿಂಡರ್ ಅಭಾವದ ಸಂದರ್ಭದಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡುವುದು ಅಥವಾ ಸಿಲಿಂಡರ್‌ಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸುವುದು ಕಂಡುಬಂದಲ್ಲಿ ಅಂತಹ ಏಜೆನ್ಸಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಅಷ್ಟೇ ಅಲ್ಲದೆ, ಗೃಹ ಬಳಕೆಗಾಗಿ ಮೀಸಲಿಟ್ಟಿರುವ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಗಳಿಗೆ ಬಳಸುತ್ತಿರುವುದು ಕಂಡುಬಂದರೂ ಸಹ ಕಠಿಣ ಕಾನೂನು ಕ್ರಮ ಅನಿವಾರ್ಯವಾಗಲಿದೆ ಎಂದು ಮುನಿಯಪ್ಪ ಸ್ಪಷ್ಟಪಡಿಸಿದರು. ಹಾಗೂ ಮುಂದಿನ ತಿಂಗಳು ಇಂದಿರಾ ಕಿಟ್ ನೀಡಲು ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ.

## ಮುಂದಿನ ತಿಂಗಳು ಇಂದಿರಾ ಕಿಟ್ ವಿತರಣೆ

ಎಸ್.ಐ.ಆರ್ ಪ್ರಕ್ರಿಯೆ ಬಗ್ಗೆ ದೇಶದಾದ್ಯಂತ ಗೊಂದಲವಿದ್ದು, ಮತಪಟ್ಟಿ ಪರಿಷ್ಕರಣೆ ವೇಳೆ ಕೆಲ ಸಮುದಾಯಗಳ ಮತಗಳನ್ನು ಉದ್ದೇಶಪೂರ್ವಕವಾಗಿ ತೆಗೆದುಹಾಕುವ ಆರೋಪಗಳ ಬಗ್ಗೆ ಕಾಂಗ್ರೆಸ್ ಎಚ್ಚರಿಕೆಯಿಂದ ಕೆಲಸ ಮಾಡಲಿದೆ ಎಂದು ಕೆ.ಎಚ್. ಮುನಿಯಪ್ಪ ಹೇಳಿದರು. ಬೂತ್ ಮಟ್ಟದಲ್ಲಿ ಬಿ.ಎಲ್.ಓ–1 ಹಾಗೂ ಬಿ.ಎಲ್.ಓ–2 ವ್ಯವಸ್ಥೆಯನ್ನು ಜವಾಬ್ದಾರಿಯಿಂದ ನಿರ್ವಹಿಸುವಂತೆ ಸೂಚನೆ ನೀಡಲಾಗಿದೆ ಎಂದರು.

ಮಮತಾ ಬ್ಯಾನರ್ಜಿ ಉಲ್ಲೇಖಿಸಿ ಮಾತನಾಡಿದ ಸಚಿವರು, ಲಕ್ಷಾಂತರ ಮತಗಳನ್ನು ಮತಪಟ್ಟಿಯಿಂದ ತೆಗೆದುಹಾಕುವ ಘಟನೆಗಳು ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುತ್ತವೆ ಎಂದು ಆತಂಕ ವ್ಯಕ್ತಪಡಿಸಿದರು. ಹಣಬಲ, ತೋಳ್ಬಲ ಅಥವಾ ತಿರುಚಿದ ಕ್ರಮಗಳಿಂದ ಜನರ ತೀರ್ಪು ಬದಲಾಗಬಾರದು ಈ ಬಾರಿ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷ ವಿಶೇಷ ಎಚ್ಚರಿಕೆ ವಹಿಸಲಿದೆ ಎಂದು ಸ್ಪಷ್ಟಪಡಿಸಿದರು.

ಕೇರಳದಲ್ಲಿ ಶೇ.100ರಷ್ಟು ಶಿಕ್ಷಣ ಪ್ರಮಾಣ ಇರುವುದರಿಂದ ಅಲ್ಲಿ ಇಂತಹ ಅಕ್ರಮಗಳಿಗೆ ಅವಕಾಶ ಕಡಿಮೆ ಎಂದು ಸಚಿವರು ಅಭಿಪ್ರಾಯಪಟ್ಟರು.

ರಾಜ್ಯದ ಜನರು ಅತ್ಯಂತ ವಿದ್ಯಾವಂತರಾಗಿದ್ದು, ಸಾಮಾನ್ಯ ಕಾರ್ಮಿಕರೂ ಉನ್ನತ ಶಿಕ್ಷಣ ಪಡೆದವರಾಗಿರುವುದರಿಂದ ಮತದಾರರ ಹಕ್ಕುಗಳ ಬಗ್ಗೆ ಹೆಚ್ಚಿನ ಜಾಗೃತಿ ಇದೆ ಎಂದು ಹೇಳಿದರು.

# ಯಡಿಯೂರಪ್ಪ ನೇತೃತ್ವದಲ್ಲಿ ಮತ್ತೊಮ್ಮೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ: ಅಭಿಮಾನೋತ್ಸವದಲ್ಲಿ ಘೋಷಣೆ

**ಚಿತ್ರದುರ್ಗ, ಮೇ 9:** ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರಾಜಕಾರಣಕ್ಕೆ ಪ್ರವೇಶಿಸಿ 50 ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿಂದು ಯಡಿಯೂರಪ್ಪ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಕೇಂದ್ರ ಸಚಿವ ಅಮಿತ್ ಶಾ ಮತ್ತಿತರ ಗಣ್ಯರು ಯಡಿಯೂರಪ್ಪ ಸಾಧನೆಯನ್ನು ಶ್ಲಾಘಿಸಿದರು. ಯಡಿಯೂರಪ್ಪ ನೇತೃತ್ವದಲ್ಲಿ ಮತ್ತೊಮ್ಮೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್ ವಾಲ್, ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದರಾದ ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ಕೋಟ ಶ್ರೀನಿವಾಸ ಪೂಜಾರಿ, ಬಿ.ವೈ.ರಾಘವೇಂದ್ರ ಶಾಸಕರು, ಸುತ್ತೂರು ಮಠದ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ, ಆದಿಚುಂಚನಗಿರಿ ಮಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ, ಸಿರಿಗೆರೆಯ ತರಳಬಾಳು ಮಠದ ಸ್ವಾಮೀಜಿ ಸೇರಿ, ನಾಡಿನ ವಿವಿಧ ಮಠಾಧೀಶರು, ಗಣ್ಯರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಯಡಿ ಯೂರಪ್ಪ ಅವರನ್ನು ಗೌರವಿಸಲಾಯಿತು. ಇದೇ ವೇಳೆ ಹಲವು ಸ್ವಾಮೀಜಿಗಳನ್ನು ಬಿ.ವೈ. ವಿಜಯೇಂದ್ರ ಹಾಗೂ ವ್ ಂ ತ್ತಿ ತ್ ರ್ ರ್ ಂ ಸನ್ಮಾನಿಸಿದರು.



**ಪ್ರತಿಮ ನಾಯಕ ಬಿಎಸ್‌ವೈ: ಪ್ರಲ್ಹಾದ್ ಜೋಶಿ**

ಪ್ರಲ್ಹಾದ್ ಜೋಶಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ಜಗತ್ತು ಕಂಡ ಅತ್ಯಂತ ನೇರ ವ್ಯಕ್ತಿತ್ವದ ನಾಯಕ. ಗುಜರಾತ್‌ನ ಮುಖ್ಯಮಂತ್ರಿಯಾಗಿ 13 ವರ್ಷ ಹಾಗೂ ದೇಶದ ಪ್ರಧಾನಿಯಾಗಿ ಕಳೆದ 12 ವರ್ಷಗಳಿಂದ ಅಧಿಕಾರ ನಡೆಸುತ್ತಿರುವ ಅವರು, ವಿಶ್ವಾಸಾರ್ಹ ನಾಯಕರಾಗಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಸುವೇಂದು ಅಧಿಕಾರಿ ನೇತೃತ್ವದಲ್ಲಿ ಹೊಸ ಸರ್ಕಾರ ರಚನೆಯಾಗಿದೆ. ಈ ಮೂಲಕ ಬಿಜೆಪಿ ಮತ್ತು ಎನ್‌ಡಿಎ ದೇಶದ 21 ರಾಜ್ಯಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಬಿ ಎಸ್ ಯಡಿಯೂರಪ್ಪ ನೇತೃತ್ವದಲ್ಲಿ ಕರ್ನಾಟಕದಲ್ಲೂ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದರು.

ಯಡಿಯೂರಪ್ಪ ಅವರು 50 ವರ್ಷಗಳ ಸಾರ್ವಜನಿಕ ಜೀವನದಲ್ಲಿ ರೈತ ಪರವಾಗಿ ಹೋರಾಟ ನಡೆಸಿದ್ದಾರೆ. ಈ ನಾಡು ಕಂಡ ಅಪ್ರತಿಮ ನಾಯಕರು. ರೈತರ ಜೊತೆಗೆ ಕೂಲಿ ಕಾರ್ಮಿಕರು, ಜೀತದಾಳುಗಳು, ಬಗರ್ ಹುಕುಂ ಸಾಗುವಳಿದಾರರ ಪರವಾಗಿಯೂ ಹೋರಾಟ ನಡೆಸಿ, ನ್ಯಾಯ ಕೊಡಿಸಿದ್ದ ಧೀಮಂತ ನಾಯಕ ಎಂದು ಹೇಳಿದರು. ಇದೇ ವೇಳೆ ಯಡಿಯೂರಪ್ಪ ಅವರ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಶೇಷ ಪ್ರೀತಿ ಮತ್ತು ಅಭಿಮಾನ ವಿದ್ದು, ಕಾರ್ಯಕ್ರಮ ಕ್ಕಾಗಿ ಸಂದೇಶ ಕಳುಹಿಸಿದ್ದಾರೆ ಎಂದು ಪ್ರಧಾನಿ ಅವರ ಸಂದೇಶ ವಾಚಿಸಿದರು.

ಬಿ.ವೈ. ವಿಜಯೇಂದ್ರ ಮಾತನಾಡಿ, ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳಲು ರಾಜ್ಯದ ಮೂಲೆ ಮೂಲೆಗಳಿಂದ ಅಭಿಮಾನಿಗಳು ಆಗಮಿಸಿರುವುದು ಸುವರ್ಣಾಕ್ಷರದಲ್ಲಿ ಬರೆದಿಡುವ ಕ್ಷಣವಾಗಿದೆ. 50 ವರ್ಷಗಳ ರಾಜ್ಯ ರಾಜಕಾರಣದಲ್ಲಿ ಯಡಿಯೂರಪ್ಪ ಅವರು ಬಿಜೆಪಿಯನ್ನು ಕಟ್ಟಿ ಬೆಳೆಸಲು ಅಪಾರ ಶ್ರಮಿಸಿದ್ದಾರೆ ಎಂದರು.

ಸಂಸದ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ಯಡಿಯೂರಪ್ಪ ಅವರು ರೈತ ಪರವಾಗಿ ಹೋರಾಟ ನಡೆಸಿ, ಸಂಕಷ್ಟದಲ್ಲಿದ್ದ ರೈತರಿಗೆ ನೆರವಾಗಿದ್ದರು. 50 ವರ್ಷಗಳ ರಾಜಕಾರಣದಲ್ಲಿ ಬಿಜೆಪಿಯನ್ನು ಕಟ್ಟಿ, ಬೆಳೆಸುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ ಎಂದರು.

ಸಂಸದ ಬಸವರಾಜ ಬೊಮ್ಮಾಯಿ, ಬರಗಾಲ ಇದ್ದ ಸಂದರ್ಭದಲ್ಲಿ ನಾಡಿಗೆ ನೀರುಣಿಸುವ ಯೋಜನೆಯಾದ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಅನುಷ್ಠಾನಕ್ಕಾಗಿ ಶ್ರಮಿಸಿದ್ದವರು ಬಿ.ಎಸ್. ಯಡಿಯೂರಪ್ಪ ಅವರು ಎಂದು ತಿಳಿಸಿದರು. ಇದೇ ವೇಳೆ ರೈತಗೀತೆ ಸೇರಿದಂತೆ ವಿವಿಧ ಗೀತೆಗಳನ್ನು ಪ್ರಸ್ತುತಪಡಿಸಲಾಯಿತು.

# ಮಡೆನೂರಿನ 100 ಎಕರೆ ಅರಣ್ಯಭೂಮಿ ಸ್ವಾಧೀನಕ್ಕೆ ಈಶ್ವರ ಖಂಡ್ರೆ ಸೂಚನೆ



**ಬೆಂಗಳೂರು, ಮೇ 9:** ಹಾಸನ ನಗರಕ್ಕೆ ಹೊಂದಿಕೊಂಡಂತೆ ಇರುವ ಶಾಂತಿಗ್ರಾಮ ಹೋಬಳಿಯ ಮಡೆನೂರಿನ ಸರ್ವೆ ನಂ. 298ರಲ್ಲಿರುವ 100 ಎಕರೆ ಅರಣ್ಯ ಭೂಮಿಯನ್ನು ಕೂಡಲೇ ವಶಕ್ಕೆ ಪಡೆದು ನೆಡುತೋಪು ಬೆಳೆಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿಂದು ಹಿರಿಯ ಅರಣ್ಯಾಧಿಕಾರಿ ಗಳೊಂದಿಗೆ ಸಭೆ ನಡೆಸಿದ ಅವರು, ನಿನ್ನೆ ತಾವು ಬೇಲೂರು ಪ್ರವಾಸದ ವೇಳೆ ಹಾಸನದ ಕೃಷಿ ಸಂಶೋಧನಾ ಕೇಂದ್ರ ಮತ್ತು ಜೈವಿಕ ಇಂಧನ ಘಟಕದ ಸಮೀಪ ಇರುವ ಕೋಟ್ಯಂತರ ರೂ. ಬೆಲೆಬಾಳುವ ಭೂಮಿಯ ವೀಕ್ಷಣೆ ಮಾಡಿದ್ದು ಬೆಲೆ ಬಾಳುವ ಈ ಅರಣ್ಯ ಭೂಮಿ ಸಂರಕ್ಷಣೆಗೆ ಆದೇಶ ನೀಡಿದರು.

ನೂರು ಎಕರೆ ಭೂಮಿಯನ್ನು 2015–16ರಲ್ಲಿ ಅರಣ್ಯ ಇಲಾಖೆ ಪರವಾಗಿ ಮ್ಯುಟೇಷನ್ ಮಾಡಿ ಪಹಣಿ ಆಗಿರುತ್ತದೆ. ಆದಾಗ್ಯೂ ಇಲ್ಲಿ ಈವರೆಗೆ ಅರಣ್ಯೀಕರಣ ಮಾಡಿ ಉತ್ತಮ ಶ್ವಾಸತಾಣ ನಿರ್ಮಿಸದ ಬಗ್ಗೆ ಬೇಸರ ವ್ಯಕ್ತಪಡಿಸಿದರು. 2024ರಲ್ಲೇ ತಾವು ಸದರಿ ಜಮೀನನ್ನು ವಶಕ್ಕೆ ಪಡೆದು ಸ್ಥಳೀಯ ಪ್ರಭೇದದ ಗಿಡ ನೆಡುವಂತೆ ಸೂಚಿಸಿದ್ದರೂ ಈವರೆಗೆ ಕ್ರಮ ವಹಿಸದೆ ವಿಳಂಬ ಮಾಡಿರುವ ಬಗ್ಗೆ ವರದಿ ನೀಡಲು ಸಚಿವರು ಸೂಚಿಸಿದರು.

2015ರ ನಂತರ ಆಗಿರುವ ಎಲ್ಲ ಅರಣ್ಯಭೂಮಿ ಒತ್ತುವರಿ ತೆರವಿಗೆ ತಾವು ಹಲವು ಬಾರಿ ಸೂಚಿಸಿದ್ದರೂ ಕ್ರಮ ಏಕೆ ಆಗಿಲ್ಲ ಎಂದು ಪ್ರಶ್ನಿಸಿದ ಅವರು, ಪ್ರಸ್ತುತ ಖಾಲಿ ಇರುವ ಅರಣ್ಯ ಭೂಮಿಯನ್ನು ಕೂಡಲೇ ವಶಕ್ಕೆ ಪಡೆದು ಬೇಲಿ ಹಾಕಲು ಮತ್ತು ಒತ್ತುವರಿ ಆಗಿರುವ ಅರಣ್ಯ ಭೂಮಿ ತೆರವಿಗೆ ಕರ್ನಾಟಕ ಅರಣ್ಯ ಕಾಯಿದೆಯ ಸೆಕ್ಷನ್ 64 ಎ ಪ್ರಕ್ರಿಯೆ ನಡೆಸುವಂತೆಯೂ ನಿರ್ದೇಶನ ನೀಡಿದರು.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಕಾಲಘಟ್ಟದಲ್ಲಿ ನಾವು ಅನೇಕ ಪ್ರಕೃತಿ ವಿಕೋಪ ಎದುರಿಸುತ್ತಿದ್ದು, ನಗರ ಪ್ರದೇಶದ ಬಳಿ ಇರುವ ಬೆಲೆಬಾಳುವ ಅರಣ್ಯ ಭೂಮಿಯಲ್ಲಿ ಗಿಡಮರ ಬೆಳೆಸದಿದ್ದರೆ ಮುಂದಿನ ಪೀಳಿಗೆ ಉಸಿರಾಡಲೂ ಕಷ್ಟಪಡಬೇಕಾಗುತ್ತದೆ. ಪ್ರಕೃತಿ ಪರಿಸರ ಉಳಿಸಲು ರಾಜ್ಯದ ಎಲ್ಲ ನಗರ ಮತ್ತು ಪಟ್ಟಣ ಪ್ರದೇಶದ ಸಮೀಪ ಇರುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತದಳ ಮತ್ತು ಸಾಮಾಜಿಕ ಅರಣ್ಯ) ಮನೋಜ್ ತ್ರಿಪಾಠಿ, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶಿವಶಂಕರ್, ಡಿಸಿಎಫ್ ರವೀಂದ್ರ ಕುಮಾರ್ ಮತ್ತಿತರರು ಹಾಜರಿದ್ದರು.

# ಹೊಸ ವಾಹನ ನೋಂದಣಿಗೆ ಆಧಾರ್ ಕೆವೈಸಿ ಕಡ್ಡಾಯ ಸೂಕ್ತ: ಸಚಿವ ಕೃಷ್ಣಬೈರೇಗೌಡ ಅಭಿಮತ



**ಬೆಂಗಳೂರು, ಮೇ 9:** ಹೊಸ ವಾಹನಗಳ ನೋಂದಣಿಗೆ ಆಧಾರ್ ಕೆವೈಸಿ ಕಡ್ಡಾಯ ಮಾಡುವುದು ಸೂಕ್ತ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ.

ವಿಕಾಸಸೌಧದಲ್ಲಿ ಸಕಾಲ ಸೇವೆಗಳಿಗೆ ಮತ್ತಷ್ಟು ವೇಗ ನೀಡುವ ಸಂಬಂಧ ಅಧಿಕಾರ ಸಭೆ ನಡೆಸಿದರು. ಚಾಲನಾ ಪರವಾನಗಿ ಪಡೆಯಲು ಆಧಾರ್ ಕಡ್ಡಾಯ ಮಾದರಿಯಲ್ಲಿ ವಾಹನಗಳ ನೋಂದಣಿಗೆ ಇ–ಕೆವೈಸಿ ಏಕೆ ಕಡ್ಡಾಯ ಮಾಡಬಾರದು ಎಂದು ಅಧಿಕಾರಿಗಳನ್ನು ಪ್ರಶ್ನೆ ಮಾಡಿದ್ದಾರೆ.ಸಕಾಲ ಸೇವೆಯನ್ನು ನಿಗದಿತ ಸಮಯಕ್ಕೆ ನೀಡಬೇಕು. ಈ ನಿಟ್ಟಿನಲ್ಲಿ ಸಕಾಲಕ್ಕೆ ಸಂಬಂಧಿಸಿದ ಎಲ್ಲಾ ಇಲಾಖೆಯ ಸೇವೆ ಬಗೆಗಿನ ದತ್ತಾಂಶ ಬೆರಳ ತುದಿಯಲ್ಲಿ ಇರಬೇಕು. ಅದಕ್ಕಾಗಿಯೇ ಕಳೆದ ಎರಡೂವರೆ ವರ್ಷಗಳಿಂದ ನಿರಂತರವಾಗಿ ಸಕಾಲ ಕುಟುಂಬ ಡೇಟಾಬೇಸ್ ಅಪ್ಡೇಟ್ ಮಾಡಲಾಗುತ್ತಿದೆ. ಕೆಲವು ಸ್ೀವ್ಗ್ಳ್ನ್ನ್ ಆಟೋಮೇಷನ್ ಮಾಡುವ ಅಗತ್ಯವಿದೆ. ಸ್ೀವ್ಗ್ಳ್ ಆಟೋಮೇಷನ್ ಮಾಡಿದರೆ ಜನರಿಗೆ ಸೇವೆ ಶೀಘ್ರವಾಗಿ ಸಿಗಲಿದೆ. ಲಂಚ, ವಿಳಂಬ, ಶೋಷಣೆಯಿಂದ ಜನರಿಗೆ ಮುಕ್ತಿ ಸಿಗಲಿದೆ. ಸಕಾಲದಲ್ಲಿ ಹತ್ತಾರು ಇಲಾಖೆಗಳಿದ್ದು ಹಲವು ಸೇವೆಗಳನ್ನು ಹೊರಗುತ್ತಿಗೆ ನೀಡಲಾಗಿದ್ದು, ಅವರ ಸಂಬಳವನ್ನು ಕುಟುಂಬ ಆಯಪ್ ಮೂಲಕ ನೀಡುವಂತಾಗಬೇಕು. ವೃತ್ತಿ ತೆರಿಗೆ ಸಹ ಕುಟುಂಬ ಆಪ್ ವ್ಯಾಪ್ತಿಗೆ ತರಬೇಕು. ವೃತ್ತಿ ತೆರಿಗೆಯನ್ನು ಆನ್‌ಲೈನ್ ಮೂಲಕವೇ ಗ್ರಹಿಸುತ್ತಿರುವುದರಿಂದ ಇಂಟಿಗ್ರೇಟ್ ಮಾಡುವುದು ಕಷ್ಟವೇನಲ್ಲ. ಜಿಎಸ್ಟಿಯನ್ನೂ ಇಂಟಿಗ್ರೇಟ್ ಮಾಡಬಹುದು ಎಂದು ಸಚಿವರು ಅಭಿಪ್ರಾಯಪಟ್ಟರು.

# ಆರ್ಟ್ ಆಫ್ ಗಿವಿಂಗ್‌ನಿಂದ ವೃದ್ಧಾಶ್ರಮದಲ್ಲಿ ಕಾರ್ಯಕ್ರಮ




**ಬೆಂಗಳೂರು, ಮೇ 9:** ಆರ್ಟ್ ಆಫ್ ಗಿವಿಂಗ್‌ನ 13ನೇ ವರ್ಷಾಚರಣೆ ಪ್ರಯುಕ್ತ ವಿಜಯನಗರದ ಮಹಾಲಕ್ಷ್ಮಿ ವೃದ್ಧಾಶ್ರಮದಲ್ಲಿ ವಿಶಿಷ್ಟ ಕಾರ್ಯಕ್ರಮವೊಂದನ್ನು ಇಂದು ಆಯೋಜಿಸಲಾಗಿತ್ತು.

ವೃದ್ಧಾಶ್ರಮದಲ್ಲಿ ಐವತ್ತು ವೃದ್ಧರಿದ್ದು, ಅವರನ್ನು ಖುಷಿಪಡಿಸಲು ವಿವಿಧ ಗೀತೆಗಳ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಆರ್ಟ್ ಆಫ್ ಗಿವಿಂಗ್‌ನ ಸ್ವಯಂಸೇವಕರು ಭಾವಗೀತೆ, ಚಿತ್ರಗೀತೆ, ಭಕ್ತಿಗೀತೆಗಳನ್ನು ವೃದ್ಧರಿಗಾಗಿ ಹಾಡಿದರು. ತಮಗೆ ಇಂತಹುದೇ ಗೀತೆ ಬೇಕು ಎಂದು ವೃದ್ಧರೇ ಬಯಕೆ ವ್ಯಕ್ತಪಡಿಸಿದರು. ವೃದ್ಧಾಶ್ರಮದ ಶೈಲಜಾ ಎಂಬುವರು 'ಇಂದು ಎನಗೆ ಗೋವಿಂದ' ಹಾಡು ಹೇಳಿ ರಂಜಿಸಿದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಆರ್ಟ್ ಆಫ್ ಗಿವಿಂಗ್‌ನ ಪೋಷಕರಾದ ಜಯಲಕ್ಷ್ಮಿ ಅವರು ಈ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದರು.

ವೃದ್ಧರಿಗೆ ಹಣ್ಣುಗಳನ್ನು ಆರ್ಟ್ ಆಫ್ ಗಿವಿಂಗ್‌ನ ಸ್ವಯಂಸೇವಕರು ವಿತರಿಸಿದರು.

ಕೌಶಲ್ಯ ಅಭಿವೃದ್ಧಿ ತರಬೇತುದಾರರಾದ ಮಮತಾ ಎನ್ ಸ್ವಾಮಿ, ಗುತ್ತಿಗೆದಾರ ಬಸವರಾಜ್, ವೃಷಭಾವತಿನಗರ ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷ ಕೆ.ಎಚ್. ಚಿನ್ನಪ್ಪ ಮತ್ತು ಗೃಹಿಣಿ ಅನಿತಾ ಗುರುಪ್ರಸಾದ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ವೃದ್ಧರೊಂದಿಗೆ ಬೆರೆತು ಅವರ ಕಷ್ಟ ಸುಖಗಳನ್ನು ತಿಳಿದುಕೊಂಡರು.

ಆರ್ಟ್ ಆಫ್ ಗಿವಿಂಗ್‌ನ ವರ್ಷಾಚರಣೆಯ ಅಂಗವಾಗಿ ಇಂತಹ ಕಾರ್ಯಕ್ರಮ ಆಯೋಜಿಸಿದ್ದು ಉಪಯುಕ್ತವಾಗಿದೆ. ಜೀವನ ಸಂಧ್ಯಾಕಾಲದ ವೃದ್ಧರ ಮನಸ್ಸನ್ನು ಸಂತಸಪಡಿಸುವ ಇಂತಹ ಕಾರ್ಯಕ್ರಮ ವಿಶಿಷ್ಟವಾಗಿತ್ತು ಎಂದು ಶ್ರೀ ಮಹಾಲಕ್ಷ್ಮಿ ಶಿಕ್ಷಣ ಟ್ರಸ್ಟ್ ಕಾರ್ಯದರ್ಶಿ ಡಾ. ಗೋವಿಂದರಾಜು ಅವರು ಶ್ಲಾಘಿಸಿದರು

ಒಡಿಶಾದ ಭುವನೇಶ್ವರದ ಕಳಿಂಗಾ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರೀಯಲ್ ಟೆಕ್ನಾಲಜಿ ಮತ್ತು ಕಳಿಂಗಾ ಇನ್‌ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸ್‌ಸ್ ಸ್ಥಾಪಕರಾದ ಡಾ. ಅಚ್ಯುತ ಸಮಂತ ಅವರು ಆರ್ಟ್ ಆಫ್ ಗಿವಿಂಗ್ ಅನ್ನು ಆರಂಭಿಸಿದ್ದು, ಪ್ರತಿವರ್ಷ ವಿಶ್ವದಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ.

ಪ್ರತಿವರ್ಷ ಮೇ 17 ರಂದು ಆರ್ಟ್ ಆಫ್ ಗಿವಿಂಗ್‌ನ ವಾರ್ಷಿಕೋತ್ಸವ ಆಚರಿಸಲಾಗುತ್ತದೆ. ಈ ವರ್ಷದ ಎಓಜಿ ಘೋಷವಾಕ್ಯ 'ಶೇರ್ ಟು ಶೈನ್'ಆಗಿದ್ದು, ಇದಕ್ಕೆ ಪೂರಕವಾಗಿ ಹಲವಾರು ಕಾರ್ಯಕ್ರಮಗಳನ್ನು ಕರ್ನಾಟಕದಲ್ಲೂ ಹಮ್ಮಿಕೊಳ್ಳಲಾಗಿದೆ. ಮೇ 17 ರಂದು ಬೆಂಗಳೂರಿನ ಗಾಂಧಿಭವನದಲ್ಲಿ ಎಓಜಿ ವಾರ್ಷಿಕ ಕಾರ್ಯಕ್ರಮ ನಡೆಯಲಿದೆ.

# ವಿದೇಶಿ ಮಾರುಕಟ್ಟೆಯಲ್ಲೂ ಕಲಬುರಗಿ ರೊಟ್ಟಿ ಲಭ್ಯ: ಸಚಿವ ಪ್ರಿಯಾಂಕ್ ಖರ್ಗೆ ಹೆಮ್ಮೆ

**ಆಸ್ಟ್ರೇಲಿಯಾ, ಅಮೆರಿಕ ಹಾಗೂ ಕೆನಡಾಕ್ಕೆ ರಫ್ತಿಗೆ ಹಸಿರುನಿಶಾನೆ**

**ಅಂಚೆ ಮೂಲಕ ವಿದೇಶಕ್ಕೆ ಅಂಚೆ ಮೂಲಕ ರಫ್ತು ಮಾಡಲು ಅಂಚೆ ಸಿಬ್ಬಂದಿಗೆ ಬಾಕ್ಸ್ ಹಸ್ತಾಂತರ**

**ಬೆಂಗಳೂರು, ಮೇ 9:** ಸ್ಥಳೀಯವಾಗಿ ಸ್ವಸಹಾಯ ಸಂಘಗಳ ಮೂಲರಕ ತಯಾರಿಸುವ ಕಲಬುರಗಿ ರೊಟ್ಟಿ ಇದೀಗ ವಿದೇಶದಲ್ಲಿ ಲಭ್ಯವಾಗುತ್ತಿದೆ. ಒಂದುವರೆ ವರ್ಷದಲ್ಲೇ ಕಲಬುರಗಿ ರೊಟ್ಟಿ ವಿದೇಶಿ ಮಾರುಕಟ್ಟೆಯಲ್ಲಿ ಸಿಗುವಂತೆ ಕ್ರಮವಹಿಸಲಾಗಿದ್ದು ಇದು ಹೆಮ್ಮೆಯ ವಿಷಯವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲಬುರಗಿ ನಗರದ ಅರಿವಿನ ಮನೆ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ವಿವಿಧ ದೇಶಗಳಿಗೆ ರಫ್ತು ಮಾಡಲು ಸಿದ್ಧಪಡಿಸಿದ್ದ ರೊಟ್ಟಿ ಬಾಕ್ಸ್‌ಗಳಿಗೆ ಹಸಿರುನಿಶಾನೆ ತೋರಿಸಿ, ಅಂಚೆ ಮೂಲಕ ವಿದೇಶಕ್ಕೆ ಅಂಚೆ ಮೂಲಕ ರಫ್ತು ಮಾಡಲು ಅಂಚೆ ಸಿಬ್ಬಂದಿಗೆ ಹಸ್ತಾಂತರ ಮಾಡಿ ಅವರು ಮಾತನಾಡಿದರು.

ಕಳೆದ ಒಂದುವರೆ ವರ್ಷದ ಹಿಂದೆ "ಕಲಬುರಗಿ ರೊಟ್ಟಿ " ಹೆಸರಿನಲ್ಲಿ ಬ್ರ್ಯಾಂಡ್ 100 ರೊಟ್ಟಿ ಸ್ವಸಹಾಯ ಸಂಘಗಳ ಮೂಲಕ ಒಟ್ಟು 1000 ಮಹಿಳೆಯರು ರೊಟ್ಟಿ ತಯಾರಿಸುತ್ತಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಕಲಬುರಗಿ ರೊಟ್ಟಿ ಪುಣೆ ಮೂಲದ ರಫ್ತು ಕಂಪನಿಯ ಮೂಲಕ ಅಮೇರಿಕಾ, ಕೆನಡಾ ಹಾಗೂ ಆಸ್ಟ್ರೇಲಿಯಾಗಳಿಗೆ ರಫ್ತು ಮಾಡಲು ಕ್ರಮವಹಿಸಲಾಗಿದೆ. ಇದು ನಮ್ಮ ಕಲಬುರಗಿ ಯ ಹೆಮ್ಮೆಯ ವಿಷಯವಾಗಿದೆ ಎಂದರು. ಪ್ರತಿ ತಿಂಗಳು ಅಮೆರಿಕ ಹಾಗೂ ಆಸ್ಟ್ರೇಲಿಯಾಗೆ ತಲಾ 10,000 ಹಾಗೂ ಕೆನಡಾ ದೇಶಕ್ಕೆ 5000 ಕಲಬುರಗಿ ಜೋಳದ ರೊಟ್ಟಿ ರಫ್ತು ಮಾಡಲು ಕ್ರಮವಹಿಸಲಾಗಿದೆ. ಮುಂದಿನ ದಿನಗಳಲ್ಲಿ ಈ ಸಂಖ್ಯೆ ಹೆಚ್ಚಾಗಲಿದೆ.

**ಕಲಬುರಗಿ ರೊಟ್ಟಿ ಟಿಪ್ಪಣಿ:**

ಕಲಬುರಗಿ ರೊಟ್ಟಿಯನ್ನು "ಕಲಬುರಗಿ ರೊಟ್ಟಿ" ಬ್ರ್ಯಾಂಡ್ ಮೂಲಕ ಅಮೇಜಾನ್, ಕಲಬುರಗಿ ರೊಟ್ಟಿ ವೆಬ್ ಸೈಟ್, ಫ್ರಾಂಚೈಸಿ ಹಾಗೂ ಲೋಕಲ್ ಮಾರ್ಕೆಟ್ ಮೂಲಕ ಮಾರಾಟ ಮಾಡಲಾಗುತ್ತಿದೆ.

**ಕಲಬುರಗಿ ರೊಟ್ಟಿ ಬ್ರ್ಯಾಂಡ್ ನಲ್ಲಿ 100 ಕ್ಕಿಂತ ಹೆಚ್ಚು ಸ್ವಸಹಾಯ ಸಂಘಗಳು ಹಾಗೂ 1000 ಕ್ಕಿಂತ ಹೆಚ್ಚು ಮಹಿಳೆಯರು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ.**

ಕಲಬುರಗಿ ರೊಟ್ಟಿ ತಯಾರಿಸುವ ಮಹಿಳೆಯರು ಪ್ರತಿ ತಿಂಗಳು 15 ರಿಂದ 20 ಸಾವಿರ ರೂಪಾಯಿವರೆಗೂ ಆದಾಯ ಗಳಿಸುತ್ತಿದ್ದು, ಮದುವೆ ಹಾಗೂ ಇತರ ಸಮಾರಂಭಗಳಿಂದ ಹೆಚ್ಚು ಆಧಾಯಗಳಿಸುತ್ತಿದ್ದಾರೆ.

**ಕಲಬುರಗಿ ರೊಟ್ಟಿಯನ್ನು ದೇಶದ ಎಲ್ಲಾ ಕಡೆಗಳಲ್ಲಿ ಮಾರಾಟ ಮಾಡುತ್ತಿದ್ದು, ವಿದೇಶಗಳಿಗೆ ಕಳುಹಿಸುವ ಪ್ರಯತ್ನ ಫಲಕಾರಿಯಾಗಿದೆ.**

ಕಲಬುರಗಿ ರೊಟ್ಟಿಯನ್ನು ವಿದೇಶಗಳಿಗೆ (ಆಸ್ಟ್ರೇಲಿಯಾ, ಕೆನಡಾ ಹಾಗೂ ಯು.ಎಸ್.ಎ) ರಫ್ತು ಮಾಡಲು ಪುಣೆ ಮೂಲದ ಅಶ್ತಮ್ ಟ್ರೇಡರ್ಸ್ ಜತೆ ಮಾತುಕತೆ ನಡೆದಿದ್ದು, ಮೊದಲ ಹಂತದಲ್ಲಿ ಒಂದು ವರ್ಷಕ್ಕೆ ಒಂದು ಲಕ್ಷ ರೊಟ್ಟಿಗಳನ್ನು ಆಸ್ಟ್ರೇಲಿಯಾ ಹಾಗೂ ಯು.ಎಸ್.ಎ.ಗೆ ರಫ್ತು ಮಾಡಲಾಗುವುದು. ಪ್ರತಿ ತಿಂಗಳು 10,000–25,000 ರೊಟ್ಟಿಗಳನ್ನು ರಫ್ತು ಮಾಡಲಾಗುವುದು. ಈಗಾಗಲೇ ಜಿಲ್ಲಾಢಳಿತದಿಂದ ಅಶ್ತಮ್ ಟ್ರೇಡರ್ ರವರೊಂದಿಗೆ ಒಪ್ಪಂದ ಸಿದ್ಧಪಡಿಸಲಾಗಿದೆ. ಉತ್ಪಾದಕರಿಗೆ ಆರ್ಥಿಕ ಅನುದಾನ

ಇದರಿಂದಾಗಿ ಕಲಬುರಗಿ ರೊಟ್ಟಿ ಉತ್ಪಾದಕರಿಗೆ ಹೆಚ್ಚಿನ ಆದಾಯ ಸಿಗಲಿದೆ. ಸದ್ಯ ಮಾರುಕಟ್ಟೆಯಲ್ಲಿ ಒಂದು ರೊಟ್ಟಿಗೆ ರೂ. 10/– 12/– ಬೆಲೆ ಇದ್ದು, ರಫ್ತು ಮಾಡುವುದರಿಂದ ವಿದೇಶದಲ್ಲಿ ಒಂದು ರೊಟ್ಟಿಗೆ ರೂ. 25, 30ರೂ. ಬೆಲೆ ಸಿಗಲಿದ್ದು, ಶೇ.80 100 ಹೆಚ್ಚಿನ ಆದಾಯ ಕಲಬುರಗಿ ರೊಟ್ಟಿ ಉತ್ಪಾದಕರಿಗೆ (ಮಹಿಳೆಯರಿಗೆ) ದೊರಕಲಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಸಂಘಟನಾ ಶಕ್ತಿಯಿಂದ ರಾಜಕೀಯದಲ್ಲಿ ಪ್ರವರ್ಧಮಾನಕ್ಕೆ ಬಂದ ಸುವೇಂದು

**ಕೋಲ್ಕತ್ತಾ, ಮೇ 9:** ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿಯಾಗಿ ಬಿಜೆಪಿ ಹಿರಿಯ ನಾಯಕ ಸುವೇಂದು ಅಧಿಕಾರಿ ಅವರು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ವಿಧಾನಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಬಿಜೆಪಿ, ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಸರ್ಕಾರ ರಚಿಸುತ್ತಿದೆ. ಟಿಎಂಸಿ ನಾಯಕಿ, ಪಶ್ಚಿಮ ಬಂಗಾಳ ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರಿಗೆ ಪ್ರಬಲ ಪೈಪೋಟಿ ನೀಡುತ್ತಾ ಬಂದಿರುವ ಸುವೇಂದು ಅಧಿಕಾರಿ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಸಂಘಟನೆ ಮತ್ತು ಪಕ್ಷವನ್ನು ಅಧಿಕಾರದ ಗದ್ದುಗೆಗೆ ತರುವಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಇದೀಗ ಪಶ್ಚಿಮ ಬಂಗಾಳದ 9ನೇ ಸಿಎಂ ಆಗಿ ಅಧಿಕಾರ ಸ್ವೀಕರಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಸಿಪಿಐ(ಎಂ) ನೇತೃತ್ವದ ಎಡರಂಗವು 1977ರಿಂದ 2011ರವರೆಗೆ ಸತತ 34 ವರ್ಷಗಳ ಕಾಲ ಆಳ್ವಿಕೆ ನಡೆಸಿತ್ತು.



ಆದರೆ 2011ರ ವಿಧಾನಸಭಾ ಚುನಾವಣೆಯಲ್ಲಿ, ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಎಡರಂಗವನ್ನು ಸೋಲಿಸುವ ಮೂಲಕ 34 ವರ್ಷಗಳ ದೀರ್ಘ ಆಳ್ವಿಕೆಗೆ ಅಂತ್ಯ ಹಾಡಿತು. ಇದೀಗ ಟಿಎಂಸಿ ಆಳ್ವಿಕೆ ಅಂತ್ಯವಾಗಿದ್ದು ಬಿಜೆಪಿ ಅಧಿಕಾರ ಪಡೆದಿದೆ. ಈ ಮೂಲಕ ಸುವೇಂದು ಅಧಿಕಾರಿ ಪಶ್ಚಿಮ ಬಂಗಾಳದ ಮೊದಲ ಬಿಜೆಪಿ ಸರ್ಕಾರದ ಮುಖ್ಯಮಂತ್ರಿಯಾಗಿದ್ದಾರೆ. ಮಾಜಿ ಕೇಂದ್ರ ಸಚಿವ ಸಿಸಿರ್ ಅಧಿಕಾರಿ ಅವರ ಪುತ್ರರಾದ ಸುವೇಂದು ಅಧಿಕಾರಿ, ಕಾಂಗ್ರೆಸ್ ಪಕ್ಷದ ವಿದ್ಯಾರ್ಥಿ ಘಟಕದ ಮೂಲಕ ರಾಜಕೀಯ ಪ್ರವೇಶಿಸಿದರು. ಬಳಿಕ ಟಿಎಂಸಿ ಸೇರಿದರು. ಮಮತಾ ಬ್ಯಾನರ್ಜಿ ಅವರ ಆಪ್ತ ವಲಯದಲ್ಲಿದ್ದ ಸುವೇಂದು 2007ರ ನಂದಿಗ್ರಾಮ್ ಭೂಸ್ವಾಧೀನ ವಿರೋಧಿ ಹೋರಾಟದ ಮೂಲಕ ಮುಂಚೂಣಿಗೆ ಬಂದವರು. ಟಿಎಂಸಿ ಸರ್ಕಾರದಲ್ಲಿ ಸಾರಿಗೆ, ನೀರಾವರಿ ಮತ್ತು ಜಲಸಂಪನ್ಮೂಲ ಸಚಿವರಾಗಿ ಕೆಲಸ ಮಾಡಿದ್ದರು. 2020ರ ಡಿಸೆಂಬರ್ ವೇಳೆಗೆ ಟಿಎಂಸಿ ತೊರೆದು ಬಿಜೆಪಿ ಸೇರಿದರು. 2021ರ ಚುನಾವಣೆಯಲ್ಲಿ ನಂದಿಗ್ರಾಮ್ ಕ್ಷೇತ್ರದಲ್ಲಿ ಮಮತಾ ಬ್ಯಾನರ್ಜಿ ಅವರನ್ನು ಸೋಲಿಸಿ ಗಮನ ಸೆಳೆದಿದ್ದರು. 2026ರ ವಿಧಾನಸಭಾ ಚುನಾವಣೆಯಲ್ಲಿ ಭವಾನಿಪುರ ಕ್ಷೇತ್ರದಿಂದ ಗೆಲುವು ಸಾಧಿಸಿದ್ದಾರೆ. ಆದರೆ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಯಲ್ಲಿ ಭಬಾನಿಪುರ ಕ್ಷೇತ್ರದಲ್ಲಿ ಅಧಿಕ ಮತದಾರರ ಹೆಸರು ಡಿಲೀಟ್ ಆಗಿರುವುದು ಸದ್ಯ ತೀವ್ರ ಚರ್ಚೆಗೆ ಎಡೆ ಮಾಡಿಕೊಟ್ಟಿದೆ.

# ಹೈದರಾಬಾದ್‌ಗೆ ಇಂದು ಮೋದಿ ಭೇಟಿ 9,400 ಕೋಟಿ ರೂ.ಯೋಜನೆಗೆ ಚಾಲನೆ

**ಹೈದರಾಬಾದ್, ಮೇ 9:** ತೆಲಂಗಾಣ ರಾಜ್ಯದ ಮೂಲಸೌಕರ್ಯದ ಅಭಿವೃದ್ಧಿಯಲ್ಲಿ ಮತ್ತೊಂದು ಪ್ರಮುಖ ಮೈಲಿಗಲ್ಲು ಅನಾವರಣಗೊಳ್ಳಲಿದೆ. ರಾಜ್ಯದ ಅಭಿವೃದ್ಧಿಯನ್ನು ಉತ್ತೇಜಿಸಲು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೈದರಾಬಾದ್‌ನಲ್ಲಿ 9,400 ಕೋಟಿ ರೂ. ಮೌಲ್ಯದ ಹಲವಾರು ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಮಾಡಲಿದ್ದಾರೆ. ಈ ಕಾರ್ಯಕ್ರಮವು ಭಾನುವಾರ ಮಧ್ಯಾಹ್ನ 2.30ಕ್ಕೆ ಗಚ್ಚಿಬೌಲಿಯ HIC ಕೇಂದ್ರದಲ್ಲಿ ನಡೆಯಲಿದೆ. ಹೈದರಾಬಾದ್–ಪಣಜಿ ಆರ್ಥಿಕ ಕಾರಿಡಾರ್ (NH–167)ನ ಭಾಗವಾಗಿ ಗುಡೇಬಲ್ಲೂರಿನಿಂದ ಮೆಹಬೂಬ್‌ನಗರವರೆಗಿನ 4 ಪಥಗಳ ರಸ್ತೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದು ತೆಲಂಗಾಣ ಮತ್ತು ಕರ್ನಾಟಕದ ನಡುವಿನ ಸಾರಿಗೆ ಸಂಪರ್ಕವನ್ನು ಸುಧಾರಿಸುತ್ತದೆ. ಕೈಗಾರಿಕಾ ವಲಯವನ್ನು ಬಲಪಡಿಸುವ ಮೂಲಕ ಜಹೀರಾಬಾದ್ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಅಡಿಪಾಯ ಹಾಕಲಾಗುವುದು. ಇದು ಸ್ಥಳೀಯವಾಗಿ ಸಾವಿರಾರು ಜನರಿಗೆ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ. ಕಾಜಿಪೇಟೆ–ವಿಜಯವಾಡ ಮಲ್ಟಿ–ಟ್ರ್ಯಾಕಿಂಗ್ ಯೋಜನೆಯ (ರೂ. 1,250 ಕೋಟಿ) ವಿವಿಧ ವಿಭಾಗಗಳ ಪೂರ್ಣಗೊಂಡ ಕಾಮಗಾರಿಗಳನ್ನು ಪ್ರಧಾನಿ ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಕಾಜಿಪೇಟೆಯಲ್ಲಿ 300 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ರೈಲ್ ಅಂಡರ್ ರೈಲ್ ಬೈಪಾಸ್ ಮಾರ್ಗವನ್ನು ಸಹ ಉದ್ಘಾಟಿಸಲಾಗುವುದು. ವಾರಂಗಲ್‌ನಲ್ಲಿ ಅತ್ಯಾಧುನಿಕ 'ಪಿಎಂ ಮಿತ್ರ ಪಾರ್ಕ್' (ಕಾಕತೀಯ ಮೆಗಾ ಜವಳಿ ಪಾರ್ಕ್) ಪ್ರಧಾನಿ ಉದ್ಘಾಟಿಸಲಿದ್ದಾರೆ. ಇದು ಜವಳಿ ಉದ್ಯಮದಲ್ಲಿ ತೆಲಂಗಾಣಕ್ಕೆ ಅಂತಾರಾಷ್ಟ್ರೀಯ ಮನ್ನಣೆ ತರಲಿದೆ. ಹೈದರಾಬಾದ್‌ನ ಮಲ್ಕಾಪುರದಲ್ಲಿ ಇಂಡಿಯನ್ ಆಯಿಲ್ ಕಾರ್ಪೊರೇಷನ್ ನಿರ್ಮಿಸಿರುವ ಅತ್ಯಾಧುನಿಕ ಗ್ರೀನ್‌ಫೀಲ್ಡ್ ಪಿಓಎಲ್ ಟರ್ಮಿನಲ್ ಅನ್ನು ಸಹ ಈ ಸಂದರ್ಭದಲ್ಲಿ ಉದ್ಘಾಟಿಸಲಾಗುವುದು. ತೆಲಂಗಾಣದ ರಾಜ್ಯಪಾಲ ಎಸ್.ಪಿ.ಶುಕ್ಲಾ, ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ಅಶ್ವಿನಿ ವೈಷ್ಣವ್, ಜಿ. ಕಿಶನ್ ರೆಡ್ಡಿ ಮತ್ತು ಇತರ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಷಣ ಮಾಡಲಿದ್ದಾರೆ.



ಕೇಂದ್ರ ಸಚಿವ ವಿ.ಸೋಮಣ್ಣ ಮಹಾಸ್ವಾಮೀಜಿಯವರನ್ನು ತುಮಕೂರಿನ ಚಿಕ್ಕನಾಯಕನಹಳ್ಳಿಯಲ್ಲಿ ಭೇಟಿಮಾಡಿ ಆಶೀರ್ವಾದ ಪಡೆದರು, ಕರಡಿಗಾವಿ ಮಠದ ಪೂಜ್ಯ ಶಿವಶಂಕರ ಶಿವಯೋಗಿ ಮಹಾಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ 1108 ಜಗದ್ಗುರು ಮೃತ್ಯುಂಜಯ ದೇಶಿಕೇಂದ್ರ ಸಭಾಂಗಣ ಜಗದ್ಗುರು ಮೃತ್ಯುಂಜಯ ದೇಶಿಕೇಂದ್ರ ಸಭಾಭವನದಲ್ಲಿ ಗುರುವಂದನೆ ಕಾರ್ಯಕ್ರಮ ನಡೆಯಲಿದೆ. .

# ಹಾರ್ಮುಜ್ ಕುರಿತು ವಿಶ್ವಸಂಸ್ಥೆಯಲ್ಲಿ ಅಮೆರಿಕ ನಿರ್ಣಯ ಮಂಡನೆ ಜಾಗತಿಕ ಜಲಮಾರ್ಗವನ್ನು ನಿಯಂತ್ರಿಸುವ ಬಗ್ಗೆ ಇರಾನ್‌ಗೆ ಎಚ್ಚರಿಕೆ

**ರೋಮ್, ಮೇ 9:** ಹಾರ್ಮುಜ್ ಜಲಸಂಧಿಯನ್ನು ನಿಯಂತ್ರಿಸುವ ಇರಾನ್‌ನ ಪ್ರಯತ್ನಗಳ ವಿರುದ್ಧ ಅಮೆರಿಕ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ನಿರ್ಣಯವನ್ನು ಮಂಡಿಸಲು ಸಜ್ಜಾಗಿದೆ, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಟೆಹ್ರಾನ್ ನಿರ್ಣಾಯಕ ಹಡಗು ಮಾರ್ಗದಲ್ಲಿ ಪ್ರಾಬಲ್ಯ ಸಾಧಿಸಲು ಅವಕಾಶ ನೀಡುವುದು "ಅಪಾಯಕಾರಿ ಮತ್ತು ಕಾನೂನುಬಾಹಿರ" ಜಾಗತಿಕ ಪೂರ್ವನಿದರ್ಶನವನ್ನು ಸ್ಥಾಪಿಸುತ್ತದೆ ಎಂದು ಎಚ್ಚರಿಸಿದ್ದಾರೆ. ಇಟಾಲಿಯನ್ ಅಧಿಕಾರಿಗಳೊಂದಿಗಿನ ಸಭೆಗಳ ನಂತರ ರೋಮ್ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರುಬಿಯೊ, ಪರಮಾಣು ಮಾತುಕತೆಗಳ ಕುರಿತು ಇರಾನ್ನ ಪ್ರತಿಕ್ರಿಯೆಗಾಗಿ ವಾಷಿಂಗ್ಟನ್ ಕಾಯುತ್ತಿದೆ ಮತ್ತು ಅದು ಗಂಭೀರ ರಾಜತಾಂತ್ರಿಕತೆಗೆ ದಾರಿ ಮಾಡಿಕೊಡಬಹುದು ಎಂದು ಆಶಿಸಿದರು. ಇಟಾಲಿಯನ್ ಅಧಿಕಾರಿಗಳೊಂದಿಗಿನ ಸಭೆಗಳ ನಂತರ ಮಾತನಾಡಿದ ರುಬಿಯೊ, ಹಾರ್ಮುಜ್ ಜಲಸಂಧಿಯ ಮೇಲೆ ನಿಯಂತ್ರಣವನ್ನು ಪ್ರತಿಪಾದಿಸಲು ಇರಾನ್ನ ಪ್ರಯತ್ನಗಳು ಅಪಾಯಕಾರಿ ಮತ್ತು ಕಾನೂನುಬಾಹಿರ ಪೂರ್ವನಿದರ್ಶನವನ್ನು ಪ್ರತಿನಿಧಿಸುತ್ತವೆ ಎಂದು ಎಚ್ಚರಿಸಿದರು. "ಇರಾನ್ ಈಗ ಅಂತರರಾಷ್ಟ್ರೀಯ ಜಲಮಾರ್ಗವನ್ನು ನಿಯಂತ್ರಿಸುತ್ತದೆ ಎಂದು ಜಗತ್ತು ಒಪ್ಪಿಕೊಳ್ಳಲು ಸಿದ್ಧವಾಗಿದ್ದರೆ, ಸಿದ್ಧರಾಗಿರಿ, ತಮ್ಮ ಅಂತರರಾಷ್ಟ್ರೀಯ ಜಲಮಾರ್ಗಗಳಲ್ಲಿ ಅದೇ ರೀತಿ ಮಾಡಲು ಪ್ರಾರಂಭಿಸಲಿರುವ ಇತರ 10 ದೇಶಗಳಿವೆ" ಎಂದು ಅವರು ಹೇಳಿದರು, ಈ ಕ್ರಮವನ್ನು "ಕಾನೂನುಬಾಹಿರ ಮತ್ತು ಸ್ವೀಕಾರಾರ್ಹವಲ್ಲ" ಎಂದು ಕರೆದರು. ಅಮೆರಿಕ ವಿಶ್ವಸಂಸ್ಥೆಯಲ್ಲಿ ನಿರ್ಣಯವನ್ನು ಮಂಡಿಸಲು ಸಜ್ಜಾಗಿದೆ, ಇದರಲ್ಲಿ ವಿಶ್ವ ಮತ್ತು ವಿಶ್ವಸಂಸ್ಥೆಯು ಭದ್ರತಾ ಮಂಡಳಿಯ ಮೂಲಕ ಮತ ಚಲಾಯಿಸಲು ಮತ್ತು ಜಲಸಂಧಿಯನ್ನು ಗಣಿಗಾರಿಕೆ ಮಾಡಲು ನಾವು ಅವರಿಗೆ ಅವಕಾಶ ನೀಡುವುದಿಲ್ಲ ಎಂದು ಹೇಳಲು ಅವಕಾಶವನ್ನು ಹೊಂದಿರುತ್ತದೆ, ಜಲಸಂಧಿಯನ್ನು ನಿಯಂತ್ರಿಸಲು ಪ್ರಯತ್ನಿಸಲು ನಾವು ಅವರಿಗೆ ಅವಕಾಶ ನೀಡುವುದಿಲ್ಲ. ಜಲಸಂಧಿಯ ಮೇಲಿನ ಇರಾನಿನ ಹಕ್ಕುಗಳನ್ನು ಔಪಚಾರಿಕವಾಗಿ ತಿರಸ್ಕರಿಸಲು ಅಮೆರಿಕವು ಯುಎನ್ ಭದ್ರತಾ ಮಂಡಳಿಯ ನಿರ್ಣಯವನ್ನು ಅನುಸರಿಸುತ್ತಿದೆ ಎಂದು ಅವರು ಘೋಷಿಸಿದರು, ರಷ್ಯಾ ಮತ್ತು ಚೀನಾ ನಿಲುವು ತೆಗೆದುಕೊಳ್ಳುವಂತೆ ಅಥವಾ ನಿರ್ಣಯಕ್ಕೆ ತಮ್ಮನ್ನು ತಾವು ಅಡ್ಡಿಯಾಗಿ ಬಹಿರಂಗಪಡಿಸುವಂತೆ ಸವಾಲು ಹಾಕಿದರು. "ರಷ್ಯಾ ಅಥವಾ ಚೀನಾ ಅಥವಾ ಇನ್ನಾವುದೇ ದೇಶವು ಅದನ್ನು ವೀಟೋ ಚಲಾಯಿಸಲು ನಿರ್ಧರಿಸಿದರೆ, ಅಡಚಣೆ ಏನೆಂದು ನಿಮಗೆ ತಿಳಿದಿದೆ"



ಎಂದು ಅವರು ಹೇಳಿದರು.

# ತಿಂಗಳಲ್ಲಿ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆಗೆ ಪರಿಹಾರ: ಕೆ.ಎಚ್. ಮುನಿಯಪ್ಪ

**ಬೆಂಗಳೂರು, ಮೇ 9:** ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ವಿಚಾರ ತಿಂಗಳಲ್ಲಿ ಬಗೆಹರಿಯುತ್ತದೆ ಎಂದು ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಸಂಪುಟ, ನಾಯಕತ್ವ ಬದಲಾವಣೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಎಲ್ಲವೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ.ತಿಂಗಳಲ್ಲಿ ಬಗೆಹರಿಯುತ್ತದೆ. ಮುಂದುವರಿಯುತ್ತಾರಾ?. ಬದಲಾಗುತ್ತಾರಾ ಅವರೇ ತಿಳಿಸುತ್ತಾರೆ ಎಂದು ಸ್ಪಷ್ಟಪಡಿಸಿದರು.ನಿನ್ನೆ ನಡೆದ ಎಸ್‌ಐಆರ್ ಸಂಬಂಧ ಸಿಎಂ ಸಭೆ ವಿಚಾರವಾಗಿ ಮಾತನಾಡಿ, ಇಡೀ ದೇಶದಲ್ಲಿ ಗೊಂದಲ ಇದೆ. ಸಂಘ ಸಂಸ್ಥೆಗಳ ಜೊತೆ ನಿನ್ನೆ ಸಭೆ ಆಗಿದೆ. ದುರುಪಯೋಗ, ತಡೆಗಟ್ಟುವಿಕೆ ಬಗ್ಗೆ ಚರ್ಚೆ ಆಯ್ತು. ಮತಗಳನ್ನು ತೆಗೆಯುವಂತದ್ದು ಇಡೀ ದೇಶದಲ್ಲಿ ಸಂಶಯಾಸ್ಪದ ಮೂಡಿಸುತ್ತದೆ. ಮತಪಟ್ಟಿ ಪರಿಷ್ಕರಣೆ ಆಗಲಿ, ಬೇಡ ಅನ್ನುವುದಿಲ್ಲ. ಬೇಕು ಅನ್ನೋರನ್ನು ಉಳಿಸುವುದು, ಬೇಡ ಅನ್ನೋರನ್ನು ತೆಗೆಯುವುದು ಆಗ್ತಿದೆ. ಮತದಾರರ ಪಟ್ಟಿ ಪರಿಷ್ಕರಣೆ ಆಗಲಿ. ರಾಜಕೀಯ ಪಕ್ಷಗಳು ಜವಾಬ್ದಾರಿಯಿಂದ ನಿರ್ವಹಿಸಬೇಕು.ತಮಿಳುನಾಡಿನಲ್ಲಿ ಸರ್ಕಾರ ರಚನೆಗೆ ಸರ್ಕಸ್ ವಿಚಾರವಾಗಿ ಮಾತನಾಡಿ, ಸರ್ಕಾರ ರಚನೆಗೆ ಅವಕಾಶ ಕೊಡಬೇಕು. ನಂತರ ಬಹುಮತ ಸಾಬೀತು ಪಡಿಸಬಹುದು. ರಾಜ್ಯಪಾಲರು ಅನುಮತಿ ಕೊಟ್ಟರೆ ಸಂವಿಧಾನಕ್ಕೆ ಗೌರವ ಕೊಟ್ಟಂತೆ ಆಗುತ್ತದೆ. ಇದು ಸಂವಿಧಾನಕ್ಕೆ ಅಪಮಾನ ಮಾಡಿದ ಹಾಗೆ. ಒಂದು ವಾರ 15 ದಿನಗಳ ಕಾಲ ಅವಕಾಶ ಕೊಡಬೇಕು. ಜನರಿಗೆ ಅಪಮಾನ ಮಾಡಿದ



ರೀತಿ ಆಗುತ್ತದೆ ಎಂದರು.

## ರಾಜ್ಯ ಕಾಂಗ್ರೆಸ್ ಸರ್ಕಾರದ ಬಗ್ಗೆ ಜನ ಬೇಸತ್ತಿದ್ದಾರೆ: ಎಚ್‌ಡಿಕೆ

# ಬಿಜೆಪಿ–ಜೆಡಿಎಸ್ ಮೈತ್ರಿಯ ಜನಪರ ಸರ್ಕಾರ ಅಧಿಕಾರಕ್ಕೆ ತರಲು ಮನವಿ

**ತುಮಕೂರು, ಮೇ 9:** ಪ್ರಸ್ತುತ ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿಗೆ ಜನರು ಬೇಸತ್ತಿದ್ದಾರೆ. ಮುಂದಿನ ದಿನಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಜನಪರ ಸರ್ಕಾರವನ್ನು ಅಧಿಕಾರಕ್ಕೆ ತರಲು ಜನರು ಆಶೀರ್ವದಿಸಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ತಾಲ್ಲೂಕಿನ ಮುಳಕುಂಟೆ ಗ್ರಾಮದಲ್ಲಿ ನಡೆದ ಶ್ರೀ ವಿಜಯ ಚೌಡೇಶ್ವರಿ ದೇವಿ ಜಾತ್ರಾ ಮಹೋತ್ಸವದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದ್ದು, ಜನರು ಉತ್ತಮ ಆಡಳಿತವನ್ನು ಬಯಸುತ್ತಿದ್ದಾರೆ. ಹೀಗಾಗಿ ಮುಂಬರುವ ಚುನಾವಣೆಗಳಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟವನ್ನು ಬೆಂಬಲಿಸುವ ಮೂಲಕ ಜನಪರ ಸರ್ಕಾರ ರಚಿಸಲು ಸಹಕರಿಸಬೇಕು ಎಂದು ತಿಳಿಸಿದರು.



ಕಳೆದ ಲೋಕಸಭಾ ಚುನಾವಣೆಯಲ್ಲಿ ಕ್ಷೇತ್ರದಿಂದ ವಿ. ಸೋಮಣ್ಣ ಅವರನ್ನು ದಾಖಲೆ ಮತಗಳ ಅಂತರದಿಂದ ಗೆಲ್ಲಿಸಿದ್ದಕ್ಕೆ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು. ಈ ಗೆಲುವಿನಿಂದಾಗಿ ಸೋಮಣ್ಣ ಮತ್ತು ತಮಗೆ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದೆ ಎಂದು ಸರಿಸಿದರು.ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಎನ್‌ಡಿಎ ಮೈತ್ರಿಕೂಟವು ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯಲ್ಲಿ ಐತಿಹಾಸಿಕ ಜಯ ಸಾಧಿಸಿದೆ. ಈ ಲಿತಾಂಶ ದೇಶದ ಮುಂದಿನ ರಾಜಕೀಯ ಬೆಳವಣಿಗೆಗಳಿಗೆ ದಿಕ್ಸೂಚಿಯಾಗಿದೆ ಎಂದು ಕುಮಾರಸ್ವಾಮಿ ಅಭಿಪ್ರಾಯಪಟ್ಟರು.

ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಬೇಕಿರುವ ಕಾರಣ ಜಾತ್ರಾ ಮಹೋತ್ಸವದ ಬಳಿಕ ಅವರು ತುರ್ತಾಗಿ ದೆಹಲಿಗೆ ಪ್ರಯಾಣ ಬೆಳೆಸಿದರು. ಕಾರ್ಯಕ್ರಮಕ್ಕೂ ಮುನ್ನ ಸಚಿವರು ವಿಜಯ ಚೌಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮೈತ್ರಿ ಪಕ್ಷಗಳ ನಾಯಕರು ಹಾಗೂ ಅಪಾರ ಸಂಖ್ಯೆಯ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬಸವನಗುಡಿ ಕ್ಲಬ್ ಅಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ

**ಬೆಂಗಳೂರು, ಮೇ 9:** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷರು ಆದ ಎಸ್ ಈ ಸುಧೀಂದ್ರ ಅವರು ಭಾನುವಾರ ನಡೆಯಲಿರುವ ಬಸವನಗುಡಿ ಕ್ಲಬ್ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿರುವ ನಿರಂಜನ ರಾವ್ ಅವರನ್ನು ಬೆಂಬಲಿಸಿ ಚುನಾಯಿಸಲು ಕ್ಲಬ್‌ನ ಎಲ್ಲಾ ಸದಸ್ಯರಲ್ಲಿ ಮನವಿ ಮಾಡಿದರು.



ಸರ್ಕಾರದ ಮಟ್ಟದಲ್ಲಿ ಮುಖ್ಯಮಂತ್ರಿಗಳು, ಗೃಹ ಸಚಿವ ಡಾ. ಜಿ ಪರಮೇಶ್ವರ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹಾಗೂ ರಾಷ್ಟ್ರ ಮಟ್ಟದಲ್ಲೂ ಸಹ ಎಲ್ಲಾ ನಾಯಕರಿಗೆ ಆಪ್ತರಾಗಿದ್ದು ಅವರುಗಳ ನಿಕಟ ಸಂಪರ್ಕದಲ್ಲಿರುವ ನಿರಂಜನ್ ಅವರು ಸರ್ಕಾರದಿಂದ ಎಲ್ಲಾ ಕೆಲಸಗಳನ್ನು ಮಾಡಿಸಿಕೊಂಡು ಬರುವ ಸಾಮರ್ಥ್ಯವನ್ನು ಹೊಂದಿದ್ದು ಅವರನ್ನು ಈ ಸ್ಥಾನಕ್ಕೆ ಆಯ್ಕೆ ಮಾಡುವುದು ಸೂಕ್ತವಾಗಿದ್ದು ಎಲ್ಲರೂ ಒಮ್ಮತದಿಂದ ಸಹಕರಿಸಬೇಕೆಂದು ವಿನಂತಿಸಿದರು. ನಿರಂಜನ್ ತಂಡದ ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿರುವ ಸುದರ್ಶನ್, ಸಹ ಕಾರ್ಯದರ್ಶಿ ಸ್ಥಾನಕ್ಕೆ ನರೇಂದ್ರ ಅವರನ್ನು ಮತ್ತು ಎಲ್ಲಾ ಸದಸ್ಯರನ್ನು ಆಯ್ಕೆ ಮಾಡಲು ಕೋರಿದರು.



# ಮುಂದಿನ ಸಿಡಿಎಸ್ ಆಗಿ ಲೆ.ಜನರಲ್ ಎನ್‌ಎಸ್ ರಾಜಾ ಸುಬ್ರಮಣಿ ವೈಸ್ ಆಡ್ಮಿರಲ್ ಆಗಿ ಕೃಷ್ಣ ಸ್ವಾಮಿನಾಥನ್ ನೇಮಕ

ನವದೆಹಲಿ: ಭಾರತದ ಮುಂದಿನ ರಕ್ಷಣಾ ಪಡೆಗಳ ಮುಖ್ಯಸ್ಥರಾಗಿ ಲೆಫ್ಟಿನೆಂಟ್ ಜನರಲ್ ಎನ್.ಎಸ್. ರಾಜಾ ಸುಬ್ರಮಣಿ (ನಿವೃತ್ತ) ಅವರನ್ನು ಕೇಂದ್ರ ಸರ್ಕಾರ ನೇಮಕ ಮಾಡಿದೆ. ಇದರ ಜೊತೆಗೆ ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರನ್ನು ಮುಂದಿನ ನೌಕಾಪಡೆಯ ಮುಖ್ಯಸ್ಥರನ್ನಾಗಿ ನೇಮಿಸಲಾಗಿದೆ. ಪ್ರಸ್ತುತ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರ ಅಧಿಕಾರಾವಧಿ ಮೇ 30ಕ್ಕೆ ಪೂರ್ಣಗೊಳ್ಳಲಿದೆ.

ಈ ಕುರಿತು ಅಧಿಕೃತ ಹೇಳಿಕೆ ಪ್ರಕಟಿಸಿರುವ ಕೇಂದ್ರ ರಕ್ಷಣಾ ಸಚಿವಾಲಯ, ಲೆಫ್ಟಿನೆಂಟ್ ಜನರಲ್ ಸುಬ್ರಮಣಿ ಅವರು ಭಾರತ ಸರ್ಕಾರದ ಮಿಲಿಟರಿ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಲಿದ್ದು, ಇದು ಅಧಿಕಾರ ವಹಿಸಿಕೊಂಡ ದಿನಾಂಕದಿಂದ ಮತ್ತು ಮುಂದಿನ ಆದೇಶದವರೆಗೆ ಅನ್ವಯಿಸುತ್ತದೆ ಎಂದು ತಿಳಿಸಲಾಗಿದೆ.

ಸುಬ್ರಮಣಿ ಅವರು 2025ರ ಸೆಪ್ಟೆಂಬರ್ 1ರಿಂದ ರಾಷ್ಟ್ರೀಯ ಭದ್ರತಾ ಮಂಡಳಿ ಸಚಿವಾಲಯದ ಮಿಲಿಟರಿ ಸಲಹೆಗಾರ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ. ಇದಕ್ಕೂ ಮೊದಲು ಅವರು 2024ರ ಜುಲೈನಿಂದ 2025 ಜುಲೈ 31ರವರೆಗೆ ಸೇನಾ ಸಿಬ್ಬಂದಿಯ ಉಪಾಧ್ಯಕ್ಷರಾಗಿದ್ದರು. 2023ರ ಮಾರ್ಚ್‌ನಿಂದ 2024ಜೂನ್‌ವರೆಗೆ ಸೆಂಟ್ರಲ್ ಕಮಾಂಡ್‌ನ ಜನರಲ್ ಆಫೀಸರ್ ಕಮಾಂಡಿಂಗ್ ಇನ್ ಚೀಫ್ ಆಗಿದ್ದರು.

ಜನರಲ್ ಆಫೀಸರ್ ರಾಷ್ಟ್ರೀಯ ರಕ್ಷಣಾ ಅಕಾಡೆಮಿ ಮತ್ತು ಭಾರತೀಯ ಮಿಲಿಟರಿ ಅಕಾಡೆಮಿಯ ಪದವೀಧರರಾಗಿರುವ ಅವರು, 1985ರ ಡಿಸೆಂಬರ್ 14ರಂದು ಗರ್ವಾಲ್ ರೈಫಲ್ಸ್‌ನ 8ನೇ ಬೆಟಾಲಿಯನ್‌ಗೆ ನಿಯೋಜನೆಗೊಂಡಿದ್ದರು.

40 ವರ್ಷಗಳ ಕಾಲ ತಮ್ಮ ವೃತ್ತಿಜೀವನದಲ್ಲಿ, ಲೆಫ್ಟಿನೆಂಟ್ ಜನರಲ್ ಅವರು ಆಪರೇಷನ್ ರೈನೋದ ಭಾಗವಾಗಿ ಅಸ್ಸಾಂನಲ್ಲಿ ದಂಗೆ ನಿಗ್ರಹದಲ್ಲಿ 16 ಗರ್ವಾಲ್ ರೈಫಲ್ಸ್, ಜಮ್ಮು ಮತ್ತು ಕಾಶ್ಮೀರದಲ್ಲಿ 168 ಪದಾತಿ ದಳ ಮತ್ತು ಸೆಂಟ್ರಲ್ ಸೆಕ್ಟರ್‌ನಲ್ಲಿ 17 ಪರ್ವತ ವಿಭಾಗ ಸವಾಲಿನ ಕಾರ್ಯಾಚರಣೆಯ ಕಮಾಂಡರ್ ಆಗಿದ್ದರು. ಪಶ್ಚಿಮ ಮುಂಭಾಗದಲ್ಲಿ ಭಾರತೀಯ ಸೇನೆಯ ಪ್ರಧಾನ ಸ್ಟ್ರೈಕ್ ಕಾರ್ಪ್ಸ್ ಆದ 2 ಕಾರ್ಪ್ಸ್ ಅನ್ನು ಕಮಾಂಡರ್ ಮಾಡಿದ ಹೆಗ್ಗಳಿಕೆಯೂ ಅವರಿಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಅವರ ವಿಶಿಷ್ಟ ಸೇವೆಗಾಗಿ, ಜನರಲ್ ಆಫೀಸರ್‌ಗೆ ಪರಮ ವಿಶಿಷ್ಟ ಸೇವಾ ಪದಕ, ಅತಿ ವಿಶಿಷ್ಟ ಸೇವಾ ಪದಕ, ಸೇನಾ ಪದಕ ಮತ್ತು ವಿಶಿಷ್ಟ ಸೇವಾ ಪದಕವನ್ನು ನೀಡಲಾಗಿದೆ.

**ನೌಕಾ ಮುಖ್ಯಸ್ಥರಾಗಿ ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್:**

ಸದ್ಯ ಮುಂಬೈನಲ್ಲಿ ಪಶ್ಚಿಮ ನೌಕಾ ಕಮಾಂಡರ್ ಆಗಿರುವ ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರು ಮುಂದಿನ ನೌಕಾ ಮುಖ್ಯಸ್ಥರಾಗಿ ನೇಮಿಸಿದ್ದು, ಮೇ 31ರಿಂದ ಅಧಿಕಾರ ವಹಿಸಿಕೊಳ್ಳಲಿದ್ದಾರೆ. 2028ರ ಡಿಸೆಂಬರ್ 31ರವರೆಗೆ ಹುದ್ದೆಯಲ್ಲಿ ಮುಂದುವರಿಯುವ ನಿರೀಕ್ಷೆಯಿದೆ. ಪ್ರಸ್ತುತ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕುಮಾರ್ ತ್ರಿಪಾಠಿ, ಪಿವಿಎಸ್‌ಎಂ, ಎವಿಎಸ್‌ಎಂ, ಎನ್‌ಎಂ, ಮೇ 31ರಂದು ಸೇವೆಯಿಂದ ನಿವೃತ್ತರಾಗಲಿದ್ದಾರೆ.



ಲೆಫ್ಟಿನೆಂಟ್ ಜನರಲ್ ಎನ್.ಎಸ್. ರಾಜಾ ಸುಬ್ರಮಣಿ



ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್

ವೈಸ್ ಅಡ್ಮಿರಲ್ ಸ್ವಾಮಿನಾಥನ್ 2025ರ ಜುಲೈ 31ರಿಂದ ಪಶ್ಚಿಮ ನೌಕಾ ಕಮಾಂಡ್‌ನ 34ನೇ ಧ್ವಜ ಅಧಿಕಾರಿ ಕಮಾಂಡಿಂಗ್ ಇನ್ ಚೀಫ್ ಆಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಇವರು 1987ರ ಜುಲೈ 1ರಂದು ಭಾರತೀಯ ನೌಕಾಪಡೆಗೆ ನಿಯೋಜನೆಯಾಗಿದ್ದರು ಮತ್ತು ಸಂವಹನ ಮತ್ತು ಎಲೆಕ್ಟ್ರಾನಿಕ್ ಯುದ್ಧದಲ್ಲಿ ಪರಿಣಿತರಾಗಿದ್ದಾರೆ.

ಪರಮ ವಿಶಿಷ್ಟ ಸೇವಾ ಪದಕ, ಅತಿ ವಿಶಿಷ್ಟ ಸೇವಾ ಪದಕ ಮತ್ತು ವಿಶಿಷ್ಟ ಸೇವಾ ಪದಕಗಳನ್ನು ಪಡೆದಿರುವ ಅಡ್ಮಿರಲ್, ತಮ್ಮ ನೌಕಾ ವೃತ್ತಿಜೀವನದಲ್ಲಿ ಕ್ಷಿಪಣಿ ಹಡಗುಗಳಾದ ಐಎನ್‌ಎಸ್ ವಿದ್ಯುತ್ ಮತ್ತು ವಿನಾಶ್, ಕ್ಷಿಪಣಿ ಕಾರ್ವೆಟ್ ಐಎನ್‌ಎಸ್ ಕುಲಿಶ್, ಮಾರ್ಗದರ್ಶಿ ಕ್ಷಿಪಣಿ, ವಿಧ್ವಂಸಕ ನೌಕೆ ಐಎನ್‌ಎಸ್ ಮೈಸೂರು ಮತ್ತು ವಿಮಾನವಾಹಕ ನೌಕೆ ಐಎನ್‌ಎಸ್ ವಿಕ್ರಮಾದಿತ್ಯಗಳ ಕಮಾಂಡ್ ಸೇರಿದಂತೆ ಹಲವಾರು ಪ್ರಮುಖ ಕಾರ್ಯಾಚರಣೆ, ಸಿಬ್ಬಂದಿ ಮತ್ತು ತರಬೇತಿ ನೇಮಕಾತಿಗಳನ್ನು ನಿರ್ವಹಿಸಿದ್ದಾರೆ.




ಟ್ರಿನಿಡಾಡ್ ಮತ್ತು ಟೊಬಾಗೋದಲ್ಲಿ ನಡೆದ ಒಡಂಬಡಿಕೆ ವಿನಿಮಯ ಸಮಾರಂಭದಲ್ಲಿ ಟ್ರಿನಿಡಾಡ್ ಮತ್ತು ಟೊಬಾಗೋ ಗಣರಾಜ್ಯದ ಪ್ರಧಾನ ಮಂತ್ರಿ ಕಮಲಾ ಪರ್ಸಾದ್–ಬಿಸ್ಸೆಸರ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವ ಸೀನ್ ಸೋಬರ್ಸ್ ಅವರೊಂದಿಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್

# ಸರ್ಕಾರಿ ಶಾಲೆಗಳ ಸ್ಥಿತಿಗತಿ ಕುರಿತು ದೆಹಲಿ ಕಾಂಗ್ರೆಸ್ ರೇಖಾ ಗುಪ್ತಾ ಸರ್ಕಾರವನ್ನು ಟೀಕಿಸಿದೆ

**ನವದೆಹಲಿ, ಮೇ 9:** ದೆಹಲಿ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ದೇವೇಂದರ್ ಯಾದವ್ ಅವರು ಶನಿವಾರ ದೆಹಲಿ ಸರ್ಕಾರವನ್ನು ಟೀಕಿಸಿದರು, ಬಿಜೆಪಿ ನೇತೃತ್ವದ ಆಡಳಿತವು ಒಂದು ವರ್ಷಕ್ಕೂ ಹೆಚ್ಚು ಕಾಲ ಅಧಿಕಾರದಲ್ಲಿದ್ದರೂ ಶಾಲಾ ಮೂಲಸೌಕರ್ಯ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಸುಧಾರಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ಕುಡಿಯುವ ನೀರಿನ ಲಭ್ಯತೆ, ಅಗ್ನಿ ಸುರಕ್ಷತೆ, ಶೌಚಾಲಯದ ಪರಿಸ್ಥಿತಿಗಳು, ಸ್ವಚ್ಛತೆ, ಶಿಕ್ಷಕರ ಕೊರತೆ ಮತ್ತು ಶಾಲೆಗಳಲ್ಲಿನ ಒಟ್ಟಾರೆ ಶೈಕ್ಷಣಿಕ ವಾತಾವರಣದಂತಹ ಸಮಸ್ಯೆಗಳನ್ನು ನಿರ್ಣಯಿಸಲು ಮುಖ್ಯಮಂತ್ರಿ ರೇಖಾ ಗುಪ್ತಾ ರೂಪ್ ನಗರದಲ್ಲಿರುವ ಸರ್ಕಾರಿ ಸರ್ವೋದಯ ವಿದ್ಯಾಲಯಕ್ಕೆ ಭೇಟಿ ನೀಡಬೇಕಾಗಿ ಬಂದಿರುವುದು ಆಶ್ಚರ್ಯಕರವಾಗಿದೆ ಎಂದು ಯಾದವ್ ಹೇಳಿದರು. ದೆಹಲಿಯಲ್ಲಿನ ಅನೇಕ ಸರ್ಕಾರಿ ಶಾಲೆಗಳು ಕಳಪೆ ಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ, ಕೆಲವು ಟಿನ್ ಶೆಡ್ಗಳಿಂದ ಕಾರ್ಯನಿರ್ವಹಿಸುತ್ತಿವೆ ಮತ್ತು ಇತರವು ವಿದ್ಯಾರ್ಥಿಗಳಿಗೆ ಸಾಕಷ್ಟು ಮೂಲಸೌಕರ್ಯ ಮತ್ತು ನೈರ್ಮಲ್ಯ ಸೌಲಭ್ಯಗಳ ಕೊರತೆಯನ್ನು ಹೊಂದಿವೆ



ಎಂದು ಅವರು ಆರೋಪಿಸಿದರು. ಕಾಂಗ್ರೆಸ್ ನಾಯಕರು ಹಿಂದಿನ ಅರವಿಂದ್ ಕೇಜ್ರಿವಾಲ್ ನೇತೃತ್ವದ ಎಎಪಿ ಸರ್ಕಾರವನ್ನು ಗುರಿಯಾಗಿಸಿಕೊಂಡು, ಶಿಕ್ಷಣ ಮತ್ತು ಆರೋಗ್ಯ ರಕ್ಷಣೆಯ "ದೆಹಲಿ ಮಾದರಿ"ಯ ಸುತ್ತಲಿನ ಅದರ ಹಕ್ಕುಗಳು ದಾರಿತಪ್ಪಿಸುವಂತಿವೆ ಎಂದು ಆರೋಪಿಸಿದರು. ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ಅಧಿಕಾರಾವಧಿಯಲ್ಲಿ ತರಗತಿ ನಿರ್ಮಾಣ ಮತ್ತು ದುರಸ್ತಿ ಯೋಜನೆಗಳಲ್ಲಿ ಅಕ್ರಮಗಳು ನಡೆದಿವೆ ಎಂದು ಅವರು ಆರೋಪಿಸಿದರು, ಅವರು ಸಂಬಂಧಿತ ವಿಷಯಗಳಲ್ಲಿ ಕಾನೂನು ಕ್ರಮಗಳನ್ನು ಎದುರಿಸುತ್ತಿದ್ದಾರೆ. ಸರ್ಕಾರಿ ಶಾಲೆಗಳ ರಚನಾತ್ಮಕ ಲೆಕ್ಕಪರಿಶೋಧನೆಗೆ ಆದೇಶಿಸುವ ಬದಲು, ಪ್ರಸ್ತುತ ದೆಹಲಿ ಸರ್ಕಾರವು ಮೂಲಸೌಕರ್ಯಗಳನ್ನು ಸುಧಾರಿಸುವುದು, ಖಾಲಿ ಇರುವ ಬೋಧನಾ ಹುದ್ದೆಗಳನ್ನು ಭರ್ತಿ ಮಾಡುವುದು ಮತ್ತು ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವತ್ತ ಗಮನಹರಿಸಬೇಕು ಎಂದು ಯಾದವ್ ಹೇಳಿದರು. ದೆಹಲಿಯಲ್ಲಿ ಸತತವಾಗಿ ಬಂದ ಸರ್ಕಾರಗಳು ಸರ್ಕಾರಿ ಶಾಲೆಗಳಲ್ಲಿನ ಪ್ರಾಂಶುಪಾಲರು, ಉಪ ಪ್ರಾಂಶುಪಾಲರು ಮತ್ತು ಶಿಕ್ಷಕರ ಕೊರತೆಯನ್ನು ಪರಿಹರಿಸಲು ವಿಫಲವಾಗಿವೆ ಎಂದು ಅವರು ಆರೋಪಿಸಿದರು, ಇದು ಅವರ ಪ್ರಕಾರ, ಶಿಕ್ಷಣದ ಗುಣಮಟ್ಟದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. 2025 ರಲ್ಲಿ ಬಿಜೆಪಿ ಸರ್ಕಾರ ರಚನೆಯಾದ ನಂತರ ಖಾಸಗಿ ಶಾಲಾ ಶುಲ್ಕಗಳು ಏರುತ್ತಿರುವುದು ಪೋಷಕರಲ್ಲಿ ಪ್ರತಿಭಟನೆಗೆ ಕಾರಣವಾಯಿತು ಎಂದು ದೆಹಲಿ ಕಾಂಗ್ರೆಸ್ ಹೇಳಿಕೊಂಡಿದೆ.

# ರಾಯಾನ್ ಇಂಟರ್‌ನ್ಯಾಷನಲ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್ಸ್ ವಿದ್ಯಾರ್ಥಿನಿ ಕು। ಭಾವಿನಿ ಮಲ್ಲಿಕ್ ಅಮೋಘ ಸಾಧನೆ

**ಮುಂಬಯಿ, ಮೇ.09:** ರಾಯಾನ್ ಇಂಟರ್‌ನ್ಯಾಷನಲ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್ಸ್‌ನ ಉಪನಗರ ಭಯಂದರ್ ಅಲ್ಲಿನ ಸೈಂಟ್ ಫ್ರಾನ್ಸಿಸ್ ಹೈಸ್ಕೂಲ್‌ನ ವಿದ್ಯಾರ್ಥಿನಿ ಕು। ಭಾವಿನಿ ಮಲ್ಲಿಕ್ ಇವರು 2026ರ ಮಹಾರಾಷ್ಟ್ರ ರಾಜ್ಯ ಮಂಡಳಿಯ ಹತ್ತನೇ ತರಗತಿ (ಎಸ್‌ಎಸ್‌ಸಿ) ಪರೀಕ್ಷೆಯಲ್ಲಿ 99.80% ಅಂಕಗಳನ್ನು ಗಳಿಸುವ ಮೂಲಕ ಶಾಲೆಗೆ ಅಪಾರ ಕೀರ್ತಿ ತಂದಿದ್ದಾರೆ.

**ಶೈಕ್ಷಣಿಕ ಮತ್ತು ಕ್ರೀಡಾ ಸಾಧನೆ:**

ಭಾವಿನಿ ಕೇವಲ ಶಿಕ್ಷಣದಲ್ಲಿ ಮಾತ್ರವಲ್ಲದೆ, ಕ್ರೀಡಾ ಕ್ಷೇತ್ರದಲ್ಲೂ ಅಪ್ರತಿಮ ಸಾಧನೆ ಮಾಡಿದ್ದಾರೆ. ಅವರು ಒಬ್ಬ ಸಮರ್ಪಿತ ಚೆಸ್ (ದಬ್ಬಾರಾಟ) ಆಟಗಾರ್ತಿಯಾಗಿಯೂ ಗುರುತಿಸಿಕೊಂಡಿದ್ದಾರೆ. ಈಕೆಯದ್ದು ರಾಷ್ಟ್ರಮಟ್ಟದ ಸಾಧನೆ ಆಗಿದ್ದು, ರಾಷ್ಟ್ರಮಟ್ಟದ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ದ್ವಿತೀಯ ಸ್ಥಾನ ಪಡೆದು, ಬೆಳ್ಳಿ ಪದಕ ಮತ್ತು ತಂಡದ ಟ್ರೋಫಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ರಾಜ್ಯದ ಪ್ರತಿನಿಧಿ: ಮೊದಲು ರಾಜ್ಯ ಮಟ್ಟದಲ್ಲಿ ಜಯಗಳಿಸಿದ ಇವರು, ನಂತರ ರಾಷ್ಟ್ರಮಟ್ಟದಲ್ಲಿ ಮಹಾರಾಷ್ಟ್ರ ರಾಜ್ಯವನ್ನು ಪ್ರತಿನಿಧಿಸಿರುವುದು ಗಮನಾರ್ಹ. ಈಕೆಯ ವ್ಯಕ್ತಿತ್ವ ವಿಕಸನವೂ ತೀವ್ರ ಏಕಾಗ್ರತೆ, ಕಾರ್ಯತಂತ್ರದ ಆಲೋಚನೆ ಮತ್ತು ತಾಳ್ಮೆಯನ್ನು ಬೇಡುವ ಚೆಸ್ ಆಟವು, ಭಾವಿನಿ ಅವರ ಶೈಕ್ಷಣಿಕ ಯಶಸ್ಸಿಗೆ ಬೇಕಾದ ಮಾನಸಿಕ ಶಕ್ತಿಯನ್ನು ಒದಗಿಸಿದೆ. ನಾಯಕತ್ವದ ದೂರದೃಷ್ಟಿ ಹೊಂದಿರುವ ಈ ಗಮನಾರ್ಹ ಯಶಸ್ಸು ರಾಯಾನ್ ಸಮೂಹದ ಕಾರ್ಯಾಧ್ಯಕ್ಷರಾದ ಡಾ।ಎ.ಎಫ್. ಪಿಂಟೊ ಮತ್ತು ವ್ಯವಸ್ಥಾಪಕ ನಿರ್ದೇಶಕಿ ಮೇಡಂ ಡಾ। ಗ್ರೇಸ್ ಪಿಂಟೊ ಅವರ ಸ್ಫೂರ್ತಿದಾಯಕ ನಾಯಕತ್ವಕ್ಕೆ ಸಂದ ಗೌರವವಾಗಿದೆ ಎಂದು ಶಾಲಾ ಮಂಡಳಿ ತಿಳಿಸಿದೆ. ವಿದ್ಯಾರ್ಥಿಗಳಲ್ಲಿ ಕೇವಲ ಪಠ್ಯವಲ್ಲದೆ, ಕ್ರೀಡೆ ಮತ್ತು ಇತರ ಚಟುವಟಿಕೆಗಳ ಮೂಲಕ ಸಮಗ್ರ ವ್ಯಕ್ತಿತ್ವ ವಿಕಸನವನ್ನು (Holistic Education) ಉತ್ತೇಜಿಸುವುದು ನಮ್ಮ ಗುರಿ ಎಂದೂ ರಾಯಾನ್ ಅಂತರಾಷ್ಟ್ರೀಯ ವಿದಾ ಸಮೂಹ ತಿಳಿಸಿದ್ದು, ಭಾವಿನಿ ಅವರ ಈ ಸರ್ವತೋಮುಖ ಸಾಧನೆಯು ಶಾಲೆಯ ಶೈಕ್ಷಣಿಕ ಗುಣಮಟ್ಟ ಮತ್ತು ವಿದ್ಯಾರ್ಥಿಗಳ ಪ್ರತಿಭೆಗೆ ನೀಡುವ



ಪ್ರೋತ್ಸಾಹಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದಿದ್ದಾರೆ.

# ‘ಕೊಂಕಣಿ ಫ್ರೆಂಡ್ಸ್ ಜೆರಿಮೆರಿ’ ಸಂಯೋಜನೆಯೊಂದಿಗೆ ಜೆರಿಮೆರಿಯಲ್ಲಿ 98ನೇ ಪ್ರದರ್ಶನಗೈದ ‘ಮ್ಹಾತಾರೊ ಚರ್ಬೆಲಾ’ ಕೊಂಕಣಿ ಹಾಸ್ಯಮಯ ನಾಟಕ

(ಚಿತ್ರ / ವರದಿ : ರೋನ್ಸ್ ಬಂಟ್ವಾಳ್)

**ಮುಂಬಯಿ, ಮೇ.08:** ಕೊಂಕಣಿ ನಾಟಕ ರಂಗದ ಹಿರಿಯಣ್ಣ ಪ್ರಖ್ಯಾತ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ವಿಜೇತ, ಕೊಮೆಡಿ ಕಿಂಗ್ ನಟ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ಇವರ ಫ್ರಾಂಕ್ ಪ್ರೊಡಕ್ಷನ್ ಮುಂಬಯಿ ಕೊಂಕಣಿ ನಾಟಕ ತಂಡವು ತನ್ನ 98ನೇ ಪ್ರದರ್ಶನವನ್ನು ‘ಕೊಂಕಣಿ ಫ್ರೆಂಡ್ಸ್ ಜೆರಿಮೆರಿ’ ಸಂಯೋಜನೆಯಲ್ಲಿ ಇಂದಿಲ್ಲಿ ಶುಕ್ರವಾರ ರಾತ್ರಿ ಕುರ್ಲಾ ಪಶ್ಚಿಮದ ಜೆರಿಮೆರಿ ಇಲ್ಲಿನ ಸೈಂಟ್ ಜೂಡ್ ಬಾಲವಾಡಿ ಶಾಲಾ ಮೈದಾನದಲ್ಲಿ ಧರ್ಮಾರ್ಥವಾಗಿ ‘ಮ್ಹಾತಾರೊ ಚರ್ಬೆಲಾ’ ಹಾಸ್ಯಮಯ ಸಾಮಾಜಿಕ ಕೊಂಕಣಿ ನಾಟಕವನ್ನು ಪ್ರದರ್ಶಿಸಿತು. ಈ ಮಧ್ಯೆ ನಡೆಸಲಾಗಿದ್ದ ಸರಳ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಸೈಂಟ್ ಜೂಡ್’ಸ್ ಚರ್ಚ್‌ನ ಪ್ರಧಾನ ಧರ್ಮಗುರು ರೆ। ಫಾ। ಎಲಿಯಾಸ್ ಡಿ’ಸೋಜಾ (ಕಿನ್ನಿಗೋಳಿ), ಗೌರವ ಅತಿಥಿಗಳಾಗಿ ಭನಿಯರಾದ ಸಿ। ಸೀಮಾ, ಸಿ। ಜೋನ್ನಾ, ಸಿ। ಸಂಜನಾ ಉಪಸ್ಥಿತರಿದ್ದು ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ಮತ್ತು ಫ್ಲೋರಾ ಡಿ’ಸೋಜಾ ಕಲ್ಮಾಡಿ ಇವರನ್ನು ವಿಶೇಷಸನ್ಮಾನಿಸಿ ಅಭಿನಂದಿಸಿದರು ಹಾಗೂ ಇತರ ಕಲಾವಿದರಿಗೂ ಸತ್ಕರಿಸಿ ಶುಭಕೋರಿದರು.



ಸುಮಾರು 83ರ ಹರೆಯದ ಹಿರಿಯ ಅಪ್ರತಿಮ ಕಲಾವಿದ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ರಚಿಸಿ ನಟಿಸಿದ, ಜೊಯ್ ಪಾಲಡ್ಕ ನಿರ್ದೇಶಿಸಿದ ‘ಮ್ಹಾತಾರೊ ಚರ್ಬೆಲಾದ 98ನೇ ಪ್ರಯೊಗವನ್ನು ಸುಮಾರು ಮೂರು ದಶಕಗಳ ಹಿಂದಿನ ಕಲಾವಿದರೇ ಬಹುತೇಕ ಪಾತ್ರಧಾರಿಗಳೇ ಯಶಸ್ವೀಯಾಗಿ ಪ್ರದರ್ಶಿಸಿತು. ಜೊಯ್ ಪಾಲಡ್ಕ, ಶ್ರೀಮತಿ ಬೆಟ್ಟಿ ನ್ಹಾಜ್ ಬಾಂದ್ರ, ಶ್ರೀಮತಿ ಜ್ಯೂಲಿ ವಾಜ್ ಮರೋಳ್, ಶ್ರೀಮತಿ ಫ್ಲೋರಾ ಡಿ’ಸೋಜಾ ಕಲ್ಮಾಡಿ (ಜೆರಿಮೆರಿ), ಶ್ರೀಮತಿ ಶಾಂತಿ ಬಾರ್ಬೋಜಾ ಬೊಳಿಯೆ, ಗ್ರೇಗರಿ ಸಿಕ್ವೇರಾ ನಿಡ್ಡೋಡಿ, ಪೀಟರ್ ಪಾಯ್ಸ್ ಬಸ್ರೂರು, ಪೀಟರ್ ಕುಟಿನ್ಹೋ ಮುಂಡ್ಕೂರು, ಲವಿನಾ ಡಿಸೋಜಾ ಜೆರಿಮೆರಿ ಮತ್ತು ಪ್ರಮುಖ ಪಾತ್ರದಲ್ಲಿ ಫ್ರಾನ್ಸಿಸ್ ನಟಿಸಿ ನಾಟಕಾಭಿಮಾನಿಗಳ ಪ್ರಶಂಸೆಗೆ ಪಾತ್ರರಾದರು.



ಇದೇ ಮೇ.10ನೇ ಭಾನುವಾರ ಸಂಜೆ 7:00 ಗಂಟೆಗೆ ಅಂಧೇರಿ ಪೂರ್ವದ ಮರೋಳ್ (ವಿಜಯನಗರ) ಪಲೋಟ್ಟಿ ಚರ್ಚ್‌ನ ತೆರೆದ ಸಭಾಂಗಣದಲ್ಲಿ ಫ್ರಾಂಕ್ ಪ್ರೊಡಕ್ಷನ್ ಈ ನಾಟಕದ 99ನೇ ಪ್ರಯೋಗ ಪ್ರದರ್ಶಿಸಲಿದೆ. ವೇದಿಕೆಯಲ್ಲಿ ‘ಕೊಂಕಣಿ ಫ್ರೆಂಡ್ಸ್ ಜೆರಿಮೆರಿ’ ಇದರ ಜೋನ್ ಮಸ್ಕರೇನ್ಹಾಸ್, ಎಲಿಯಾಸ್ ಪಿಂಟೊ, ಜೋನ್ ರೋಡ್ರಿಗಸ್, ರೋನಿ ಒಲಿವೆರಾ, ಡಾ। ಸಿ.ಚೆಟ್ಟಿಯಾರ್, ಮೆಲ್‌ರಾಯ್ ಅಲ್ಫೊನ್ಸೊ, ಜೋರ್ಜ್ ಚೆಟ್ಟಿಯಾರ್, ಮೆರ್ಶಿನ್ ಮಿರಾಂಡಾ, ಅನಿತಾ ಫೆರ್ನಾಂಡಿಸ್, ಗ್ರೇಸಿ ತಾವ್ರೊ ಹಾಜರಿದ್ದು ಅತಿಥಿಗಳಿಗೆ ಗೌರವಿಸಿದರು. ಜೊವಿಲಾ ಡಿ’ಸೋಜಾ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಫ್ಲೋರಾ ಡಿ’ಸೋಜಾ ವಂದಿಸಿದರು.

# ಕೇಂದ್ರ ಸಚಿವ ಬಂಡಿ ಸಂಜಯ್ ಪುತ್ರನ ವಿರುದ್ಧ ಪೋಕ್ಸೋ ಕೇಸ್

**ಹೈದರಾಬಾದ್, ಮೇ 9:** ಕೇಂದ್ರ ಸಚಿವ ಬಂಡಿ ಸಂಜಯ್ ಕುಮಾರ್ ಅವರ ಪುತ್ರ ಬಂಡಿ ಭಾಗೀರಥ್ ಸಾಯಿ ಅವರ ವಿರುದ್ಧ ಹೈದರಾಬಾದ್ನಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. 17 ವರ್ಷದ ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಈ ಪ್ರಕರಣ ದಾಖಲಿಸಲಾಗಿದೆ. ಭಾಗೀರಥ್ ಅವರು ಈ ಆರೋಪಗಳನ್ನು ನಿರಾಕರಿಸಿದ್ದು, ಬಾಲಕಿ ಮತ್ತು ಅವಳ ಪೋಷಕರ ವಿರುದ್ಧ ಪ್ರತಿ ದೂರು ದಾಖಲಿಸಿದ್ದಾರೆ. ಮೊಯಿನಾಬಾದ್ನ ಫಾರ್ಮ್ ಹೌಸ್ ಒಂದರಲ್ಲಿ ಕಳೆದ ಡಿಸೆಂಬರ್ 31ರಂದು ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಲಾಗಿದೆ ಎಂದು ಬಾಲಕಿ ದೂರಿನಲ್ಲಿ ತಿಳಿಸಿದ್ದಾಳೆ. ಆರೋಪಿ ಮತ್ತು ಬಾಲಕಿ ಕಳೆದ ಕೆಲವು ತಿಂಗಳುಗಳಿಂದ ಪರಿಚಯದಲ್ಲಿದ್ದರು ಎನ್ನಲಾಗಿದೆ. ಈ ಸಂಬಂಧ ಹೈದರಾಬಾದ್‌ನ ಪೇಟ್ ಬಶೀರಾಬಾದ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಬಾಲಕಿಯ ತಾಯಿ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಆದರೆ ಭಾಗೀರಥ್ ಈ ಆರೋಪಗಳನ್ನು ನಿರಾಕರಿಸಿದ್ದು, ಬಾಲಕಿ ಮತ್ತು ಅವಳ ಪೋಷಕರ ವಿರುದ್ಧ ಕರಿಂನಗರ ಪೊಲೀಸ್ ಠಾಣೆಯಲ್ಲಿ ಪ್ರತಿ ದೂರು ದಾಖಲಿಸಿದ್ದಾರೆ. ನನ್ನನ್ನು ಮದುವೆಯಾಗುವಂತೆ ಒತ್ತಾಯಿಸುತ್ತಿದ್ದು, ಸುಳ್ಳು ಪ್ರಕರಣ ದಾಖಲಿಸಿದ್ದಾರೆ. ಪ್ರಕರಣ ದಾಖಲಿಸಬಾರದೆಂದಾರೆ 5 ಕೋಟಿ ಹಣ ನೀಡಬೇಕು ಎಂದು ಬೆದರಿಕೆ ಹಾಕುತ್ತಿದ್ದರು? ಎಂದು ದೂರಿದ್ದಾರೆ.

# ಪಂಜಾಬ್ ಸಚಿವ ಅರೋರಾ ಮನೆ ಮೇಲೆ ಮತ್ತೆ ಇಡಿ ದಾಳಿ

**ಚಂಡೀಗಢ, ಮೇ 9:** ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪಂಜಾಬ್ ಕೈಗಾರಿಕಾ ಸಚಿವ ಸಂಜೀವ್ ಅರೋರಾ ಮತ್ತು ಅವರೊಂದಿಗೆ ಸಂಪರ್ಕ ಹೊಂದಿದ್ದಾರೆ ಎನ್ನಲಾದ ಇತರ ಕೆಲವರ ನಿವಾಸ, ಕಚೇರಿಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಶನಿವಾರ ದಾಳಿ ನಡೆಸಿದೆ. ಚಂಡೀಗಢದಲ್ಲಿರುವ ಅರೋರಾ ಅವರ ಅಧಿಕೃತ ನಿವಾಸ ಮತ್ತು ಗುರುಗ್ರಾಮದಲ್ಲಿರುವ (ಹರಿಯಾಣ) ರಿಯಲ್ ಎಸ್ಟೇಟ್ ಕಂಪನಿ ಸೇರಿದಂತೆ ಐದು ಸ್ಥಳಗಳಲ್ಲಿ ದಾಳಿ ನಡೆಸಲಾಗಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ (ಪಿಎಂಎಲ್‌ಎ) ಕ್ರಿಮಿನಲ್ ವಿಭಾಗಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಏಪ್ರಿಲ್ನಲ್ಲಿ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯ (ಫೆಮಾ) ನಾಗರಿಕ ನಿಬಂಧನೆಗಳ ಅಡಿಯಲ್ಲಿ ಇಡಿ ಅರೋರಾ ಮತ್ತು ಅವರೊಂದಿಗೆ ಸಂಪರ್ಕ ಹೊಂದಿದ ಸಂಸ್ಥೆಗಳ ಮೇಲೆ ದಾಳಿ ನಡೆಸಿತ್ತು. ಅರೋರಾ ತನಿಖಾ ಸಂಸ್ಥೆಗಳೊಂದಿಗೆ ಸಂಪೂರ್ಣವಾಗಿ ಸಹಕರಿಸುವುದಾಗಿ ಮತ್ತು ಸತ್ಯ ಮೇಲುಗೈ ಸಾಧಿಸುತ್ತದೆ ಎಂಬ ವಿಶ್ವಾಸವಿದೆ ಎಂದು ಹೇಳಿದ್ದರು. ವಸತಿ ಯೋಜನೆಗಳಿಗಾಗಿ ಕೈಗಾರಿಕಾ ಭೂಮಿಯನ್ನು ದುರುಪಯೋಗಪಡಿಸಿಕೊಂಡ ಆರೋಪದ ಹಣ ವರ್ಗಾವಣೆ ಪ್ರಕರಣದಲ್ಲಿ 2024ರಲ್ಲಿಯೂ ಇಡಿ ಲುಧಿಯಾನ ಪಶ್ಚಿಮದ ಶಾಸಕರ ಮೇಲೆ ದಾಳಿ ನಡೆಸಿತ್ತು. ಆಗ ಅರೋರಾ ಆಗ ರಾಜ್ಯಸಭಾ ಸಂಸದರಾಗಿದ್ದರು.

# ಆನಂದ ಪೂಜಾರಿ (ಕುಂದಾಪುರ) ಅವರಿಗೆ ಅಮೆರಿಕದ ವಿವಿಯಿಂದ ಗೌ॥ ಡಾಕ್ಟರೇಟ್

**ಮುಂಬಯಿ, ಮೇ.08:** ಕರ್ನಾಟಕ ಕರಾವಳಿಯ ಕುಂದಾಪುರ ಆಲೂರು ಇಲ್ಲಿನ ಆನಂದ ಪೂಜಾರಿ ಅವರು ಅಮೇರಿಕಾದ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್‌ಗೆ ಭಾಜನರಾಗಿದ್ದು, ಯುಎಸ್‌ಎ ಅಲ್ಲಿನ ವಾಷಿಂಗ್ಟನ್ ಡೀಸಿ ಅಲ್ಲಿರುವ ಪ್ರತಿಷ್ಠಿತ ವಾಷಿಂಗ್ಟನ್ ಎಡ್ವೆಂಟ್‌ಟಿಸ್ಟ್ ಯುನಿವರ್ಸಿಟಿ ಕಳೆದ ಭಾನುವಾರ (ಮೇ.03) ಅಮೆರಿಕದ ಮೇರಿಲ್ಯಾಂಡ್‌ನಲ್ಲಿ ಭವ್ಯವಾಗಿ ನಡೆಸಿದ ವಾರ್ಷಿಕ ಘಟಿಕೋತ್ಸವ ಹಾಗೂ ಯುನಿವರ್ಸಿಟಿಯ 111ನೇ ಪದವಿ ಪ್ರದಾನ ಸಮಾರಂಭದಲ್ಲಿ ಅನಿವಾಸಿ ಭಾರತೀಯ ಉದ್ಯಮಿ, ಸಾಧಕ ಆನಂದ ಪೂಜಾರಿ ಅವರಿಗೆ ‘ಡಾಕ್ಟರ್ ಆಫ್ ಹ್ಯೂಮನ್ ಲೆಟರ್ಸ್’ ಗೌರವ ಪದವಿ ನೀಡಿ ಗೌರವಿಸಲಾಯಿತು. ಉಪಸ್ಥಿತ ಗ್ಲೋಬಲ್ ಅಲಯಂಟ್ ಇನ್‌ಕಾರ್ಪೋರೇಶನ್‌ನ ಸಿಇಓ ಮತ್ತು ಅಧ್ಯಕ್ಷ ರಾಜನ್ ನಟರಾಜನ್, “ಆನಂದ ಪೂಜಾರಿ ಅವರು ಈ ಮಹತ್ವದ ಡಾಕ್ಟರೇಟ್ ಗೌರವಕ್ಕೆ ಅತ್ಯಂತ ಅರ್ಹ ವ್ಯಕ್ತಿಯಾಗಿದ್ದಾರೆ. ಇದು ಅವರ ಸಮರ್ಪಣೆ, ಬದ್ಧತೆ ಮತ್ತು ಪರಿಶ್ರಮಕ್ಕೆ ದೊರೆತ ಪ್ರತಿಫಲವಾಗಿದೆ“ಎಂದರು. ಆನಂದ ಪೂಜಾರಿ ಗೌರವಕ್ಕೆ ಉತ್ತರವಾಗಿಸಿ “ನಿಮ್ಮೆದುರು ನಾನು ತೀರಾ ವಿನಮ್ರತೆ ಮತ್ತು ಕೃತಜ್ಞತಾಪೂರ್ವಕವಾಗಿ ನಿಂತಿರುವೆನು.

ಈ ಡಾಕ್ಟರೇಟ್ ಪದವಿ ಅತ್ಯಂತ ಗೌರವ ಮತ್ತು ಹೆಮ್ಮೆಯದ್ದಾಗಿದೆ. ನಾನೇನು ಅನುಕೂಲಸ್ಥ ಪರಿವಾರದ ಹಿನ್ನೆಲೆಯಿಂದ ಬಂದವನಲ್ಲ. ನಾನು ಆರಂಭದಿಂದಲೂ ಪರಿಶ್ರಮ, ಶಿಸ್ತು ಮತ್ತು ನಂಬಿಕೆಯನ್ನು ಜೀವನ ಮೌಲ್ಯವಾಗಿರಿಸಿ ಕೊಂಡವನು. ಸಮಾಜದ ಬಗ್ಗೆ ಯಾವತ್ತೂ ನನಗೆ ಗೌರವವಿದೆ. ಮೌಲ್ಯಗಳು ನನ್ನ ಬದುಕಿನ ದೃಢವಾದ ತಳಗಟ್ಟಾಗಿ ಸಹಾಯ ಮಾಡಿವೆ. ಈ ಗೌರವ ಪದವಿಗೆ ನಾನೊಬ್ಬನೇ ಹಕ್ಕುದಾರನಲ್ಲ. ಇದಕ್ಕೆ ಸದಾ ಬೆಂಗಾವಲಾಗಿರುವ ಪತ್ನಿ ಸುಮಿತಾ, ಸುಪುತ್ರ ಆರ್ಯನ್ ಮತ್ತು ಇಬ್ಬರು ಸುಪುತ್ರಿಯರಾದ ಅನಿಶಾ ಮತ್ತು ತಾರಾ ಮತ್ತು ನನ್ನೆಲ್ಲಾ ಹಿತಚಿಂತಕರೂ ಪಾಲುದಾರರಾಗಿದ್ದಾರೆ. ವಾಷಿಂಗ್ಟನ್ ಎಡ್ವೆಂಟ್‌ಟಿಸ್ಟ್ ಯುನಿವರ್ಸಿಟಿ ಅವರಿಗೆ ಕೃತಜ್ಞತೆ ಸಲ್ಲಿಸುವೆ ಎಂದರು. ಸಮಾರಂಭದಲ್ಲಿ 2026ನೇ ಸಾಲಿನ ಪದವೀಧರ ವಿದ್ಯಾರ್ಥಿಗಳು ಪದವಿ ಸ್ವೀಕರಿಸಿ ಶೈಕ್ಷಣಿಕ ಸಾಧನೆಯನ್ನು ಸಂಭ್ರಮಿಸಿದರು. ಚೆರ್ಲಿಕಿ ಸುಂಝು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



**ಆನಂದ ಪೂಜಾರಿ ಕುಂದಾಪುರ:**

ಅಮೆರಿಕದಲ್ಲಿರುವ ಭಾರತದ ರಾಯಬಾರಿ ಕಚೇರಿಗೆ ಕ್ಯಾಟರಿಂಗ್ ಸೇವೆಸಲ್ಲಿಸುವ ಆನಂದ ಪೂಜಾರಿ ಅವರ ರುಚಿಕರ ಆಹಾರಾತಿಥ್ಯಸೇವೆಗೆ ಭಾರತದ ಪ್ರಧಾನಮಂತ್ರಿಗಳಾದ ಮನಮೋಹನಸಿಂಗ್ ಮತ್ತು ನರೇಂದ್ರ ಮೋದಿ ಅವರು ಸಹ ಶ್ಲಾಘಿಸಿರುವುದನ್ನು ನೆನಪಿಸಿ ಕೊಳ್ಳಬಹುದು. ಜುವೆಲ್ ಆಫ್ ಇಂಡಿಯಾ, ವುಡ್‌ಲ್ಯಾಂಡ್ಸ್, ಉಡುಪಿ ರೆಸ್ಟೋರೆಂಟ್, ಪೂಜಾರಿ ಕನ್ಸಲ್ಟನ್ಸಿ, ಜೆಡಿ ಹಾಸ್ಪಿಟಾಲಿಟಿ ಮುಂತಾದ ವಿವಿಧ ಉದ್ಯಮಗಳಲ್ಲಿ ತೊಡಗಿಸಿ ಕೊಂಡಿರುವ ಆನಂದ ಪೂಜಾರಿ ಅವರು ಮೂಲತ: ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕು ಆಲೂರು ಎಂಬ ಪುಟ್ಟ ಗುಡ್ಡಗಾಡುಹಳ್ಳಿಯ ಕೃಷಿಕ ಪರಿವಾದವರು. ಆಲೂರು ಸರಕಾರಿ ಶಾಲೆಯಲ್ಲಿ ಮಾಧ್ಯಮಿಕ ಶಿಕ್ಷಣ ಮುಗಿಸಿ ಮುಂಬೈಗೆ ಬಂದು ಹಗಲುಹೊತ್ತು ಕ್ಯಾಂಟೀನ್‌ನಲ್ಲಿ ಕೆಲಸ ಮಾಡುತ್ತ ರಾತ್ರಿ ಶಾಲೆ ಸೇರಿ ಪಿಯುಸಿ ಹಂತದವರೆಗೆ ಶಿಕ್ಷಣ ಮುಗಿಸಿರುವರು. ತದನಂತರ ಅವರ ಅಣ್ಣ ದಿ। ಮಂಜುನಾಥ ಪೂಜಾರಿ ಅವರ ಮುತುವರ್ಜಿಯಿಂದ 1995ರಲ್ಲಿ ಅಮೇರಿಕಾಕ್ಕೆ ಹೋಗಿ ಹೋಟೇಲು ಉದ್ಯೋಗದಲ್ಲಿ ತೊಡಗಿಸಿಕೊಂಡು ಕಠಿಣ ಪರಿಶ್ರಮದಿಂದ ಹಂತಹಂತವಾಗಿ ಮೇಲೇರಿ ಸ್ವಂತ ಹೊಟೆಲು ಉದ್ಯಮ ಆರಂಭಿಸಿ ಜನಾನುರಾಗಿರುವರು. ಅಮೇರಿಕೆಯಲ್ಲಿ ಅನೇಕ ಕನ್ನಡ ಸಾಂಸ್ಕೃತಿಕ ಸೇವಾಸಂಸ್ಥೆಗಳ ಮೂಲಕ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿ ಕೊಂಡಿರುವ ಆನಂದ ಪೂಜಾರಿ ಇವರ ಪ್ರಾಮಾಣಿಕ, ಶಿಸ್ತುಬದ್ಧ, ಶ್ರಮ ಜೀವನ ಪಯಣಗಾಥೆ ರೋಚಕವಾಗಿದ್ದು ಸಮಾಜಕ್ಕೆ ಅತ್ಯಂತ ಸ್ಫೂರ್ತಿದಾಯಕವಾದುದು.

### ನೀರಿನ ದುರ್ಬಳಕೆ, ಬಾಕಿ ಉಳಿಸಿಕೊಂಡಿದ್ದ 54625 ಕಟ್ಟಡಗಳ ಪರಿಶೀಲನೆ; 11217 ಅಕ್ರಮ ಸಂಪರ್ಕ ಕಡಿತ

# ಜಲಮಂಡಳಿ ಬ್ಲ್ಯೂಫೋರ್ಸ್ ಭರ್ಜರಿ ಕಾರ್ಯಾಚರಣೆ

**ಬೆಂಗಳೂರು, ಮೇ 9:** ಐದು ತಿಂಗಳ ಹಿಂದೆ ಸ್ಥಾಪಿಸಲಾದ ಬೆಂಗಳೂರು ಜಲಮಂಡಳಿಯ ವಿಶೇಷ ಕಾರ್ಯಪಡೆ 'ಬ್ಲೂ ಫೋರ್ಸ್' ನಗರಾದ್ಯಂತ ಸಕ್ರಿಯವಾಗಿದ್ದು, ಭರ್ಜರಿ ಕಾರ್ಯಾಚರಣೆ ನಡೆಸಿವೆ. ನಗರದಲ್ಲಿ ನೀರಿನ ದುರ್ಬಳಕೆ, ಅಕ್ರಮ ಸಂಪರ್ಕ ಹಾಗೂ ಬಿಲ್ ಬಾಕಿ ಉಳಿಸಿ ಕೊಂಡಿರುವವರ ವಿರುದ್ಧ ಸಮರ ಸಾರಿವೆ.

ಬಿರುಸಿನ ತಪಾಸಣೆ ನಡೆಸಿ ಅಕ್ರಮಗಳನ್ನು ಪತ್ತೆಮಾಡಿ ಕೋಟಿ ಕೋಟಿ ಆದಾಯ ಜಲಮಂಡಳಿಗೆ ಬರುವಂತೆ ಮಾಡಿದೆ. ಕಳೆದ ಐದು ತಿಂಗಳಲ್ಲಿ ಬರೋಬ್ಬರಿ 54,625 ಕಟ್ಟಡಗಳನ್ನು ಪರಿಶೀಲಿಸಲಾಗಿದೆ. ನಿಯಮ ಉಲ್ಲಂಘಿಸಿದ 11,217 ಅಕ್ರಮ ಸಂಪರ್ಕಗಳನ್ನು ನಿರ್ದಾಕ್ಷಿಣ್ಯವಾಗಿ ಕಡಿತಗೊಳಿಸಲಾಗಿದೆ.

ಈ ಮಹತ್ವದ ಕಾರ್ಯಾಚರಣೆಯಿಂದ 1,000 ದಶಲಕ್ಷ ಲೀಟರ್ ಕುಡಿಯುವ ನೀರು ಉಳಿತಾಯವಾಗಿದೆ. ಪ್ರೋರಾಟಾ ಹಾಗೂ ನೀರಿನ ಮೌಲ್ಯ ಸೇರಿ ಒಟ್ಟಾರೆ 55 ಕೋಟಿ ರೂ.ಗಳ ಹೆಚ್ಚುವರಿ ಆದಾಯ ಸಂಗ್ರಹವಾಗಿದೆ.*

**ಬೃಹತ್ ಮಟ್ಟದ ತಪಾಸಣೆ:** ನಗರದ ನಾಲ್ಕೂ ವಲಯಗಳಲ್ಲಿ (ಉತ್ತರ, ಪೂರ್ವ, ಪಶ್ಚಿಮ, ದಕ್ಷಿಣ) ಒಟ್ಟು 54,625 ಕಟ್ಟಡಗಳ ಭೌತಿಕ ತಪಾಸಣೆ ನಡೆಸಲಾಗಿದೆ.

**ಸಂಪರ್ಕ ಕಡಿತ:** ಒಟ್ಟು 11,217 ಸಂಪರ್ಕಗಳ ಕಡಿತ ಮಾಡಲಾಗಿದೆ. ಇದರಲ್ಲಿ 9,751 ಕುಡಿಯುವ ನೀರಿನ ಸಂಪರ್ಕಗಳು ಹಾಗೂ 1,466 ಒಳಚರಂಡಿ ಸಂಪರ್ಕಗಳು ಸೇರಿವೆ.

**ಪೂರ್ವ ವಲಯದಲ್ಲಿ ಅತಿಹೆಚ್ಚು ಕಡಿತ:** ಅಕ್ರಮ ಸಂಪರ್ಕ ಹಾಗೂ ಬಿಲ್ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳಲ್ಲಿ ಪೂರ್ವ ವಲಯ ಮುಂಚೂಣಿಯಲ್ಲಿದ್ದು, ಇಲ್ಲಿ ಗರಿಷ್ಠ 3,151 ಸಂಪರ್ಕಗಳನ್ನು ಕಡಿತಗೊಳಿಸಲಾಗಿದೆ.

**ದಕ್ಷಿಣ ವಲಯದಲ್ಲಿ ಅತಿ ಹೆಚ್ಚು ತಪಾಸಣೆ:** ದಕ್ಷಿಣ ವಲಯದಲ್ಲಿ ಅತಿ ಹೆಚ್ಚು, ಅಂದರೆ 13,908 ಕಟ್ಟಡಗಳನ್ನು ಜಲಮಂಡಳಿ ಅಧಿಕಾರಿಗಳು ಖುದ್ದು ಭೇಟಿ ಮಾಡಿ ಪರಿಶೀಲಿಸಿದ್ದಾರೆ. ಬೆಂಗಳೂರು ಜಲಮಂಡಳಿಯ ಈ ನಿರಂತರ ಹಾಗೂ ಕಟ್ಟುನಿಟ್ಟಿನ ಕಾರ್ಯಾಚರಣೆಯಿಂದಾಗಿ ಬೃಹತ್ ಪ್ರಮಾಣದ ಆದಾಯ ಸೋರಿಕೆಗೆ ತಡೆ ಬಿದ್ದಿದೆ. ಅಕ್ರಮ ಸಂಪರ್ಕ ಹೊಂದಿದ್ದ ಕಟ್ಟಡಗಳ ವಿರುದ್ಧ ಕೈಗೊಂಡ ನಿರ್ದಾಕ್ಷಿಣ್ಯ ಕ್ರಮಗಳಿಂದಾಗಿ, ಆ ಸಂಪರ್ಕಗಳನ್ನು ಕಡಿತಗೊಳಿಸುವ ಹಾಗೂ ನಂತರ ಅವುಗಳನ್ನು ಅಧಿಕೃತವಾಗಿ ಸಕ್ರಮಗೊಳಿಸುವ ಪ್ರಕ್ರಿಯೆ ಚುರುಕುಗೊಂಡಿದೆ. ಇದರ ನೇರ ಪರಿಣಾಮವಾಗಿ, ಜಲಮಂಡಳಿಯ ಬೊಕ್ಕಸಕ್ಕೆ ಪ್ರೋರಾಟಾ ಶುಲ್ಕದ ರೂಪದಲ್ಲಿ ಬರೋಬ್ಬರಿ 55 ಕೋಟಿ ರೂ. ಗಳ ಬೃಹತ್ ಆದಾಯ ಸಂಗ್ರಹವಾಗಿದೆ.

ಅಕ್ರಮ ನೀರಿನ ಸಂಪರ್ಕಗಳ ತೆರವು ಹಾಗೂ ನೀರಿನ ದುರ್ಬಳಕೆಯ ವಿರುದ್ಧ ಜಲಮಂಡಳಿಯ ಬ್ಲೂಫೋರ್ಸ್ ತಂಡ ಕಠಿಣ ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ ಕೆಲವು ಪ್ರಯೋಜನೆಗಳು ಆಗಿವೆ. ನಿತ್ಯವೂ ಬೃಹತ್ ಪ್ರಮಾಣದ ನೀರಿನ ಸೋರಿಕೆ ತಪ್ಪಿದೆ. ಈ ಕಾರ್ಯಾಚರಣೆಯ ಪರಿಣಾಮವಾಗಿ ಪ್ರತಿ ತಿಂಗಳು ಬರೋಬ್ಬರಿ 210 ದಶಲಕ್ಷ ಲೀಟರ್ ಶುದ್ಧ ಕುಡಿಯುವ ನೀರು ಉಳಿತಾಯವಾಗುತ್ತಿದೆ.

ಒಟ್ಟಾರೆಯಾಗಿ, ಈವರೆಗೆ ಅಕ್ರಮವಾಗಿ ಉಪಯೋಗಿಸಲಾಗುತ್ತಿದ್ದ 1,000 ದಶಲಕ್ಷ ಲೀಟರ್ ಪ್ರಮಾಣದ ನೀರನ್ನು ಇದೀಗ ಜಲಮಂಡಳಿಯ ಅಧಿಕೃತ ಬಿಲ್ಲಿಂಗ್ ವ್ಯಾಪ್ತಿಗೆ ತರಲಾಗಿದೆ.

ಇದರಿಂದ ಪ್ರತಿ ತಿಂಗಳು ಸುಮಾರು 5 ಕೋಟಿ ರೂ.ಗಳ ಹೆಚ್ಚುವರಿ ಆದಾಯ ಬರುವಂತಾಗಿದೆ.

ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ಅವರು, ನೀರಿನ ದುರ್ಬಳಕೆ ಹಾಗೂ ಒಳಚರಂಡಿ ಅಕ್ರಮ ಸಂಪರ್ಕ ಪಡೆಯುವುದರಿಂದ ಜಲಮಂಡಳಿಯ ಮೂಲಸೌಕರ್ಯದ ಮೇಲೆ ತೀವ್ರ ಒತ್ತಡ ಹೆಚ್ಚಾಗುತ್ತದೆ.

ಇದು ನಗರವನ್ನು ಸ್ವಚ್ಛವಾಗಿಡುವುದು ಹಾಗೂ ನಾಗರಿಕರಿಗೆ ಗುಣಮಟ್ಟದ ಸೇವೆ ಒದಗಿಸುವ ನಮ್ಮ ಬದ್ಧತೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದರು.

ಕುಡಿಯುವ ನೀರಿನ ಹಾಗೂ ಒಳಚರಂಡಿ ಅಕ್ರಮ ಸಂಪರ್ಕ ಪಡೆದಿರುವವರ ವಿರುದ್ಧ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳುತ್ತಿದೆ. ಜೊತೆಗೆ ಸಾರ್ವಜನಿಕರು ಅಧಿಕೃತವಾಗಿ ಕಾವೇರಿ ನೀರಿನ ಸಂಪರ್ಕ ಹಾಗೂ ಒಳಚರಂಡಿ ಸಂಪರ್ಕ ಪಡೆಯುವಂತೆ ತಿಳಿಸಲಾಗಿದೆ. ಜಲಮಂಡಳಿ ಕಾರ್ಯಕ್ಷಮತೆ ಹೆಚ್ಚುವುದಲ್ಲದೆ, ಬ್ರ್ಯಾಂಡ್ ಬೆಂಗಳೂರು ಆಶಯದಂತೆ ಉತ್ತಮ ಸೇವೆ ಒದಗಿಸಲು ಅನುವು ಮಾಡಿಕೊಡುತ್ತದೆ ಎಂದು ತಿಳಿಸಿದರು.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕಳೆದ ವರ್ಷ 2025ರ ನವೆಂಬರ್ ಕೊನೆಯ ವಾರದಲ್ಲಿ ಈ 'ಬ್ಲೂ ಫೋರ್ಸ್' ಪಡೆಯನ್ನು ಉದ್ಘಾಟಿಸಿದ್ದರು. ಪ್ರಸ್ತುತ ನಗರದಾದ್ಯಂತ ಕಟ್ಟುನಿಟ್ಟಿನ ಕಾರ್ಯಾಚರಣೆ ನಡೆಸಲು ಒಟ್ಟು 18 ಪ್ರತ್ಯೇಕ ಬ್ಲೂ ಫೋರ್ಸ್ ತಂಡಗಳನ್ನು ನಿಯೋಜಿಸಲಾಗಿದೆ.

ಸುಗಮ ಹಾಗೂ ಶಿಸ್ತಿನ ಕಾರ್ಯಾಚರಣೆಗಾಗಿ ಪ್ರತಿಯೊಂದು ತಂಡದಲ್ಲೂ ತಲಾ 4 ಜನ ಸದಸ್ಯರನ್ನು ನೇಮಿಸಲಾಗಿದೆ. ಪ್ರತಿ ತಂಡದಲ್ಲಿ ಓರ್ವ ಮಾಜಿ ಸೈನಿಕ, ಒಬ್ಬ ಮೇಲ್ವಿಚಾರಕ (ಸೂಪರ್ ವೈಸರ್) ಹಾಗೂ ಇಬ್ಬರು ಸಂಪರ್ಕ ಕಡಿತಗೊಳಿಸುವ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ.



ಬೆಂಗಳೂರು ನಗರದಾದ್ಯಂತ ಶನಿವಾರ ಮುಂಗಾರು ಪೂರ್ವ ಮೋಡಗಳು ಗೋಚರಿಸಿದವು.

# ಹಾರ್ಮೋನ್ ಬದಲಾವಣೆ ಚಿಕಿತ್ಸೆ ಮುಂದುವರಿಸಿ ವೈದ್ಯಕೀಯ ವೃತ್ತಿಪರರಿಗೆ ಹೈಕೋರ್ಟ್ ನಿರ್ದೇಶನ




ಬೆಂಗಳೂರು, ಮೇ 9: ತೃತೀಯ ಲಿಂಗಿಗಳ ತಿದ್ದುಪಡಿ ಕಾಯಿದೆ ಜಾರಿಯ ನಡುವೆ ತೃತೀಯ ಲಿಂಗಿ ಮಹಿಳೆಯರಿಬ್ಬರಿಗೆ ಹಾರ್ಮೋನ್ ಬದಲಾವಣೆ ಥೆರಪಿ (ಎಚ್‌ಆರ್‌ಟಿ) ಮುಂದುವರಿಸುವಂತೆ ವೈದ್ಯಕೀಯ ವೃತ್ತಿಪರರಿಗೆ ಕರ್ನಾಟಕ ಹೈಕೋರ್ಟ್ ಈಚೆಗೆ ನಿರ್ದೇಶಿಸಿದೆ.

ಅರ್ಜಿದಾರರ ಹಾರ್ಮೋನ್ ಥೆರಪಿ ಕೋರ್ಸ್‌ಗೆ ಅಡ್ಡಿಪಡಿಸುವುದರಿಂದ ಅವರ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಸಮಸ್ಯೆ ಉಂಟಾಗಲಿದೆ ಎಂದು ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಏಕಸದಸ್ಯ ಪೀಠ ಆದೇಶಿಸಿದೆ.

ಅರ್ಜಿದಾರರು ಪ್ರಸ್ತುತ ಪಡಿಸಿರುವ ವೈದ್ಯಕೀಯ ದಾಖಲೆಗಳನ್ನು ನೋಡಿದರೆ ಮೇಲ್ನೋಟಕ್ಕೆ ಅವರು 11.11.2023ರಿಂದ ಹಾರ್ಮೋನ್ ಬದಲಾವಣೆ ಚಿಕಿತ್ಸೆ ಮಾಡಿಸಿಕೊಳ್ಳುತ್ತಿದ್ದಾರೆ. ಇಂಥ ಸಂದರ್ಭದಲ್ಲಿ ವೈದ್ಯಕೀಯ ಚಿಕಿತ್ಸೆಯನ್ನು ನಿಲ್ಲಿಸುವುದು ಅವರ ಮಾನಸಿಕ ಮತ್ತು ದೈಹಿಕ ಆರೋಗ್ಯದಲ್ಲಿ ಪರಿಣಾಮ ಉಂಟು ಮಾಡುತ್ತದೆ? ಎಂದು ನ್ಯಾಯಾಲಯ ಹೇಳಿದೆ.

ಚಿಕಿತ್ಸೆ ಮುಂದುವರಿಕೆಯು ಹಾಲಿ ಅರ್ಜಿಯ ನಿರ್ಧಾರ ಮತ್ತು ಸುಪ್ರೀಂ ಕೋರ್ಟ್ ಹೊರಡಿಸುವ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ನ್ಯಾಯಾಲಯ ಹೇಳಿದೆ.

ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಅರವಿಂದ್ ಕಾಮತ್ ಅವರು ಯಾವುದೇ ಮಾತ್ರೆ ತೆಗೆದುಕೊಳ್ಳದಂತೆ ಅರ್ಜಿದಾರರನ್ನು ಯಾರೂ ನಿರ್ಬಂಧಿಸಿಲ್ಲ ಮತ್ತು ಅವರ ವಿರುದ್ಧ ಬಲವಂತದ ಕ್ರಮಕ್ಕೆ ಗೊಂಡಿರುವುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರು.

ಅರ್ಜಿದಾರರ ಪರ ಹಿರಿಯ ವಕೀಲೆ ಜಯ್ನಾ ಕೊಠಾರಿ ತಿದ್ದುಪಡಿ ಕಾಯಿದೆ ಜಾರಿಗೆ ಬಂದ ಬಳಿಕ ವೈದ್ಯರು ಹಾರ್ಮೋನ್ ಥೆರಪಿಗೆ ಚಿಕಿತ್ಸೆ ಮುಂದುವರಿಸಲು ಹೆದರುತ್ತಿದ್ದಾರೆ. ವೈದ್ಯಕೀಯ ಚಿಕಿತ್ಸೆ ಪಡೆಯಲು ನಿರ್ಬಂಧಿಸುವುದು ಸಂವಿಧಾನದ 14 ಮತ್ತು 21ನೇ ವಿಧಿಯ ಉಲ್ಲಂಘನೆಯಾಗಲಿದೆ ಎಂದಿದ್ದರು.

ತಿದ್ದುಪಡಿ ಕಾಯಿದೆಯಲ್ಲಿ ತೃತೀಯ ಲಿಂಗಿ ವ್ಯಾಖ್ಯಾನ ಬದಲಿಸಲಾಗಿದ್ದು, ಅದರಿಂದ ತಮ್ಮನ್ನು ಕೈಬಿಟ್ಟಿರುವುದನ್ನು ಅರ್ಜಿದಾರ ತೃತೀಯ ಲಿಂಗಿ ಮಹಿಳೆಯರು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ಈಚೆಗೆ ತಿದ್ದುಪಡಿ ಕಾಯಿದೆಗೆ ತಡೆ ನೀಡುವುದಕ್ಕೆ ಸುಪ್ರೀಂ ಕೋರ್ಟ್ ನಿರಾಕರಿಸಿತ್ತು. ಕೇಂದ್ರ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಲು ನಿರ್ದೇಶಿಸಿತ್ತು.

# ಬಿಟ್‌ಕಾಯಿನ್ ಹಗರಣ: ಶ್ರೀಕಿ ಸೇರಿ ಮೂವರು ಇ.ಡಿ. ಕಸ್ಟಡಿಗೆ



**ಬೆಂಗಳೂರು, ಮೇ. 9:** ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಹ್ಯಾಕರ್ ಶ್ರೀಕೃಷ್ಣ ರಮೇಶ್ ಅಲಿಯಾಸ್ ಶ್ರೀಕಿ, ಸುನೀಶ್ ಹೆಗಡೆ ಮತ್ತು ರಾಬಿನ್ ಖಂಡೇಲವಾಲ್ ಅವರನ್ನು ಬೆಂಗಳೂರಿನ ವಿಶೇಷ ನ್ಯಾಯಾಲಯವು ಹತ್ತು ದಿನ ಜಾರಿ ನಿರ್ದೇಶನಾಲಯದ ಕಸ್ಟಡಿಗೆ ನೀಡಿದೆ.

ಬೆಂಗಳೂರಿನ ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ಉಸ್ತುವಾರಿ ನ್ಯಾಯಾಧೀಶರಾದ ಶಂಕರಪ್ಪ ನಿಂಬಣ್ಣ ಕಲ್ಕಣಿ ಅವರು ಆರೋಪಿಗಳನ್ನು ಮೇ 19ರವರೆಗೆ ಇ.ಡಿ ಕಸ್ಟಡಿಗೆ ನೀಡಿದ್ದಾರೆ.

ಬಂಧಿತರನ್ನು ಶನಿವಾರ ಬೆಳಗ್ಗೆ ರಾಷ್ಟ್ರೀಯ ಕ್ರೀಡಾ ಗ್ರಾಮದಲ್ಲಿರುವ ನ್ಯಾಯಾಧೀಶರ ಗೃಹ ಕಚೇರಿಯಲ್ಲಿ ಹಾಜರುಪಡಿಸಲಾಗಿತ್ತು. ವಿಚಾರಣೆಯ ವೇಳೆ ಶ್ರೀಕಿ ಪರ ವಕೀಲರು ವೈದ್ಯಕೀಯ ದಾಖಲೆಗಳನ್ನು ಸಲ್ಲಿಸಿ, ಆರೋಪಿಯು ಮಾನಸಿಕ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾರೆ ಎಂದು ವಾದಿಸಿದರು. ಇದನ್ನು ಗಣನೆಗೆ ತೆಗೆದುಕೊಳ್ಳದ ನ್ಯಾಯಾಲಯವು ಎಲ್ಲಾ ಆರೋಪಿಗಳನ್ನು ಕೇಂದ್ರ ತನಿಖಾ ಸಂಸ್ಥೆಯ ಸುಪರ್ದಿಗೆ ನೀಡಿದ್ದಾರೆ.

ಕರ್ನಾಟಕ ಸರ್ಕಾರ ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಿಂದ ರೂ.11.5 ಕೋಟಿ ಕದ್ದಿರುವುದು, ಭಾರತದ ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ವಿದೇಶದಲ್ಲಿ ಕ್ರಿಪ್ಟೋ ಕರೆನ್ಸಿ ಬದಲಾವಣೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ಇ.ಡಿ.ಯು ತನಿಖೆ ನಡೆಸುತ್ತಿದೆ.

ಇತ್ತೀಚೆಗೆ ಶ್ರೀಕಿ ಸ್ನೇಹಿತ ಎನ್ನಲಾದ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಮನೆಯಲ್ಲಿಯೂ ಇಡಿ ಶೋಧ ನಡೆಸಿತ್ತು. ಯುನೋ ಕಾಯಿನ್ ಹ್ಯಾಕಿಂಗ್ ಮತ್ತು ಕದ್ದಿರುವ ಆರೋಪಕ್ಕೆ ಸಂಬಂಧಿಸಿದಂತೆ ಸಿಐಡಿಯು ಶ್ರೀಕಿ ಮತ್ತಿತರರ ವಿರುದ್ಧ ತನಿಖೆ ನಡೆಸಿತ್ತು.

ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ಬಿಟ್ ಕಾಯಿನ್ ಬಳಸಿ ಡಾರ್ಕ್‌ನೆಟ್ ಮೂಲಕ ಮಾದಕ ದ್ರವ್ಯ ತರಿಸಿದ ಆರೋಪದ ಸಂಬಂಧ ಕಾಟನ್‌ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಹಿರಿಯ ಐಪಿಎಸ್ ಅಧಿಕಾರಿ ಮನೀಷ್ ಖರ್ಬೀಕರ್ ನೇತೃತ್ವದಲ್ಲಿ ಬಿಟ್ ಕಾಯಿನ್ ಹಗರಣದ ತನಿಖೆಗೆ ಎಸ್‌ಐಟಿ ನೇಮಿಸಿತ್ತು. ಆನಂತರ 2024ರ ಜುಲೈನಲ್ಲಿ ಶ್ರೀಕಿ ಮತ್ತು ಖಂಡೇಲವಾಲಾ ವಿರುದ್ಧ ದಾಖಲಾಗಿರುವ ಕೋಕಾ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿತ್ತು.

ಈ ಇಬ್ಬರೂ 2020ರಲ್ಲಿ ಅಶೋಕ ನಗರ ಠಾಣೆಯಲ್ಲಿ ದಾಖಲಾಗಿರುವ ವಂಚನೆ ಪ್ರಕರಣದ ರದ್ದತಿ ಕೋರಿ ಸಲ್ಲಿಸಿರುವ ಅರ್ಜಿಯು ಹೈಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ಇದೆ.

### 56,432 ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿ

## ಪಿ.ಸಿ. ಹೋಟಾ ಸಮಿತಿ ವರದಿ ಜಾರಿಗೆ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಆಗ್ರಹ

**ಬೆಂಗಳೂರು, ಮೇ.9:** 56,432 ಹುದ್ದೆಗಳ ಅಧಿಸೂಚನೆಯನ್ನು ಕೂಡಲೇ ಹೊರಡಿಸಲು ಹಾಗೂ ಕೆಪಿಎಸ್‌ಸಿ ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿ ವರದಿ ಜಾರಿಗೊಳಿಸಲು ಅಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಬೆಂಗಳೂರು ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಲಾಯಿತು.



ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯಿಂದ ರಾಜ್ಯಾದ್ಯಂತ ನಿರಂತರವಾಗಿ ರಾಜ್ಯ ಹಾಗೂ ಕೇಂದ್ರದಲ್ಲಿ ಎಲ್ಲ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕಾಯಂ ಹಾಗೂ ಪಾರದರ್ಶಕ ನೇಮಕಾತಿಗಾಗಿ ಆಗ್ರಹಿಸಿ ಹೋರಾಟಗಳನ್ನು ಬೆಳೆಸುತ್ತ ಬಂದಿದೆ.

ಎಲ್ಲ ಹೋರಾಟಗಳ ಪ್ರತಿಫಲವಾಗಿ ರಾಜ್ಯಸರ್ಕಾರವು ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ 56,432 ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಘೋಷಿಸಿತ್ತು. ನಂತರವೂ ವಿವಿಧ ಇಲಾಖೆಗಳ ಸಚಿವರು ಅತೀ ಶೀಘ್ರದಲ್ಲಿ ನೇಮಕಾತಿ ಮಾಡುತ್ತೇವೆಂದು ದಿನಕ್ಕೊಂದು ಹೇಳಿಕೆಗಳನ್ನು ನೀಡುತ್ತಿರುವುದು ಉದ್ಯೋಗಾಕಾಂಕ್ಷಿಗಳಿಗೆ ಭ್ರಮನಿರಸನ ಉಂಟುಮಾಡಿದೆ.

ಈ ಘೋಷಣೆ ಮಾಡಿ ಐದು ತಿಂಗಳು ಕಳೆದಿದ್ದರೂ ಈವರೆಗೂ ಯಾವುದೇ ನೇಮಕಾತಿಗಳಿಗೆ ಅಧಿಸೂಚನೆ ಹೊರಡಿಸಿಲ್ಲ. ಆದ್ದರಿಂದ ಉದ್ಯೋಗಾಕಾಂಕ್ಷಿಗಳು ಸರ್ಕಾರದ ಘೋಷಣೆಗಳನ್ನು ನಂಬಲು ಸಾಧ್ಯವಾಗದೆ, ವಿಶ್ವಾಸ ಕಳೆದುಕೊಂಡು ಮತ್ತೆ ಹೋರಾಟ ಮುಂದುವರೆಸಲಾಗಿದೆ ಎಂದು ಸಮಿತಿಯು ತಿಳಿಸಿದೆ.

ಕೆಪಿಎಸ್‌ಸಿ ನಡೆಸಿದ ಕೆಎಎಸ್ ಪರೀಕ್ಷೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿರುವ ಬಗ್ಗೆಯೂ ವರದಿಗಳು ಬಂದಿದ್ದು, ಇದರ ಬಗ್ಗೆ ಸಮಗ್ರ ತನಿಖೆಯಾಗಬೇಕು. ಈ ಹಿಂದೆಯೂ ಕೆಪಿಎಸ್‌ಸಿ ನಡೆಸಿದ ಹಲವಾರು ನೇಮಕಾತಿ ಪ್ರಕ್ರಿಯೆಗಳಲ್ಲಿ ಭ್ರಷ್ಟಾಚಾರ ಗಳು ನಡೆದಿವೆ. ಆದ್ದರಿಂದ ಕೂಡಲೇ ಕೆಪಿಎಸ್‌ಸಿಯನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ ಮುಂದಿನ ಎಲ್ಲ ನೇಮಕಾತಿಗಳು ಪಾರದರ್ಶಕವಾಗಿ ನಡೆಯುವಂತೆ ಖಾತ್ರಿಪಡಿಸಬೇಕು ಎಂದು ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯು ಆಗ್ರಹಿಸಿತು.

### ಜನಸಂಖ್ಯೆ ಅಂಕಿ-ಅಂಶಗಳ ಆಧಾರದಲ್ಲಿ ದೆಹಲಿ, ಮುಂಬೈಗಿಂತಲೂ ಅಧಿಕ

# ಬೆಂಗಳೂರು ಆತ್ಮಹತ್ಯೆಗಳ ನಗರ: ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ವರದಿ

**ಬೆಂಗಳೂರು, ಮೇ 9:** ದೇಶದ 53 ನಗರಗಳಲ್ಲಿ ದಾಖಲಾದ ಆತ್ಮಹತ್ಯೆ ಪ್ರಕರಣಗಳ ವಿವರವನ್ನು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ– ಎನ್‌ಸಿಆರ್‌ಬಿ ಬಿಡುಗಡೆ ಮಾಡಿದೆ.

ಈ ವರದಿ ಪ್ರಕಾರ ದೆಹಲಿ ನಂತರ ಬೆಂಗಳೂರೇ ಆತ್ಮಹತ್ಯೆಗಳ ರಾಜಧಾನಿ ಎನಿಸಿಕೊಂಡಿದೆ. 2024ರಲ್ಲಿ ದೆಹಲಿಯಲ್ಲಿ 2,905 ಆತ್ಮಹತ್ಯೆ ಪ್ರಕರಣಗಳು ದಾಖಲಾಗಿದ್ದರೆ, ಬೆಂಗಳೂರಿನಲ್ಲಿ 2,403 ಆತ್ಮಹತ್ಯೆಗಳು ಸಂಭವಿಸಿವೆ. ಇನ್ನು ಮುಂಬೈನಲ್ಲಿ 1,406 ಆತ್ಮಹತ್ಯೆ ಪ್ರಕರಣಗಳು ದಾಖಲಾಗಿವೆ.

ಆದರೆ ದೆಹಲಿಯಲ್ಲಿ (ಜನಸಂಖ್ಯೆಯ ಅಂದಾಜು ಅಂಕಿಅಂಶಗಳ ಆಧಾರದ ಮೇಲೆ) ಆತ್ಮಹತ್ಯೆ ಪ್ರಮಾಣವು ಲಕ್ಷ ಜನರಿಗೆ 13.2 ಆಗಿದೆ. ಬೆಂಗಳೂರಿನಲ್ಲಿ ಲಕ್ಷ ಜನರಲ್ಲಿ 16.7 ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಮುಂಬೈನಲ್ಲಿ ಈ ಪ್ರಮಾಣ 11 ಆಗಿದೆ. ಅಂದರೆ ಈ ಅಗ್ರ ಮೂರು ನಗರಗಳಲ್ಲಿ ಬೆಂಗಳೂರಿನ ಜನಸಂಖ್ಯೆ ಆಧಾರದಲ್ಲಿ ನೋಡಿದಾಗ, ನಗರದಲ್ಲಿ ಆತ್ಮಹತ್ಯೆ ಪ್ರಮಾಣ ಅಧಿಕವಾಗಿದೆ.

ಇನ್ನು ಆತ್ಮಹತ್ಯೆ ಮಾಡಿಕೊಂಡವರಲ್ಲಿ ವಿವಾಹಿತರೇ ಅಧಿಕವಾಗಿದ್ದಾರೆ.

ಇನ್ನು ಕರ್ನಾಟಕದ ಸ್ಥಿತಿ ಚಿಂತಾಜನಕವಾಗಿದೆ ಎಂಬುದನ್ನು ಎನ್‌ಸಿಆರ್‌ಬಿ ವರದಿ ಹೇಳುತ್ತದೆ. 2022 ಮತ್ತು 2024ರ ನಡುವೆ ರಾಜ್ಯದ ಒಟ್ಟಾರೆ ಆತ್ಮಹತ್ಯೆ ಪ್ರಕರಣವು ಹೆಚ್ಚಳವಾಗುತ್ತಲೇ ಸಾಗಿದೆ. ಅದರಲ್ಲೂ ಬೆಂಗಳೂರು ನಗರದಲ್ಲೇ ಅಧಿಕ ಆತ್ಮಹತ್ಯೆ ಪ್ರಕರಣಗಳು ದಾಖಲಾಗಿವೆ.

ಎನ್‌ಸಿಆರ್‌ಬಿ ಪ್ರಕಾರ, ಬೆಂಗಳೂರಿನಲ್ಲಿ 2022ರಲ್ಲಿ 2,313ಕ್ಕೂ ಹೆಚ್ಚು, 2023ರಲ್ಲಿ 2370 ಮತ್ತು 2024ರಲ್ಲಿ 2430 ಆತ್ಮಹತ್ಯೆ ಪ್ರಕರಣಗಳು ದಾಖಲಾಗಿವೆ. ಮೂರು ವರ್ಷಗಳ ಅವಧಿಯಲ್ಲಿ ನಗರದ ಆತ್ಮಹತ್ಯೆ ಪ್ರಮಾಣವು ಪ್ರತಿ ಲಕ್ಷ ಜನಸಂಖ್ಯೆಗೆ 20ರ ಸಮೀಪದಲ್ಲಿದೆ.

ಕೆಲಸದ ಒತ್ತಡ, ವಲಸೆ ಒತ್ತಡ, ಹೆಚ್ಚುತ್ತಿರುವ ಜೀವನ ವೆಚ್ಚಗಳು ಮತ್ತು ದುರ್ಬಲಗೊಳ್ಳುತ್ತಿರುವ ಸಾಮಾಜಿಕ ವ್ಯವಸ್ಥೆಯೇ ಈ ಆತ್ಮಹತ್ಯೆಗಳಿಗೆ ಕಾರಣ ಎಂದು ಮಾನಸಿಕ ಆರೋಗ್ಯ ತಜ್ಞರು ಅಭಿಪ್ರಾಯಿಸಿದ್ದಾರೆ.

NATIONAL CRIME RECORDS BUREAU
ENVISION EXCEL ENABLE
EMPOWERING POLICE WITH IT

2022ರಲ್ಲಿ ದೆಹಲಿಯಲ್ಲಿ ಆತ್ಮಹತ್ಯೆಯಿಂದ 3,417 ಮಂದಿ ಸಾವನ್ನಪ್ಪಿದ್ದಾರೆ. ಆದರೆ 2023ರಲ್ಲಿ ಈ ಸಂಖ್ಯೆ 3,131ರಷ್ಟಿದ್ದು, ಆತ್ಮಹತ್ಯೆ ಪ್ರಕರಣಗಳು ಕೊಂಚ ಕಡಿಮೆಯಾಗಿದೆ. ಇನ್ನು 2024ರಲ್ಲಿ ಒಟ್ಟು 2,905 ಮಂದಿ ಆತ್ಮಹತ್ಯೆ ಮಾಡಿಕೊಂಡಿದ್ದು, ಈ ಪೈಕಿ ಪುರುಷರು 2,078 (71.5%), ಮಹಿಳೆಯರು 825 (28.4%) ಮತ್ತು ಇಬ್ಬರು ಲಿಂಗತ್ವ ಅಲ್ಪಸಂಖ್ಯಾತರು ಆಗಿದ್ದಾರೆ. ಆತ್ಮಹತ್ಯೆಗಳಿಗೆ ಕುಟುಂಬ ಸಂಬಂಧಿತ ಸಮಸ್ಯೆಗಳು ಪ್ರಮುಖ ಕಾರಣವಾಗಿದೆ. ಅದನ್ನು ಬಿಟ್ಟರೆ ವೈವಾಹಿಕ ಸಮಸ್ಯೆ, ನಿರುದ್ಯೋಗ ಸಮಸ್ಯೆಯಿಂದಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

### ಮೇ 11ರಿಂದಲೇ ಜಾರಿ, 6 ದಶಕಗಳ ಬಲ್ಕ್ ಲೀಟರ್ ಆಧಾರತಿ ತೆರಿಗೆ ವ್ಯವಸ್ಥೆಗೆ ತೆರೆ

# ಆಲ್ಕೋಹಾಲ್ ಇನ್ ಬೆವರೇಜ್: ಹೊಸ ಅಬಕಾರಿ ನೀತಿ ಜಾರಿಗೆ ಅಧಿಸೂಚನೆ

**ಬೆಂಗಳೂರು, ಮೇ 9:** ರಾಜ್ಯ ಸರ್ಕಾರ ಮದ್ಯದ ಮೇಲಿನ ತೆರಿಗೆ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತಂದು, ಆಲ್ಕೋಹಾಲ್ ಇನ್ ಬೇವರೇಜ್ ಆಧಾರಿತ ಹೊಸ ಅಬಕಾರಿ ನೀತಿ ಜಾರಿಗೆ ತರಲು ಅಂತಿಮ ಅಧಿಸೂಚನೆ ಹೊರಡಿಸಿದೆ. ಈ ಹೊಸ ನೀತಿ ಮೇ 11ರಿಂದ ರಾಜ್ಯಾದ್ಯಂತ ಜಾರಿಗೆ ಬರಲಿದೆ. ಈ ಮೂಲಕ ಕಳೆದ 6 ದಶಕಗಳಿಂದ ಜಾರಿಯಲ್ಲಿದ್ದ ಬಲ್ಕ್ ಲೀಟರ್ ಆಧಾರಿತ ತೆರಿಗೆ ವ್ಯವಸ್ಥೆಗೆ ತೆರೆ ಬೀಳಲಿದೆ.



ಕರ್ನಾಟಕವು ದೇಶದಲ್ಲೇ ಮೊದಲ ಬಾರಿಗೆ 'ಆಲ್ಕೋಹಾಲ್ ಇನ್ ಬೇವರೇಜ್' ಆಧಾರಿತ ತೆರಿಗೆ ನೀತಿಯನ್ನು ಅನುಷ್ಠಾನಗೊಳಿಸುತ್ತಿರುವ ರಾಜ್ಯವಾಗಿದೆ. ಸರ್ಕಾರವು ಏಪ್ರಿಲ್ 18ರಂದು ಕರಡು ಅಧಿಸೂಚನೆ ಹೊರಡಿಸಿ ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಸಲಹೆಗಳನ್ನು ಆಹ್ವಾನಿಸಿತ್ತು. ಬಂದ ಅಭಿಪ್ರಾಯಗಳನ್ನು ಪರಿಗಣಿಸಿದ ಬಳಿಕ ಕರ್ನಾಟಕ ಅಬಕಾರಿ (ಅಬಕಾರಿ ಸುಂಕ ಮತ್ತು ಶುಲ್ಕ) (2ನೇ ತಿದ್ದುಪಡಿ) ನಿಯಮಗಳು, 2026 ಅನ್ನು ಅಂತಿಮಗೊಳಿಸಲಾಗಿದೆ.ಹೊಸ ನೀತಿಯ ಪ್ರಕಾರ, ಬ್ರಾಂದಿ, ವಿಸ್ಕಿ, ರಮ್, ಜಿನ್, ಬಿಯರ್, ವೈನ್ ಸೇರಿದಂತೆ ವಿವಿಧ ಮದ್ಯಗಳಲ್ಲಿ ಇರುವ ಆಲ್ಕೋಹಾಲ್ ಪ್ರಮಾಣ ಆಧರಿಸಿ ತೆರಿಗೆ ವಿಧಿಸಲಾಗುತ್ತದೆ. ಇದರಿಂದ ಈಗಿರುವ 16 ಅಬಕಾರಿ ಸ್ಲ್ಯಾಬ್‌ಗಳನ್ನು ಕಡಿತಗೊಳಿಸಿ ಕೇವಲ 8 ಸ್ಲ್ಯಾಬ್‌ಗೆ ಸೀಮಿತಗೊಳಿಸಲಾಗಿದೆ.

ಅಬಕಾರಿ ಇಲಾಖೆಯ ಆದಾಯದಲ್ಲಿ ಪ್ರಮುಖ ಪಾತ್ರವಹಿಸುವ ಕಡಿಮೆ ದರದ ಮದ್ಯ ವಿಭಾಗದ ಮೇಲೆ ಈ ನೀತಿಯ ಪರಿಣಾಮ ಹೆಚ್ಚು ಕಾಣಿಸಿಕೊಳ್ಳಲಿದೆ ಎಂದು ಉದ್ಯಮ ಮೂಲಗಳು ತಿಳಿಸಿವೆ.

**ಭಾರತೀಯ ಮದ್ಯ ಉತ್ಪಾದಕರಿಗೆ ಹೊರೆ:** ವಿಶೇಷವಾಗಿ ಹೆಚ್ಚು ಮಾರಾಟವಾಗುವ 180 ಮಿಲಿ ಟೆಟ್ರಾ ಪ್ಯಾಕ್‌ಗಳ ವಿಸ್ಕಿ, ರಮ್, ಬ್ರಾಂಡಿ, ಜಿನ್ ಹಾಗೂ ವೋಡ್ಕಾ ಬೆಲೆ ಕನಿಷ್ಠ 20% ಹೆಚ್ಚಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಇದೇ ವೇಳೆ ಪ್ರೀಮಿಯಂ ಮದ್ಯ ಬ್ರ್ಯಾಂಡ್‌ಗಳ ಬೆಲೆ ಶೇ.16 ರಿಂದ ಶೇ.20ವರೆಗೆ ಇಳಿಕೆಯಾಗುವ ಸಾಧ್ಯತೆ ಇದೆ.

ಇದರಿಂದ ಬಹುರಾಷ್ಟ್ರೀಯ ಪ್ರೀಮಿಯಂ ಬ್ರ್ಯಾಂಡ್‌ಗಳಿಗೆ ಲಾಭವಾಗಬಹುದು, ಆದರೆ, ಸ್ಥಳೀಯ ಡಿಸ್ಟಿಲರಿಗಳು ಮತ್ತು ಪ್ರಾದೇಶಿಕ ಉತ್ಪಾದಕರಿಗೆ ಹಿನ್ನಡೆ ಉಂಟಾಗಬಹುದು ಎಂದು ಉದ್ಯಮ ವಲಯ ಆತಂಕ ವ್ಯಕ್ತಪಡಿಸಿದೆ. ಕಡಿಮೆ ಬೆಲೆಯ ಭಾರತೀಯ ಮದ್ಯ ಉತ್ಪಾದಕರಿಗೆ ಈ ಹೊಸ ವ್ಯವಸ್ಥೆ ಹೊರೆ ಆಗಬಹುದು. ಸ್ಥಳೀಯ ಹೂಡಿಕೆ ಮತ್ತು ಉದ್ಯೋಗಾವಕಾಶಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಇನ್ನೊಂದೆಡೆ, ಇಂಡಿಯನ್ ಸ್ಪಿರಿಟ್ಸ್ ಅಂಡ್ ವೈನ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಈ ನೀತಿಯನ್ನು ಸ್ವಾಗತಿಸಿದೆ. ಅಬಕಾರಿ ವ್ಯವಸ್ಥೆಯನ್ನು ಆಧುನೀಕರಿಸುವ ಹಾಗೂ ಸರಳಗೊಳಿಸುವ ಮುನ್ನೋಟದ ಹೆಜ್ಜೆಯಾಗಿದೆ. ಈ ಮೂಲಕ ಪ್ರೀಮಿಯಂ ಉತ್ಪನ್ನಗಳ ಬೆಳವಣಿಗೆಗೆ ಉತ್ತೇಜನ ಸಿಗಲಿದೆ.

### ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯಕಾರ್ಯದರ್ಶಿ ರಶ್ಮಿ ಮಹೇಶ್

# ವಿದ್ಯಾರ್ಥಿಗಳ ಪರೀಕ್ಷಾ ಮೌಲ್ಯಮಾಪನಕ್ಕೂ ಎಐ ತಂತ್ರಜ್ಞಾನ ಬಳಕೆ



**ಬೆಂಗಳೂರು, ಮೇ 9:** ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಈಗಾಗಲೇ ಸ್ಮಾರ್ಟ್ ಕ್ಲಾಸ್ ಮತ್ತು ಆನ್‌ಲೈನ್ ತರಗತಿಗಳ ಮೂಲಕ ತಂತ್ರಜ್ಞಾನ ಅಳವಡಿಸಿಕೊಂಡಿರುವ ಶಿಕ್ಷಣ ಇಲಾಖೆ ಈಗ ವಿದ್ಯಾರ್ಥಿಗಳ ಪರೀಕ್ಷಾ ಮೌಲ್ಯಮಾಪನ ಪ್ರಕ್ರಿಯೆ ಯಲ್ಲೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಬಳಸಲು ಮುಂದಾಗಿದೆ.

8ರಿಂದ 12ನೇ ತರಗತಿಯ ವಿದ್ಯಾರ್ಥಿಗಳ ಪತ್ಯ ಆಧಾರಿತ ಪರೀಕ್ಷೆಗಳ ಮೌಲ್ಯಮಾಪನಕ್ಕಾಗಿ ಈ ವಿಶೇಷ ಎಐ ತಂತ್ರಜ್ಞಾನವನ್ನು ಬಳಸಲು ಇಲಾಖೆ ಸಿದ್ಧತೆ ನಡೆಸಿದೆ. ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ನಿಖರವಾಗಿ ಅಳೆಯಲು ಈ ವ್ಯವಸ್ಥೆ ಸಹಕಾರಿಯಾಗಲಿದ್ದು, ಮುಂದಿನ ಶೈಕ್ಷಣಿಕ ವರ್ಷದಿಂದ ಇದು ಜಾರಿಗೆ ಬರುವ ಸಾಧ್ಯತೆಯಿದೆ. ಶಿಕ್ಷಕರು ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಅಥವಾ ಫೋಟೋ ತೆಗೆದು ನಿಗದಿತ ಆಪ್‌ನಲ್ಲಿ ಅಪ್‌ಲೋಡ್ ಮಾಡ ಬೇಕಾಗುತ್ತದೆ. ಈ ಎಐ ತಂತ್ರಜ್ಞಾನವು ಉತ್ತರಗಳನ್ನು ಪರಿಶೀಲಿಸಿ ಅಂಕಗಳನ್ನು ನೀಡುವುದಲ್ಲದೆ, ದತ್ತಾಂಶವನ್ನು ಕೂಡ ಸಂಗ್ರಹಿಸುತ್ತದೆ. ಇದರಿಂದ ಮೌಲ್ಯಮಾಪನ ಪ್ರಕ್ರಿಯೆ ವೇಗವಾಗಿ ಮತ್ತು ನಿಖರವಾಗಿ ನಡೆಯಲಿದೆ.ಈ ತಂತ್ರಜ್ಞಾನದ ಬಳಕೆಯಿಂದ ಶಿಕ್ಷಕರ ಮೇಲಿನ ಮೌಲ್ಯಮಾಪನದ ಹೊರೆ ಗಣನೀಯವಾಗಿ ಕಡಿಮೆಯಾಗಲಿದೆ.

"ಒಂದೇ ಬಾರಿಗೆ ಸುಮಾರು 15 ಲಕ್ಷ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡುವ ಸಾಮರ್ಥ್ಯ ಈ ವ್ಯವಸ್ಥೆಗಿದೆ. ಇದರಿಂದ ಉಳಿತಾಯವಾಗುವ ಸಮಯವನ್ನು ಶಿಕ್ಷಕರು ವಿದ್ಯಾರ್ಥಿಗಳ ಕಲಿಕಾ ಪ್ರಗತಿಗೆ ಬಳಸಿಕೊಳ್ಳಬಹುದು" ಎಂದು ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಶ್ಮಿ ವಿ. ಮಹೇಶ್ ತಿಳಿಸಿದ್ದಾರೆ. ಕೇವಲ ಮೌಲ್ಯಮಾಪನ ಮಾತ್ರವಲ್ಲದೆ, ಪ್ರಶ್ನೆ ಪತ್ರಿಕೆಗಳ ಸಿದ್ಧತೆಯಲ್ಲೂ ಎಐ ನೆರವಾಗಲಿದೆ.

# ಗಿಗ್ ಕಾರ್ಮಿಕರ ಕುಂದು–ಕೊರತೆ ಆಲಿಸಲು ಸಮಸ್ಯೆ ಬಗೆಹರಿಸಲು ಡಿಜಿಟಲ್ ವೇದಿಕೆ



**ಬೆಂಗಳೂರು, ಮೇ 9:** ದೇಶದಲ್ಲೇ ಮೊದಲ ಬಾರಿಗೆ ಗಿಗ್ ಕಾರ್ಮಿಕರ ಕಲ್ಯಾಣಕ್ಕಾಗಿ ಕಾಯ್ದೆ ಜಾರಿಗೊಳಿಸಿ ಗಮನ ಸೆಳೆದಿರುವ ಕರ್ನಾಟಕ ಸರ್ಕಾರ, ಇದೀಗ ಅವರ ಕುಂದುಕೊರತೆಗಳನ್ನು ಆಲಿಸಲು ಹಾಗೂ ತ್ವರಿತವಾಗಿ ಪರಿಹರಿಸಲು ವಿಶೇಷ ಡಿಜಿಟಲ್ ವೇದಿಕೆಯೊಂದನ್ನು ಆರಂಭಿಸಿದೆ.

ಕರ್ನಾಟಕ ಗಿಗ್ ಕಾರ್ಮಿಕರ ಕಲ್ಯಾಣ ಮಂಡಳಿಯು, ಇ–ಆಡಳಿತ ಇಲಾಖೆಯ ಸಹಯೋಗದೊಂದಿಗೆ 'ಸಮಗ್ರ ಸಾರ್ವಜನಿಕ ಕುಂದುಕೊರತೆ ಪರಿಹಾರ ವ್ಯವಸ್ಥೆ' (ಐಪಿಜಿಆರ್‌ಎಸ್) ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಿದೆ. ಈ ಪೋರ್ಟಲ್ ಮೂಲಕ ಗಿಗ್ ಕಾರ್ಮಿಕರು ತಮ್ಮ ವೇತನ, ರಜೆ, ದುಡಿಯುವ ಸ್ಥಿತಿಗತಿ ಸೇರಿದಂತೆ ಉದ್ಯೋಗಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಗಳಿದ್ದರೂ ನೇರವಾಗಿ ದೂರು ನೀಡಬಹುದಾಗಿದೆ. ಹೀಗೆ ಸಲ್ಲಿಕೆಯಾಗುವ ದೂರುಗಳನ್ನು ಸಂಬಂಧಿಸಿದ ಕಂಪನಿಗಳಿಗೆ (ಟೆಕ್ ಅಗ್ರಿಗೇಟರ್‌ಗಳಿಗೆ) ವರ್ಗಾವಣೆ ಮಾಡಿ, ಪರಿಹಾರ ಒದಗಿಸಲಾಗುತ್ತದೆ.

ಈ ಡಿಜಿಟಲ್ ವೇದಿಕೆಯು ಲಕ್ಷಾಂತರ ಗಿಗ್ ಕಾರ್ಮಿಕರು ಮತ್ತು ಆಪ್ ಆಧಾರಿತ ಸೇವೆ ಒದಗಿಸುವ ಕಂಪನಿಗಳ ನಡುವೆ ಅಧಿಕೃತ ಸೇತುವೆಯಾಗಿ ಕಾರ್ಯನಿರ್ವಹಿಸಲಿದ್ದು, ವ್ಯವಸ್ಥೆಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುವ ನಿರೀಕ್ಷೆಯಿದೆ. ಈಗಾಗಲೇ 'ಯಾತ್ರಿ' ಸೇರಿದಂತೆ ಕೆಲವು ಫ್ಲಾಟ್‌ಫಾರ್ಮ್‌ಗಳು ತಮ್ಮ ಆಂತರಿಕ ಕುಂದುಕೊರತೆ ಪರಿಹಾರ ಸಮಿತಿಯನ್ನು ಸರ್ಕಾರದ ಈ ಪೋರ್ಟಲ್ ಜೊತೆ ಸಂಯೋಜಿಸಿವೆ. ಅಮೆಜಾನ್, ಫ್ಲಿಪ್ ಕಾರ್ಟ್‌ನಂತಹ ಇತರ ಪ್ರಮುಖ ಕಂಪನಿಗಳೊಂದಿಗೂ ಮಾತುಕತೆ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸಾರ್ವಜನಿಕ ಜೀವನದಲ್ಲಿ 50 ವರ್ಷಗಳನ್ನು ಆಚರಿಸಲು ಶನಿವಾರ ಚಿತ್ರದುರ್ಗದಲ್ಲಿ ನಡೆದ ಅಭಿಮಾನೋತ್ಸವದಲ್ಲಿ ನೆರೆದಿದ್ದ ಲಕ್ಷಾಂತರ ಅಭಿಮಾನಿಗಳು.

**ಕಲಬುರಗಿ, ಮೇ. 9:** ನಗರದ ಹೊರವಲಯದ ಚಿತ್ತಾಪುರ ರಸ್ತೆಯಲ್ಲಿರುವ ಮುಡಬೂಳ ಗ್ರಾಮದ ಬಳಿ 6.33 ಎಕರೆ ಪ್ರದೇಶದಲ್ಲಿ ನೂತನವಾಗಿ ನಿರ್ಮಾಣ ಗೊಂಡಿರುವ ಮೃಗಾಲಯ ಹಾಗೂ ಮಕ್ಕಳ ಉದ್ಯಾನವನ ಶೀಘ್ರ ಸಾರ್ವಜನಿಕರಿಗೆ ಲಭ್ಯವಾಗಲಿದ್ದು, ಮೇ.12ಕ್ಕೆ ಬನ್ನೇರುಘಟ್ಟದಿಂದ ಸಿಂಹ ಬರಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ಅರಿವಿನ ಮನೆಯಲ್ಲಿ ಮೃಗಾಲಯದ ಲೋಗೋ, ವಿಡಿಯೋ ಬಿಡುಗಡೆ ಮಾಡಿ ಮಾತನಾಡಿ, ವನ್ಯಜೀವಿ ಸಂರಕ್ಷಣಾ ಕಾಯ್ದೆ ಸೆಕ್ಷನ್ 38(1) ಅಡಿಯಲ್ಲಿ ಮೃಗಾಲಯ ಸ್ಥಾಪನೆಗೆ ಕೇಂದ್ರ ಮೃಗಾಲಯ ಪ್ರಾಧಿಕಾರದಿಂದ ಅನುಮತಿ ಪಡೆಯಲಾಗಿದೆ ಎಂದರು.

ಕಲಬುರಗಿ ಮೃಗಾಲಯ: ಚಿತ್ತಾಪುರ ರಸ್ತೆಯ ಮಡಬೂಳ ಗ್ರಾಮದಲ್ಲಿ 42 ಎಕರೆ 38 ಗುಂಟೆ ಜಾಗದಲ್ಲಿ ಈ ಮೃಗಾಲಯ



ಸ್ಥಾಪಿಸಲಾಗಿದೆ. ಎಲ್ಲ ಸಂಸ್ಥೆಗಳಿಂದ ಅನುಮತಿ ಪಡೆಯಲಾಗಿದೆ. ಸಕಲ ಸೌಲಭ್ಯ, ಅತ್ಯಾಧುನಿಕ ತಂತ್ರಜ್ಞಾನ ಆಧಾರಿತ ವ್ಯವಸ್ಥೆ ಕಲ್ಪಿಸಲಾಗಿದೆ. ಆಸ್ಪತ್ರೆ ಹಾಗೂ ಅಡುಗೆಮನೆ ಕಟ್ಟಡಗಳು ಅಗತ್ಯ ಔಷಧಿ ಮತ್ತು ಸ್ಟ್ರೆಚರ್, ಫ್ರೀಜರ್ ಮುಂತಾದ ಉಪಕರಣಗಳೊಂದಿಗೆ ಸಜ್ಜುಗೊಂಡಿವೆ.

ಸಾರ್ವಜನಿಕ ಸೌಲಭ್ಯಗಳು : ಮೃಗಾಲಯದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯಗಳು, ಶೆಡ್‌ಗಳು, ಬೆಂಚ್‌ಗಳು, ಉದ್ಯಾನ, ಮಕ್ಕಳ ಆಟದ ಪ್ರದೇಶ, ಸೂಚನಾ ಫಲಕಗಳು ಇತ್ಯಾದಿಗಳಿರಲಿವೆ.

ಒಟ್ಟು 56 ಜಾತಿಯ ಪ್ರಾಣಿಗಳಿಗೆ ಆವರಣ ನಿರ್ಮಾಣವಾಗಲಿವೆ. ನಿಶಾಚರ ಪ್ರಾಣಿಗಳು – 06, ಭಾರತೀಯ ಪಕ್ಷಿಗಳು 10, ಸಣ್ಣ ಪಕ್ಷಿಗಳು 06, ಫೀಸಂಟ್ 06, ಸಸ್ತನಿಗಳು 10, ಪ್ರೈಮೇಟ್‌ಗಳು 04, ಶಾಕಾಹಾರಿ ಪ್ರಾಣಿಗಳು 06, ಉಭಯಚರ/ ಸರೀಸೃಪಗಳು 08, ಆಮೆ, ಘರಿ ಯಾಲ್, ಮೊಸಳೆ, ಚುಕ್ಕೆ ಜಿಂಕೆ, ಗೋಲ್ಡನ್ ಜಾಕಲ್, ಹುಲಿ, ಸಿಂಹ, ಸ್ಲೋತ್ ಕರಡಿ, ಜೀಬ್ರಾ, ಬಬೂನ್, ಲಂಗೂರು ಹಾಗೂ ವಿವಿಧ ಪಕ್ಷಿಗಳಿ ಗಾಗಿ ಒಟ್ಟು 23 ಆವರಣಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ಎಂದರು.

ಆಮೆ, ಮೊಸಳೆ, ಇಮು, ಸಿಲ್ವರ್ ಫೀಸಂಟ್, ಗಿಳಿಗಳು, ನವಿಲುಗಳು, ಜಾಕಲ್, ಕಪ್ಪು ಗಿಡುಗಗಳು, ಲಂಗೂರು, ಕಪ್ಪು ಜಿಂಕೆಗಳುಜ ಈಗಾಗಲೇ ಮೃಗಾಲಯಕ್ಕೆ ಬಂದಿವೆ. 1 ತಿಂಗಳಲ್ಲಿ–ಸಿಂಹ, ಸಾಂಬರ್, ರೆಡ್ ಜಂಗಲ್ ಫೌಲ್, ಪೈಥಾನ್, 3 ತಿಂಗಳಲ್ಲಿ–ಹುಲಿ, ಬಬೂನ್, ಸ್ಲೋತ್ ಕರಡಿ, ಕಿಂಗ್ ಕೋಬ್ರಾ, 6 ತಿಂಗಳಲ್ಲಿ– ಜೀಬ್ರಾ, ಘರಿಯಾಲ್ ಹಾಗೂ ಇತರೆ ಪಕ್ಷಿ ಮತ್ತು ಸರೀಸೃಪ ಜಾತಿಯ ಪ್ರಾಣಿಗಳು ಈ ಹೊಸ ಮೃಗಾಲಯಕ್ಕೆ ಬರಲಿವೆ. ಮೃಗಾಲಯ ವೀಕ್ಷಿಸಲು ಸಾರ್ವಜನಿಕರಿಗೆ ಅವಕಾಶ ವಿದ್ದು,ಬೆಳಗ್ಗೆ 9.30 ರಿಂದ 5.30 ರವರೆಗೆ ಇದ್ದು, ಪ್ರತಿ ಮಂಗಳವಾರ ರಜೆ ಇರಲಿದೆ. ಪ್ರವೇಶ ಶುಲ್ಕ: 12 ವರ್ಷ ಮೇಲ್ಪಟ್ಟವರಿಗೆ– 75, 12 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ 40 ರೂ. ಇರಲಿದೆ. ಸರ್ಕಾರಿ ಶಾಲಾ ವಿದ್ಯಾರ್ಥಿಗಳ ಭೇಟಿ–25 ರೂ. ಇರಲಿದೆ ಎಂದರು.

# ಯಾರೇ ಮತಚೋರಿ ಮಾಡಿದ್ದರೂ ಶಿಕ್ಷೆಯಾಗಲಿ ದೇವರ ಮೊರೆಹೋದ ಕಾಂಗ್ರೆಸ್ ನಾಯಕರು

**ಚಿಕ್ಕಮಗಳೂರು, ಮೇ. 9:** ಶೃಂಗೇರಿ ಕ್ಷೇತ್ರದ ಅಂಚೆ ಮತ ಮರು ಎಣಿಕೆಯಲ್ಲಿ ಬಿಜೆಪಿ ಗೆಲುವು ಹಿನ್ನೆಲೆಯಲ್ಲಿ ಮತಚೋರಿ ಆರೋಪ ಮಾಡಿದ್ದ ಕಾಂಗ್ರೆಸ್ ನಾಯಕರು ದೇವರ ಮೊರೆ ಹೋಗಿದ್ದಾರೆ.

ಯಾರೇ ಮತಚೋರಿ ಮಾಡಿದ್ದರೂ ಶಿಕ್ಷೆಯಾಗಲಿ ಎಂದು ದೇವರ ಮೊರೆಹೋಗಿದ್ದಾರೆ. ಶೃಂಗೇರಿ ಮಾಜಿ ಶಾಸಕ ಟಿ.ಡಿ.ರಾಜೇಗೌಡ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ಕೊಪ್ಪ ವೀರಭದ್ರಸ್ವಾಮಿ ದೇಗುಲದಲ್ಲಿ ಸಂಕಲ್ಪ ಮಾಡಿದ್ದಾರೆ.ದೇವಸ್ಥಾನ, ಮಸೀದಿ ಹಾಗೂ ಚರ್ಚ್ ಮೂರರಲ್ಲೂ ಸಂಕಲ್ಪ ಮಾಡಲಿದ್ದಾರೆ.

ಮಾಜಿ ಶಾಸಕ ರಾಜೇಗೌಡ, ಮುಖಂಡರಾದ ರವಿಶಂಕರ್, ಸುಧೀರ್ ಕುಮಾರ್ ಮುರೊಳ್ಳಿಯಿಂದ ಸಂಕಲ್ಪ ಮಾಡಲಾಗಿದೆ. ಮಾಜಿ ಶಾಸಕ ರಾಜೇಗೌಡಗೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಸಾಥ್ ನೀಡಿದರು. ರಾಜೇಗೌಡ ಅವರು 2023ರಲ್ಲಿ 201 ಮತಗಳ ಅಂತರದಿಂದ ಗೆದ್ದು, 2026ರಲ್ಲಿ ಮರು ಎಣಿಕೆ ಸಂದರ್ಭ 52 ಮತಗಳ ಅಂತರದ ಸೋತಿದ್ದರು. 2023ರಲ್ಲಿ ಮಾನ್ಯವಾಗಿದ್ದ 255 ಮತ, 2026ರಲ್ಲಿ ಅಮಾನ್ಯವಾಗಲು ಹೇಗೆ ಸಾಧ್ಯ. ಕಾಂಗ್ರೆಸ್–ಬಿಜೆಪಿ ಯಾರೇ ಮತಚೋರಿ ಮಾಡಿದ್ದರು. ಶಿಕ್ಷೆಯಾಗಲಿ ಎಂದು ಸಂಕಲ್ಪ ಮಾಡಿದ್ದಾರೆ. ರಾಜೇಗೌಡ ಅವರು ಈಗಾಗಲೇ ಸುಪ್ರೀಂಕೋರ್ಟ್ ಮೊರೆ ಹೋಗಿದ್ದಾರೆ.

### ರಕ್ಷಿಸಲ್ಪಟ್ಟ ಅಸಹಾಯಕ ವ್ಯಕ್ತಿ ಕೊಲೆ ಆರೋಪಿ

# ವ್ಯಕ್ತಿಯನ್ನು ವಶಕ್ಕೆ ಪಡೆಯಲು ಮಂಗಳೂರಿಗೆ ಆಗಮಿಸಿದ ತಮಿಳುನಾಡು ಪೊಲೀಸರು



**ಮಂಗಳೂರು, ಮೇ 9:** ಅಸಹಾಯಕ ಸ್ಥಿತಿಯಲ್ಲಿದ್ದಾನೆಂದು ಭಾವಿಸಿ ವೈಟ್ ಡೌವ್ಸ್ ಸಂಸ್ಥೆಯಿಂದ ರಕ್ಷಿಸಲ್ಪಟ್ಟ ತಮಿಳುನಾಡು ಮೂಲದ ವ್ಯಕ್ತಿಯೊಬ್ಬ, ಅಲ್ಲಿನ ಭಯಾನಕ ಕೊಲೆ ಪ್ರಕರಣವೊಂದರ ಪ್ರಮುಖ ಆರೋಪಿ ಎಂಬ ಅಚ್ಚರಿಯ ಸಂಗತಿ ಬೆಳಕಿಗೆ ಬಂದಿದೆ. ಆರೋಪಿ ಅನೀಶ್ ಕುಮಾರ್‌ನನ್ನು ವಶಕ್ಕೆ ಪಡೆಯಲು ತಮಿಳುನಾಡು ಪೊಲೀಸರು ಈಗ ಮಂಗಳೂರಿಗೆ ಧಾವಿಸಿದ್ದಾರೆ.

2025ರ ನವೆಂಬರ್ 25ರಂದು ಮಂಗಳೂರಿನ ರಸ್ತೆ ಬದಿಯಲ್ಲಿ ತೀವ್ರ ಗಾಯಗೊಂಡು, ಸೋಂಕಿನಿಂದಾಗಿ ನಡೆಯಲೂ ಸಾಧ್ಯವಾಗದ ಸ್ಥಿತಿಯಲ್ಲಿದ್ದ ವ್ಯಕ್ತಿಯನ್ನು ಸಾರ್ವಜನಿಕರ ದೂರಿನ ಮೇರೆಗೆ ವೈಟ್ ಡೌವ್ಸ್ ಸಂಸ್ಥೆಯವರು ರಕ್ಷಿಸಿದ್ದರು. ಆತನಿಗೆ ಸುದೀರ್ಘ ಚಿಕಿತ್ಸೆ ನೀಡಿದ ಬಳಿಕ ಆತ ಚೇತರಿಸಿಕೊಂಡಿದ್ದನು. ಚಿಕಿತ್ಸೆಯ ನಂತರ ನಡೆದ ಆಪ್ತ ಸಮಾಲೋಚನೆಯಲ್ಲಿ ಆತ ತನ್ನ ಹೆಸರು ಅನೀಶ್ ಕುಮಾರ್ ಎಂದು ಹೇಳಿಕೊಂಡಿದ್ದ. ಆತನ ತಾಯಿ ರಾಧಾ ತಮಿಳುನಾಡಿನ ಆಸ್ಪತ್ರೆಯೊಂದರ ಕ್ಯಾಂಟೀನ್‌ನಲ್ಲಿ ಕೆಲಸ ಮಾಡುತ್ತಿದ್ದಾರೆಂಬ ಮಾಹಿತಿಯ ಮೇರೆಗೆ ಪೊಲೀಸರು ತನಿಖೆ ನಡೆಸಿದ್ದರು.

ಆದರೆ, ರಾಧಾ ಅವರು "ನನಗೆ ಮಗಳೊಬ್ಬಳೇ ಇರುವುದು, ಈತ ಯಾರೆಂದು ಗೊತ್ತಿಲ್ಲ" ಎಂದು ಹೇಳಿದ್ದು ಪೊಲೀಸರಲ್ಲಿ ಅನುಮಾನ ಮೂಡಿಸಿತ್ತು.

ಮಂಗಳೂರು ಪೊಲೀಸರು ತಮಿಳುನಾಡಿನ ಎರ್ನೇಲ್ ಪೊಲೀಸ್ ಠಾಣೆಯನ್ನು ಸಂಪರ್ಕಿಸಿದಾಗ ಸ್ಫೋಟಕ ಮಾಹಿತಿ ಲಭ್ಯವಾಗಿದೆ. ಅನೀಶ್ ಕುಮಾರ್ ತನ್ನ ಸ್ನೇಹಿತನ ಮೇಲೆ ಕೋಪಗೊಂಡು ಕಲ್ಲಿನಿಂದ ಹೊಡೆದು ಬರ್ಬರವಾಗಿ ಕೊಲೆ ಮಾಡಿದ ಆರೋಪ ಹೊತ್ತಿದ್ದನು. ಈ ಕೃತ್ಯದ ನಂತರ ಪೊಲೀಸರ ಕಣ್ಣಿಗೆ ಮಣ್ಣೆರಚಿ ತಲೆಮರೆಸಿಕೊಂಡಿದ್ದ ಆತ, ಮಂಗಳೂರಿಗೆ ಬಂದು ದಕ್ಕೆಯಲ್ಲಿ ಕೆಲಸ ಮಾಡಿಕೊಂಡಿದ್ದ ಎಂದು ತಿಳಿದುಬಂದಿದೆ.ಪ್ರಸ್ತುತ ತಮಿಳುನಾಡು ಪೊಲೀಸರು ಅಗತ್ಯ ದಾಖಲೆಗಳೊಂದಿಗೆ ಮಂಗಳೂರಿಗೆ ಬಂದಿಳಿದಿದ್ದು, ಆರೋಪಿಯನ್ನು ಕಾನೂನುಬದ್ಧವಾಗಿ ವಶಕ್ಕೆ ಪಡೆಯುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಸದ್ಯಕ್ಕೆ ಮಂಗಳೂರು ಪೊಲೀಸರ ಬಿಗಿ ಕಾವಲಿನಲ್ಲಿರುವ ಈತನನ್ನು ಹೆಚ್ಚಿನ ವಿಚಾರಣೆಗಾಗಿ ತಮಿಳುನಾಡಿಗೆ ಕರೆದೊಯ್ಯುವ ಸಾಧ್ಯತೆಯಿದೆ.

# ಕಲ್ಮಠ ಮಹಿಳಾ ಕಾಲೇಜಿನಲ್ಲಿ ಮಹಿಳಾ ಕಲೋತ್ಸವ

**ಕೊಪ್ಪಳ, ಮೇ,9–**ಗಂಗಾವತಿ ನಗರದ ಶ್ರೀ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ಶ್ರೀ ಚನ್ನಬಸವಸ್ವಾಮಿ ಮಹಿಳಾ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ವಾರ್ಷಿಕೋತ್ಸವದ ಅಂಗವಾಗಿ ವಿಶ್ವಚೇತನ ವಿದ್ಯಾರ್ಥಿನಿ ಒಕ್ಕೂಟದಿಂದ ವಿದ್ಯಾರ್ಥಿನಿಯರಿಗಾಗಿ ಮಹಿಳಾ ಕಲೋತ್ಸವ ಎಂಬ ಸೃಜನಶೀಲ ಅಭಿವ್ಯಕ್ತಿ ಕಾರ್ಯಕ್ರಮ ಹಮ್ಮಿಕೊಂಡಿತ್ತು,

ಅದರ ನಿಮಿತ್ಯ ರಂಗೋಲಿ, ಮೆಹಂದಿ , ಕೇಶಾಲಂಕಾರ ಕಲಾ ಸ್ಪರ್ಧೆಗಳು ನಡೆದವು." ಭಾರತೀಯ ಪಾರಂಪರಿಕ ಶೈಲಿ ಮತ್ತು ವಿನ್ಯಾಸ " ಎನ್ನುವ ವಿಷಯ ನೀಡಲಾಗಿತ್ತು. ಹಲವಾರು ವಿದ್ಯಾರ್ಥಿನಿಯರು ಸುಂದರವಾದ ಮುಕ್ತ ರಂಗೋಲಿ ಮತ್ತು ಚುಕ್ಕಿ ರಂಗೋಲಿಗಳನ್ನು , ಭಾರತೀಯ ಶೈಲಿಯ ಮೆಹಂದಿಗಳನ್ನು ಮತ್ತು ವೈವಿಧ್ಯವಾದ ಕೇಶವಿನ್ಯಾಸಗಳನ್ನು ಪ್ರಸ್ತುತ ಪಡಿಸಿದರು.

ಆ ಮೂಲಕ ತಮ್ಮಲ್ಲಿದ್ದ ಸೃಜನಶೀಲ ಕಲೆಯನ್ನು ಅಭಿವ್ಯಕ್ತಿಸಿದರು ಈ ರಂಗೋಲಿ, ಮೆಹಂದಿ ಮತ್ತು ಕೇಶವಿನ್ಯಾಸಗಳು ವೈವಿಧ್ಯತೆಯಿಂದ ಕೂಡಿದ್ದು ನೋಡುಗರ ಮನಸ್ಸನ್ನು ಸೆಳೆದವು. ಈ ಸ್ಪರ್ಧೆಯಲ್ಲಿ ದೀಪಿಕಾ ಮತ್ತು ಭೀಮಮ್ಮ ಪ್ರಥಮ ಸ್ಥಾನವನ್ನು, ಸ್ವಾತಿ ಮತ್ತು ಸಂಗೀತ ದ್ವಿತೀಯ ಸ್ಥಾನವನ್ನು, ಚುಕ್ಕಿ ರಂಗೋಲಿಯಲ್ಲಿ ಉಮಾದೇವಿ ಸುಜಾತ ಪ್ರಥಮ ಸ್ಥಾನ, ಸುವರ್ಣ, ಶ್ರೀ ಲಕ್ಷ್ಮಿ ದ್ವಿತೀಯ ಸ್ಥಾನವನ್ನು, ಗೀತಾ ,ನಂದಿನಿ ತೃತೀಯ ಸ್ಥಾನವನ್ನು ಪಡೆದರು. ಮೆಹಂದಿ ಸ್ಪರ್ಧೆಯಲ್ಲಿ ಪ್ರಥಮಸ್ಥಾನವನ್ನು ಫಲಕ್‌ನಾಜ್ ಮತ್ತು ಎಸ್. ಲಕ್ಷ್ಮಿ ಹಾಗೂ ದ್ವಿತೀಯ ಸ್ಥಾನವನ್ನು ಆಲ್ಫಿಯಾ ಹಾಗೂ ಆಲಿಯಾ, ತೃತೀಯ ಸ್ಥಾನವನ್ನು ರೇಖಾ ಮತ್ತು ಆಫ್ರಿನ್ ಪಡೆದರು. ಕೇಶಾಲಂಕಾರ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ದುರ್ಗಮ್ಮ ಮತ್ತು ಜುಲೇಖ, ದ್ವಿತೀಯ ಸ್ಥಾನ ಭಾಗ್ಯಲಕ್ಷ್ಮಿ ಮತ್ತು ವೀಣಾ ಪಡೆದರು.



# ಹವಾಮಾನ ಬದಲಾವಣೆ ತಡೆಗಟ್ಟುವಲ್ಲಿ ಕೈಜೋಡಿಸಿ

**ವಿಜಯಪುರ,ಮೇ.6:** ಹವಾಮಾನ ಬದಲಾವಣೆ ತಡೆಗಟ್ಟುವಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಿ, ಕೆಪಿಐಗಳ ಅನುಷ್ಠಾನಕ್ಕೆ ಜಿಲ್ಲಾ ಪಂಚಾಯತಿನಿಂದ ಸಂಪೂರ್ಣ ಸಹಕಾರ ನೀಡುವುದಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಸಿ.ಬಿ. ಕುಂಬಾರ ಹೇಳಿದರು.

ಎಂಪ್ರಿ ಸಂಸ್ಥೆಯು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕ್ರಿಯಾ ಯೋಜನೆ (ಎಖಂಕಅಅ) ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎಂಪ್ರಿ ಸಂಸ್ಥೆಯ ಸಂಶೋಧನಾ ವಿಜ್ಞಾನಿಗಳಾದ ಡಾ. ಪವಿತ್ರಾ ಪಿ.




ನಾಯಕ್ ಅವರು ಮಾತನಾಡಿ, ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆ ಕುರಿತು ಸವಿಸ್ತಾರವಾಗಿ ವಿವರಣೆ ನೀಡಿದರು.ಹವಾಮಾನ ಕಾರ್ಯನೀತಿ, ಕಾರ್ಯತಂತ್ರಗಳು, ವಿವಿಧ ಇಲಾಖೆಗಳ ಪಾತ್ರ ಹಾಗೂ ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳ ಪರಿಣಾಮಗಳು ಮತ್ತು ಜಿಲ್ಲಾಸ್ಥರದ ದತ್ತಾಂಶಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

ಅರಣ್ಯ ಇಲಾಖೆಯ ಶಿವರುದ್ರಪ್ಪ ಕಬಾಡಗಿ ಮಾತನಾಡಿ, ವಿಜಯಪುರ ಜಿಲ್ಲೆಯಲ್ಲಿ ಇಲಾಖೆಯು ತೆಗೆದುಕೊಂಡ ಕ್ರಮಗಳ ಕುರಿತು ವಿವರಿಸಿದರು. ಜಲ ಸಂಪನ್ಮೂಲ ವಲಯಕ್ಕೆ ಸಂಬಂಧಿಸಿದ ಹವಾಮಾನ ಕ್ರಿಯಾ ಯೋಜನೆ ಕುರಿತು ಜಲ ಸಂಪನ್ಮೂಲ ತಜ್ಞರಾದ ಡಾ. ಶಶಿಕುಮಾರ್ ಎನ್. ಸಂಕ್ಷಿಪ್ತ ಮಾಹಿತಿ ನೀಡಿದರು.

ಸಭೆಯಲ್ಲಿ ಎನ್.ಆರ್.ಡಿ.ಎಂ.ಎಸ್ ಅಧಿಕಾರಿಗಳಾದ ಚನ್ನಮ್ಮ ಕರೆಪ್ಪ, ಎಂಪ್ರಿ ಸಂಸ್ಥೆಯ, ಕುಮಾರಿ ರುಚಿತಾ ಶ್ರೀ ತರಬೇತಿ ಅಸೋಸಿಯೇಟ್ ಹಾಗೂ ತರಬೇತಿ ಸಹಾಯಕ ರಾದ ರಾಘವೇಂದ್ರ ಎನ್. ಸೇರಿದಂತೆ ತರಬೇತಿ ಕಾರ್ಯಕ್ರಮದಲ್ಲಿ 55 ಮಂದಿ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಣ ಸಂಸ್ಥೆಗಳ ಸದಸ್ಯರು ಭಾಗವಹಿಸಿದ್ದರು.

# ವಾಸವಿ ಕ್ಲಬ್ ವಾನಪ್ರಸ್ಥದಿಂದ ಸಮೂಹ ಷಷ್ಟಿಪೂರ್ತಿ ಮಹೋತ್ಸವ

**ಕಲಬುರಗಿ, ಮೇ. 9 :** ಆರ್ಯ ವೈಶ್ಯ ಸಮುದಾಯದ ಆಧ್ಯಾತ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಏಕತೆಯನ್ನು ಪ್ರತಿಬಿಂಬಿಸುವ ಐತಿಹಾಸಿಕ ಕಾರ್ಯಕ್ರಮವಾಗಿ 'ವಾಸವಿ ಕ್ಲಬ್ ವಾನಪ್ರಸ್ಥ' ಕಲಬುರಗಿ ವತಿಯಿಂದ ನಗರದ ನೆಹರೂ ಗಂಜ್‌ನ ಲಹೋಟಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾದ ಮೊಟ್ಟ ಮೊದಲ ಸಾಮೂಹಿಕ ಷಷ್ಟಿಪೂರ್ತಿ ಮಹೋತ್ಸವ ಭಕ್ತಿ, ವೈಭವ ಮತ್ತು ಸಂಭ್ರಮದಲ್ಲಿ ಯಶಸ್ವಿಯಾಗಿ ನೆರವೇರಿತು.

ಈ ಮಹೋತ್ಸವದಲ್ಲಿ ಆರ್ಯವೈಶ್ಯ ಸಮಾಜದ ಅನೇಕ ಕುಟುಂಬಗಳು, ಭಕ್ತಾದಿಗಳು, ಗಣ್ಯರು ಹಾಗೂ ಷಷ್ಟಿಪೂರ್ತಿ ಆಚರಿಸಿಕೊಂಡ ದಂಪತಿಗಳು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು. ಸಮುದಾಯದ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ನಂಬಿಕೆಗಳ ಮಹತ್ವವನ್ನು ಎತ್ತಿಹಿಡಿದ ಈ ಮಹೋತ್ಸವವು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಜೀವನದ ಹೊಸಹಂತವನ್ನು ಪ್ರವೇಶಿಸುತ್ತಿರುವ ದಂಪತಿಗಳಿಗೆ ಆರೋಗ್ಯ, ಸಂತೋಷ ಹಾಗೂ ಸಮೃದ್ಧಿ ದೊರೆಯಲಿ ಎಂಬ ಆಶಯ. ಕಾರ್ಯಕ್ರಮದಲ್ಲಿ ಗಣಪತಿ ಪೂಜೆ, ಆಯುಷ್ಯ ಹೋಮ ಹಾಗೂ ಷಷ್ಟಿಪೂರ್ತಿ ಆಚರಣೆ ನೆರವೇರಿತು.

ಶ್ರೀವಾಸವಿ ಮಾತೆಯ ಅನುಗ್ರಹದೊಂದಿಗೆ



ವೇದಪಂಡಿತರ ಮಾರ್ಗದರ್ಶನದಲ್ಲಿ 21 ಮಂದಿ ವೇದಪಂಡಿತರು ವಿವಿಧ ಹೋಮ–ಹವನ ಹಾಗೂ ವೈದಿಕ ಪೂಜಾ ವಿಧಿ–ವಿಧಾನಗಳನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಿದರು.

ಲಕ್ಷ್ಮೀನಾರಾಯಣ ಹೋಮ, ಆಯುಷ್ಯವೃದ್ಧಿ ಹೋಮ, ಸಂವತ್ಸರಿಕ ಹೋಮ, ಮೃತ್ಯುಂಜಯ ಹೋಮ, ನವಗ್ರಹ ಹೋಮ, ಗಣಪತಿ ಪೂಜೆ ಸೇರಿದಂತೆ ಷಷ್ಟಿಪೂರ್ತಿಗೆ ಸಂಬಂಧಿಸಿದ ಶಾಸ್ತ್ರೋಕ್ತ ವಿಧಿವಿಧಾನಗಳು ವೈಭವದಿಂದ ಜರುಗಿದವು. ಭಾಗವಹಿಸಿದ ದಂಪತಿಗಳಿಗೆ ಆರೋಗ್ಯ, ಆಯುಷ್ಯ, ಶಾಂತಿ, ಸಮೃದ್ಧಿ ಹಾಗೂ ಆಧ್ಯಾತ್ಮಿಕ ಕ್ಷೇಮಕ್ಕಾಗಿ ವಿಶೇಷ ಆಶೀರ್ವಾದ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಹಲವು ಗಣ್ಯರು ಹಾಗೂ ಸಂಘಟನೆಯ ಪ್ರಮುಖರು ಉಪಸ್ಥಿತರಿದ್ದು, ಸಮಾರಂಭದ ಯಶಸ್ಸಿಗೆ ಸಾಕ್ಷಿಯಾದರು. ಆರ್ಯವೈಶ್ಯ ಸಮಾಜದ ಅಧ್ಯಕ್ಷ ರಾಘವೇಂದ್ರ ಮೈಲಾಪುರ, ಜಿಲ್ಲಾ ಗವರ್ನರ್ ವೈಷ್ಣವಿ ಕಾಶಿ, ಆರ್ಯವೈಶ್ಯ ಸಮಾಜದ ಕಾರ್ಯದರ್ಶಿ ಸಂಜೀವ್ ಗುಪ್ತಾ, ಉಪ ಗವರ್ನರ್ ವಿ. ಪ್ರಸನ್ನಾ ಕುಮಾರಿ, ಅಂತರರಾಷ್ಟ್ರೀಯ ಹೆಚ್ಚುವರಿ ಖಜಾಂಚಿ ಎನ್.ವಿ. ಸರಳಾ ರವಿ, ಅಂತರರಾಷ್ಟ್ರೀಯ ನಿರ್ದೇಶಕ ಅಶ್ವತ್ಥ ನಾರಾಯಣಮೂರ್ತಿ ಕೆ.ಎ., ಕ್ಯಾಬಿನೆಟ್ ಖಜಾಂಚಿ ಪಿ.ಎಸ್. ರವೀಂದ್ರನಾಥ್ ಹಾಗೂ ವಾಸವಿ ಕ್ಲಬ್ ವಾನಪ್ರಸ್ಥದ ಅಧ್ಯಕ್ಷ ಶ್ರೀಕಾಂತ್ ಜಾಜೀ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶುಭ ಹಾರೈಸಿದರು.

ಕಾರ್ಯಕ್ರಮದ ಯಶಸ್ಸಿನ ಹಿಂದೆ ವಾಸವಿ ಕ್ಲಬ್ ವಾನಪ್ರಸ್ಥದ ಪದಾಧಿಕಾರಿಗಳ ಸಮರ್ಪಿತ ಶ್ರಮ ಪ್ರಮುಖ ಪಾತ್ರವಹಿಸಿತು. ಅಧ್ಯಕ್ಷ ಶ್ರೀಕಾಂತ್ ಜಾಜೀ, ಕಾರ್ಯದರ್ಶಿ ಜಿ. ಕುಮಾರ್, ಖಜಾಂಚಿ ವೆಂಕಟೇಶ್ ಗುಪ್ತಾ, ಕಾರ್ಯಕ್ರಮ ಸಂಯೋಜಕ ಅರವಿಂದ್ ಚಿಕಟ್ವಾರ್, ಪ್ರಾದೇಶಿಕ ಅಧ್ಯಕ್ಷ ಡಾ. ಕೆ.ಟಿ. ಪಾಲಡಿ, ವಲಯ ಅಧ್ಯಕ್ಷ ವಿಜಯಪ್ರಕಾಶ್ ಗಂಗಾ, ಉಪಾಧ್ಯಕ್ಷ ಬಾಲಚಂದ್ರ ಬಾವಗಿ, ಸಾರ್ವಜನಿಕ ಸಂಪರ್ಕಾಧಿಕಾರಿ ಹನುಮವ್ವ ಬೆಳೂರೆ, ಜಂಟಿ ಕಾರ್ಯದರ್ಶಿ ವಿಜಯಕುಮಾರ್ ಮಂಕಲ್ ಹಾಗೂ ಮಹಿಳಾ ಪ್ರತಿನಿಧಿ ವಸಂತಾ ಪ್ರೊದ್ದಟೂರಿ ಅವರ ಸೇವೆ ಶ್ಲಾಘನೀಯವಾಗಿತ್ತು.

ಭಾಗವಹಿಸಿದ ದಂಪತಿಗಳಿಗೆ ಪೂಜಾ ಸಾಮಗ್ರಿಗಳು, ಹೋಮ ದ್ರವ್ಯಗಳು, ರೇಷ್ಮೆ ಧೋತಿ, ಶಾಲು, ರೇಷ್ಮೆಸೀರೆ, ಸಂಪ್ರದಾಯಬದ್ಧ ಮಡಿಲಕ್ಕಿ ಉಡುಗೊರೆಗಳು, ಉಪಹಾರ ಹಾಗೂ ಮಧ್ಯಾಹ್ನದ ಪ್ರಸಾದದ ವ್ಯವಸ್ಥೆಯನ್ನು ಸಮರ್ಪಕವಾಗಿ ಮಾಡಲಾಗಿತ್ತು. ಸಂಘಟಕರ ಈ ವ್ಯವಸ್ಥೆಗೆ ಭಾಗವಹಿಸಿದವರಿಂದ ಮೆಚ್ಚುಗೆ ವ್ಯಕ್ತವಾಯಿತು. ಪೂರ್ಣಾಹುತಿ, ಮಹಾಮಂಗಳಾರತಿ, ಆಶೀರ್ವಚನ, ಸನ್ಮಾನ ಸಮಾರಂಭ ಹಾಗೂ ವಿಶ್ವಶಾಂತಿ ಮತ್ತು ಸಮೃದ್ಧಿಗಾಗಿ ಪ್ರಾರ್ಥನೆಯೊಂದಿಗೆ ಮಹೋತ್ಸವ ಅರ್ಥಪೂರ್ಣವಾಗಿ ಸಂಪನ್ನಗೊಂಡಿತು. ಕಲಬುರಗಿಯ ಆರ್ಯ ವೈಶ್ಯ ಸಮುದಾಯದ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಇತಿಹಾಸದಲ್ಲಿ ಈ ಸಾಮೂಹಿಕ ಷಷ್ಟಿಪೂರ್ತಿ ಮಹೋತ್ಸವ ಹೊಸ ಮೈಲಿಗಲ್ಲಾಗಿ ಗುರುತಿಸಿಕೊಂಡಿದೆ.

# ಜಾನಪದ ಕಲೆಯ ಉಳಿವಿಗೆ ಸಂಸ್ಕೃತಿ ಇಲಾಖೆ ಬದ್ಧ




**ಬೀದರ್, ಮೇ.9:** ಕಲೆಯ ಉಳಿವು ಮತ್ತು ಬೆಳವಣಿಗೆಗಾಗಿ ಸರ್ಕಾರ, ಕಲಾವಿದರು ಹಾಗೂ ಸಂಘ ಸಂಸ್ಥೆಗಳು ಒಟ್ಟಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ನಮ್ಮ ಸಂಸ್ಕೃತಿ ಮತ್ತು ಪರಂಪರೆ ಮುಂದಿನ ಪೀಳಿಗೆಗೆ ತಲುಪಲು ಸಾಧ್ಯವೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಅವರು ಹೇಳಿದರ.

ನಗರದ ಸ್ನೇಹ ಕಲ್ಚರಲ್ ಮತ್ತು ಸೋಶಿಯಲ್ ಡೆವಲಮೆಂಟ್ ಸೊಸೈಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಮಟ್ಟದ ಜಾನಪದ ಸಂಭ್ರಮ ಹಾಗೂ ಕವಿಗೋಷ್ಠಿ ಕಾರ್ಯಕ್ರಮವು 2025–26ನೇ ಸಾಲಿನ ಸಂಘ ಸಂಸ್ಥೆಗಳ ಧನಸಹಾಯ, ಸಾಮಾನ್ಯ ಯೋಜನೆಯಡಿ ಮತ್ತು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಪ್ರತಿಭೆಗೆ ಪುರಸ್ಕಾರ ಹಾಗೂ ಪ್ರೋತ್ಸಾಹಿಸಿದ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮವು ಪೂಜ್ಯ ಚನ್ನಬಸವ ಪಟ್ಟದೇವರ ಜಿಲ್ಲಾ ರಂಗಮಂದಿರದಲ್ಲಿ ನಡೆದ ಕಾರ್ಯ ಕ್ರಮದಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ್ ಸೋನಾರೆ ಮಾತನಾಡಿ, ಶಾಲಾ ಮತ್ತು ಕಾಲೇಜು ಮಟ್ಟದಲ್ಲಿ ವಿದ್ಯಾರ್ಥಿಗಳಲ್ಲಿ ಕಲೆ ಮತ್ತು ಸಂಸ್ಕೃತಿಯ ಬಗ್ಗೆ ಆಸಕ್ತಿ ಮೂಡಿಸುವುದು ಅತ್ಯಗತ್ಯ. ಸಮಾಜದ ಸಹಕಾರದೊಂದಿಗೆ ಸ್ಥಳೀಯ ಕಲಾವಿದರಿಗೆ ಬೆಂಬಲ ನೀಡಿದಾಗ ಮಾತ್ರ ನಮ್ಮ ಜಾನಪದ ಕಲೆಗಳು ಮುಂದಿನ ಪೀಳಿಗೆಗೆ ಉಳಿಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಶ್ರೀಮಂತ ಸಪಾಟೆ ಮಾತನಾಡಿ, ನಮ್ಮ ನಾಡಿನ ಸಂಸ್ಕೃತಿ ಮತ್ತುಜಾನಪದ ಕಲೆಗಳು ನಮ್ಮ ಅಸ್ತಿತ್ವದ ಬೆನ್ನೆಲುಬಾಗಿವೆ. ಅವುಗಳಲ್ಲಿ ನಮ್ಮಪೂರ್ವಜರ ಜೀವನಶೈಲಿ, ನಂಬಿಕೆ ಗಳು, ಸಂಪ್ರದಾಯಗಳು ಮತ್ತು ಮೌಲ್ಯಗಳು ಜೀವಂತವಾಗಿ ಅಡಗಿವೆ. ಆದರೆ ಇಂದಿನ ಆಧುನಿಕ ಯುಗದಲ್ಲಿ ವೇಗವಾಗಿ ಬದಲಾಗುತ್ತಿರುವ ಜೀವನಶೈಲಿಯ ಪರಿಣಾಮ ಅಮೂಲ್ಯ ಪರಂಪರೆ ನಿಧಾನವಾಗಿ ಮರೆಯಾಗುತ್ತಿರುವುದು ವಿಷಾದನೀಯ ಎಂದರು.

## 2030-31ರ ವೇಳೆಗೆ ರಾಜ್ಯದ ಒಟ್ಟು ಆರ್ಥಿಕತೆಗೆ ಸಹಕಾರ

# ಕಲ್ಯಾಣ ಕರ್ನಾಟಕದ ಶೇ.12 ರಿಂದ 14ಕ್ಕೆ ಏರಿಕೆಯ ಗುರಿ: ಡಾ. ಅಜಯಸಿಂಗ್

**ಕಲಬುರಗಿ, ಮೇ. 9:** ಕಲ್ಯಾಣ ಕರ್ನಾಟಕ ಪ್ರದೇಶದ 50 ತಾಲ್ಲೂಕುಗಳ ಪೈಕಿ 39 ತಾಲ್ಲೂಕುಗಳು ಇನ್ನೂ ಅತ್ಯಂತ ಹಿಂದುಳಿದ ವರ್ಗದಲ್ಲಿವೆ. ಈ ಸವಾಲನ್ನು ಎದುರಿಸಲು ಕೆಕೆಆರ್‌ಡಿಬಿ 2030ರ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಒಳಗೊಂಡ ಐದು ವರ್ಷಗಳ 'ದೂರದೃಷ್ಟಿ ದಾಖಲೆ' ಸಿದ್ಧಪಡಿಸಲಾಗುತ್ತಿದೆ ಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಜೇವರ್ಗಿ ಶಾಸಕ ಡಾ. ಅಜಯ್ ಸಿಂಗ್ ಹೇಳಿದರು.



ನಗರದ ಕೆಕೆಆರ್‌ಡಿಬಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 'ಐತಿಹಾಸಿಕ ಮಂಥನ' ಕಾರ್ಯಕ್ರಮದಲ್ಲಿ ಆನ್‌ಲೈನ್ ಮೂಲಕ ಪಾಲ್ಗೊಂಡು ಮಂಡಳಿಯ ಮುಂದಿನ ದಶಕದ ಅಭಿವೃದ್ಧಿ ನೀತಿ ಮತ್ತು ಸಾಧನೆಗಳ ದಿಕ್ಸೂಚಿಯನ್ನು ಬಿಡುಗಡೆ ಮಾಡಿ, ನೀತಿ ನಿರೂಪಕರು ಮತ್ತು ತಜ್ಞರನ್ನು ಉದ್ದೇಶಿಸಿ ಮಾತನಾಡಿದ ಅವರು, 2030-31ರ ವೇಳೆಗೆ ರಾಜ್ಯದ ಒಟ್ಟು ಆರ್ಥಿಕತೆಗೆ (ಜಿಎಸ್‌ಡಿಪಿ) ಕಲ್ಯಾಣ ಕರ್ನಾಟಕದ ಕೊಡುಗೆಯನ್ನು ಪ್ರಸ್ತುತ ಇರುವ ಶೇ. 12ರಿಂದ ಶೇ. 14ಕ್ಕೆ ಏರಿಸುವುದು ಪ್ರಮುಖ ಗುರಿಯಾಗಿದೆ ಎಂದು ಡಾ. ಅಜಯ್ ಸಿಂಗ್ ವಿಶ್ವಾಸ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶವು ಕೇವಲ ರಸ್ತೆ, ಕಟ್ಟಡಗಳಂತಹ ಭೌತಿಕ ಮೂಲಸೌಕರ್ಯಗಳಿಗೆ ಸೀಮಿತವಾಗದೆ, ಶಿಕ್ಷಣ, ಆರೋಗ್ಯ ಮತ್ತು ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ರಾಜ್ಯದ ಇತರ ಭಾಗಗಳಿಗೆ ಸಮನಾಗಿ ಬೆಳೆಯಬೇಕು ಎಂದು ಡಾ. ಅಜಯ್‌ಸಿಂಗ್ ಆಶಯ ವ್ಯಕ್ತಪಡಿಸಿದರು.

**ಮಾನವ ಅಭಿವೃದ್ಧಿಗೆ ಒತ್ತು:** ಮಂಡಳಿಯ ಕಾರ್ಯತಂತ್ರವನ್ನು ಬದಲಾಯಿಸಲಾಗಿದ್ದು, ಹಿಂದೆ ಮಂಡಳಿಯು ಕೇವಲ ರಸ್ತೆ ಮತ್ತು ಸಂಪರ್ಕ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿತ್ತು. ಆದರೆ ಕಳೆದ ಮೂರು ವರ್ಷಗಳಿಂದ ನಾವು ನಮ್ಮ ಕಾರ್ಯತಂತ್ರವನ್ನು ಬದಲಿಸಿದ್ದೇವೆ. ಈಗ ನಮ್ಮ ಗಮನ ಸುಸ್ಥಿರ ಜೀವನೋಪಾಯ, ಶಿಕ್ಷಣ ಮತ್ತು ಆರೋಗ್ಯದಂತಹ ಮಾನವ ಅಭಿವೃದ್ಧಿ ಕ್ಷೇತ್ರಗಳತ್ತ ಮರಳಿದೆ ಎಂದು ಅವರು ತಿಳಿಸಿದರು.

ತಾಲ್ಲೂಕುಗಳ ನಡುವಿನ ಅಭಿವೃದ್ಧಿ ಅಸಮತೋಲನ ನೀಗಿಸಲು 'ಸಂಚಿತ ಅಭಾವ ಸೂಚ್ಯಂಕ' (ಸಿಡಿಐ) ಆಧಾರದ ಮೇಲೆ ವೈಜ್ಞಾನಿಕವಾಗಿ ಅನುದಾನ ಹಂಚಿಕೆ ಮಾಡಲಾಗುತ್ತಿದೆ ಎಂದು ವಿವರಿಸಿದರು.

ಹಣಕಾಸು ಶಿಸ್ತು ಮತ್ತು ಸಾಧನೆ : ಮಂಡಳಿಯ ಪ್ರಗತಿಯ ಅಂಕಿಅಂಶಗಳನ್ನು ಹಂಚಿಕೊಂಡ ಅಧ್ಯಕ್ಷರು, ಇದುವರೆಗೆ ಮಂಡಳಿಗೆ ಒಟ್ಟು 23,704 ಕೋಟಿ ಹಂಚಿಕೆಯಾಗಿದ್ದು, ಅದರಲ್ಲಿ 17,105 ಕೋಟಿ ಮೊತ್ತವನ್ನು ಅಭಿವೃದ್ಧಿ ಕೆಲಸಗಳಿಗೆ ವ್ಯಯಿಸಲಾಗಿದೆ.

ಶೇ. 80ರಷ್ಟು ಯೋಜನೆಗಳು ಈಗಾಗಲೇ ಪೂರ್ಣಗೊಂಡಿದ್ದು, ಮಂಡಳಿಯು ಶೇ. 72.16ರಷ್ಟು ಅನುದಾನ ಬಳಕೆಯ ದರವನ್ನು ಸಾಧಿಸಿದೆ ಎಂದು ಹೆಮ್ಮೆಯಿಂದ ತಿಳಿಸಿದರು.

ಶಿಕ್ಷಣ ಮತ್ತು ಆರೋಗ್ಯಕ್ಕೆ 'ಆವಿಷ್ಕಾರ'ದ ಸ್ಪರ್ಶ' : ಮಂಡಳಿಯ ಮಹತ್ವಾಕಾಂಕ್ಷಿ ಯೋಜನೆಗಳಾದ 'ಅಕ್ಷರ ಆವಿಷ್ಕಾರ' ಮತ್ತು 'ಆರೋಗ್ಯ ಆವಿಷ್ಕಾರ' ಮೂಲಕ ಈ ಭಾಗದ ಜನರ ಜೀವನಮಟ್ಟ ಸುಧಾರಿಸಲು ಒತ್ತು ನೀಡಲಾಗುತ್ತಿದೆ.

ವಿಶೇಷವಾಗಿ SSLC ಫಲಿತಾಂಶ ಸುಧಾರಣೆಗಾಗಿ 29 ವಿವಿಧ ಕಲಿಕಾ ಚಟುವಟಿಕೆಗಳನ್ನು ಜಾರಿಗೆ ತರಲಾಗಿದ್ದು, ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆಯಲಾಗಿದೆ.

ಪ್ರಸ್ತುತ ಬಜೆಟ್‌ನಲ್ಲಿ ರಸ್ತೆ ಸಂಪರ್ಕಕ್ಕೆ ಶೇ. 50.07, ಆರೋಗ್ಯಕ್ಕೆ ಶೇ. 20.08 ಮತ್ತು ಶಿಕ್ಷಣಕ್ಕೆ ಶೇ. 15.65 ರಷ್ಟು ಅನುದಾನ ಮೀಸಲಿಡಲಾಗಿದೆ ಎಂದು ಡಾ. ಅಜಯ್ ಸಿಂಗ್ ವಿವರಿಸಿ, ಅಭಿವೃದ್ಧಿ ಎಂಬುದು ಎಲ್ಲರನ್ನೂ ಒಳಗೊಂಡಿರಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪಿದಾಗ ಮಾತ್ರ ನಮ್ಮ ಹೋರಾಟಕ್ಕೆ ಸಾರ್ಥಕತೆ ಸಿಗುತ್ತದೆ ಎಂದು ಅವರು ಕರೆ ನೀಡಿದರು.



ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಹೊನ್ನೇನಹಳ್ಳಿ ಬಳಿ ಶನಿವಾರ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಮಂಡ್ಯದ ಒಂದೇ ಕುಟುಂಬದ ನಾಲ್ವರು ಸದಸ್ಯರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ತುಮಕೂರು ಕಡೆಗೆ ಹೋಗುತ್ತಿದ್ದ ಆಲ್ಟೋ ಕಾರು, ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಗೊಬ್ಬರ ತುಂಬಿದ ಟ್ರಕ್‌ಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ.

# ಸತತ ಪ್ರಯತ್ನದಿಂದ ಮಾತ್ರ ಸಾಧನೆ: ರಾಜ್ಯ ಸಂಯೋಜಕಿ ಶೈನಿ ಪ್ರದೀಪ್ ಗುಂಟಿ

**ಬೀದರ್, ಮೇ. 9:** ಸತತ ಪ್ರಯತ್ನ ಮತ್ತು ಕಠಿಣ ಪರಿಶ್ರಮದಿಂದ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದು ಅಕ್ಕ ಪಡೆಯ ರಾಜ್ಯ ಸಂಯೋಜಕಿ ಶೈನಿ ಪ್ರದೀಪ್ ಗುಂಟಿ ಹೇಳಿದರು.



ನಗರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಣಾ ಟಕದ ಸಹಯೋಗದಡಿ ಆಯೋಜಿಸಿದ್ದ ಎಸ್ಸೆಸ್ಸೆಲ್ಸಿಯಲ್ಲಿ ಸಾಧನೆ ಮಾಡಿದ ಸರ್ಕಾರಿ ಬಾಲಕರ ಮತ್ತು ಬಾಲಕಿಯರ ಬಾಲಮಂದಿರ ವಿದ್ಯಾರ್ಥಿಗಳ ಸನ್ಮಾನ ಹಾಗೂ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ, ವಿದ್ಯಾರ್ಥಿಗಳ ಶೈಣಿಕ ಪ್ರಗತಿಗಾಗಿ ಹಮ್ಮಿಕೊಳ್ಳುವ ಇಂಥ ಕಾರ್ಯಕ್ರಮಗಳು ಕಲಿಕಾ ಸಾಮರ್ಥ್ಯ ಹೆಚ್ಚಿಸುವುದರ ಜತೆ ಸಕಾರಾತ್ಮಕ ಬದಲಾವಣೆ ತರಲು ಪೂರಕವಾಗಿವೆ ಎಂದರು.ನಾನು ಸಹ ತಂದೆ ಇಲ್ಲದೆ ಬೆಳೆದವಳು.

ಜೀವನದಲ್ಲಿ ಬಹಳ ಕಷ್ಟಪಟ್ಟು ಓದಿ ಇಂಜಿನಿಯರಿಂಗ್ ಮಾಡಿ ಪಿಎಚ್‌ಡಿ ಮಾಡುತ್ತಿದ್ದೇನೆ. ಮನೆಯ ಕಷ್ಟಗಳಿಗೆ ಎದೆಗುಂದದೆ ಮಕ್ಕಳು ಶೈಣಿಕ ಜೀವನದಲ್ಲಿ ಸಾಧನೆ ಮಾಡಬೇಕು ಎಂದು ಕಿವಿಮಾತು ಹೇಳಿದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಶ್ರೀಧರ ಮಾತನಾಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಜೀವನವನ್ನು ಬದಲಾಯಿಸುವ ಘಟ್ಟ. ವಿದ್ಯಾರ್ಥಿ ಜೀವನದ ಸಾಧನೆಗೆ ಇದೇ ಮೊದಲ ಮೆಟ್ಟಿಲು. ಕಷ್ಟಪಟ್ಟು ಓದಿದರೆ ಮಾತ್ರ ಮುಂದೆ ಹೋಗಲು ಸಾಧ್ಯ ಎಂದರು.

# ವರದಕ್ಷಿಣೆ ಕೊಡುವುದು, ಪಡೆಯುವುದು ಅಪರಾಧ: ಪ್ರಕಾಶ್ ಬನಸೋಡೆ



**ಬೀದರ, ಮೇ. 9:** ತಾಲ್ಲೂಕಿನ ಕಪಲಾಪುರ(ಎ) ಗ್ರಾಮದಲ್ಲಿ ವರದಕ್ಷಿಣೆ ನಿಷೇಧ ಕಾಯ್ದೆ 1961 ಹಾಗೂ ನಿಯಮಗಳು 2004 ರ ಕುರಿತು ಸಾರ್ವಜನಿಕರಿಗೆ ಜಾಗೃತಿ ಹಾಗೂ ಇಲಾಖಾ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮ ನಡೆಯಿತು.

ವರದಕ್ಷಿಣೆ ಕಿರುಕುಳ, ಬಾಲ್ಯ ವಿವಾಹ, ಭ್ರೂಣಹತ್ಯೆ, ಲಿಂಗ ತಾರತಮ್ಯ ಮೊದಲಾದವು ಶಿಕ್ಷಾರ್ಹ ಅಪರಾಧಗಳಾಗಿವೆ ಎಂದು ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ್ ಬನಸೋಡೆ ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ ಎಂ.ಎಸ್. ಅವರು, ಇಲಾಖೆಯ ಸಖಿ ಒನ್ ಸ್ಟಾಪ್ ಸೆಂಟರ್, ಸಾಂತ್ವನ ಕೇಂದ್ರ, ಸ್ವಾಧಾರ ಕೇಂದ್ರ, ಮಕ್ಕಳ ಸಹಾಯ ವಾಣಿ ಕುರಿತು ಮಾಹಿತಿ ನೀಡಿದರು.

# ಬೌದ್ಧ ಧರ್ಮ ವೈಜ್ಞಾನಿಕ ನೆಲೆಗಟ್ಟಿನದ್ದು: ಮಹಾದೇವ ದಿಡ್ಡಿಮನಿ



**ಕಲಬುರಗಿ, ಮೇ. 4:** ಪ್ರಸ್ತುತ ಕಾಲಘಟ್ಟದಲ್ಲಿ ನಮಗೆ ಬೇಕಿರುವುದು ಯುದ್ಧವಲ್ಲ, ಬುದ್ಧ. ಬುದ್ಧರು ಪ್ರತಿಪಾದಿಸಿದ ನಾಲ್ಕು ಆರ್ಯ ಸತ್ಯಗಳು ಮತ್ತು ಅಷ್ಟಾಂಗಿಕ ಮಾರ್ಗಗಳು ನಾವು ಜೀವನದಲ್ಲಿ ಪ್ರತಿಪಾಲನೆ ಮಾಡಿದ್ದೇಯಾದಲ್ಲಿ ನಮ್ಮ ಬದುಕು ಸುಂದರ ಹಾಗೂ ಸಾರ್ಥಕವಾಗಲಿದೆ ಎಂದು ಸಿಪಿಐ ಮಹಾದೇವ ದಿಡ್ಡಿಮನಿ ಹೇಳಿದರು.

ನಗರದ ಸರಕಾರಿ ನೌಕರರ ಭವನದಲ್ಲಿ ಮಹಾಬೋಧಿ ಚಾರಿಟೇಬಲ್ ಮತ್ತು ವೆಲ್ಫೇರ್ ಟ್ರಸ್ಟ್ ವತಿಯಿಂದ ಆಚರಿಸಿಲಾದ ಭಗವಾನ್ ಬುದ್ಧರ ಜಯಂತಿಯಲ್ಲಿ ಭಾಗಿಯಾದ ಅವರು ಮಾತನಾಡಿ, ಜಗತ್ತಿನ ಎರಡನೆಯ ಅತೀ ದೊಡ್ಡ ಧರ್ಮವಾಗಿ ಬೌದ್ಧ ಧರ್ಮ ಹೊರಹೊಮ್ಮಿದೆ. ಪ್ರಸ್ತುತ ನಮ್ಮ ಸಮಾಜದಲ್ಲಿ ಇನ್ನೂ ಕೂಡ ಮೂಢ ನಂಬಿಕೆ ಯಂತಹ ಅನಿಷ್ಟ ಆಚರಣೆಗಳು ಚಾಲ್ತಿಯಲ್ಲಿವೆ. ನಾವೂ ಅತ್ತ ಸಂಪೂರ್ಣ ಹಿಂದೂಗಳು ಆಗದೆ ಇತ್ತ ಬೌದ್ಧ ಧರ್ಮವೂ ಸ್ವೀಕಾರ ಮಾಡದೇ ಡೋಲಾಯಮಾನ ಸ್ಥಿತಿಯಲ್ಲಿದ್ದೇವೆ.

ಆದ್ದರಿಂದ ಎಲ್ಲಾ ಗೊಂದಲ ಗಳಿಂದ ಹೊರಬಂದು ವೈಜ್ಞಾನಿಕತೆಯ ನೆಲೆಗಟ್ಟಿನ ಮೇಲೆ ಸಾಗುವ ಬೌದ್ಧ ಧರ್ಮವನ್ನು ನಾವು ಅನುಸರಿಸುವವರಾಗಬೇಕು. ಡಾ.ಬಿ.ಆರ್ ಅಂಬೇಡ್ಕರ್ ಅವರಿಗೆ ಇಸ್ಲಾಂ, ಕ್ರಿಶ್ಚಿಯನ್ ಧರ್ಮದವರು ಆಹ್ವಾನ ನೀಡಿದ್ದರೂ ಅದನ್ನು ನಿರಾಕರಣೆ ಮಾಡಿ, ನಮ್ಮ ನೆಲದ ವೈಜ್ಞಾನಿಕವಾಗಿರುವ ಬೌದ್ಧ ದಮ್ಮವನ್ನು ಅವರು ಸ್ವೀಕಾರ ಮಾಡಿದರು. ಹಾಗಾಗಿ ನಾವು ಕೂಡ ಬೌದ್ಧ ಧರ್ಮವನ್ನು ಅಪ್ಪಿಕೊಳ್ಳಬೇಕು ಎಂದರು.

ಡಾ.ಗೌತಮ್ ಕಟ್ಟಿಮನಿ ಮಾತನಾಡಿ, ಬುದ್ಧ ಮತ್ತು ಡಾ.ಬಿ.ಆರ್ ಅಂಬೇಡ್ಕರ್ ಅವರ ತತ್ವಗಳ ಮೇಲೆ ನಾವು ನಡೆಯಬೇಕಾಗಿದೆ. ಬಾಬಾ ಸಾಹೇಬರು ಮೊದಲು ಶಿಕ್ಷಣವೇ ನಮ್ಮ ಮೊದಲ ಅಸ್ತ್ರ ಎಂದು ಪ್ರತಿಪಾದನೆ ಮಾಡಿದರು. ಆದರೆ ನಾವು ಹೋರಾಟವನ್ನು ನಮ್ಮ ಅಸ್ತ್ರವನ್ನಾಗಿ ಮಾಡಿಕೊಂಡಿದ್ದೇವೆ. ಇದು ಬದಲಾಗಬೇಕು ಶಿಕ್ಷಣಕ್ಕೆ ನಾವು ಮೊದಲ ಆದ್ಯತೆ ನೀಡಬೇಕು ಎಂದರು.

# ಗುರು-ಗುರಿಯಿಂದ ಬದುಕು ಸಮೃದ್ಧ: ರಂಭಾಪುರಿ ಜಗದ್ಗುರುಗಳು

**ಕಡೇನಂದಿಹಳ್ಳಿ-ಮೇ-9.**ಮಾನವ ಜನ್ಮ ಬಹು ಜನ್ಮದ ಪುಣ್ಯದ ಫಲ. ಅರಿವು ಮತ್ತು ಆಚಾರದಿಂದ ಮಾನವ ಜೀವನ ಉಜ್ವಲ. ಪ್ರತಿಯೊಬ್ಬ ಮನುಷ್ಯನಿಗೆ ಗುರು ಮತ್ತು ಗುರಿ ಇದ್ದಾಗ ಬದುಕು ಸಮೃದ್ಧಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಶನಿವಾರ ಶಿಕಾರಿಪುರ ತಾಲೂಕಿನ ಕಡೆನಂದಿಹಳ್ಳಿ ಶ್ರೀಮದ್ ರಂಭಾಪುರಿ ಶಾಖಾಮಠದ ಶ್ರೀ ಗುರು ಪಟ್ಟಾಧಿಕಾರ ಧರ್ಮ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಬಾಳೆಗೊಂದು ಗೊನೆ ಇರುವಂತೆ ಬಾಳಿಗೊಂದು ಗುರಿ ಇರಬೇಕಾಗುತ್ತದೆ. ವೀರಶೈವ ಧರ್ಮದಲ್ಲಿ ಜ್ಞಾನ ಕ್ರಿಯಾತ್ಮಕ ಬೋಧನೆಗೆ ಪ್ರಾಮುಖ್ಯತೆಯನ್ನು ಕೊಟ್ಟಿದ್ದಾರೆ. ಸಾಮಾಜಿಕ ವಲಯದಲ್ಲಿ ಎಲ್ಲರೊಂದಿಗೆ ಬೆರೆತು ಬಾಳುವುದೇ ಜೀವನದ ಗುರಿಯಾಗಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ಅಹಿಂಸಾದಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳನ್ನು ಪ್ರತಿಪಾದಿಸಿದ್ದಾರೆ. ಇದೇ ದಾರಿಯಲ್ಲಿ 12ನೇ ಶತಮಾನದ ಶರಣರ ಮುನ್ನಡೆದು ಬದುಕನ್ನು ಕಟ್ಟಿಕೊಂಡರು. ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ಯಾರೂ ಬಲಿ ಕೊಡಬಾರದು. ಧರ್ಮ ಸಂಸ್ಕೃತಿ ಪರಂಪರೆಯ ಪರಿಪಾಲನೆಯಿಂದ ಜಗದಲ್ಲಿ ಶಾಂತಿ ಸಾಮರಸ್ಯ ಬೆಳೆದು ಬರಲು ಸಾಧ್ಯವಾಗುತ್ತದೆ. ದುಗ್ಲಿ ಶ್ರೀ ಗುರು ರೇವಣಸಿದ್ದೇಶ್ವರ ಮಠದ ಜೊತೆಗೆ ಜನ್ಮಭೂಮಿಯಾದ ಕಡೇನಂದಿಹಳ್ಳಿಯಲ್ಲಿರುವ ಶ್ರೀ ಗುರು ರೇವಣಸಿದ್ದೇಶ್ವರ ಪುಣ್ಯಾಶ್ರಮವನ್ನು ಶ್ರೀಮದ್ ರಂಭಾಪುರಿ ಶಾಖಾ ಮಠವನ್ನಾಗಿ ಪರಿವರ್ತಿಸಿ ಇಂದು ಶ್ರೀಗಳವರಿಗೆ ಗುರು ಪಟ್ಟಾಧಿಕಾರ ಮತ್ತು ಷಟಸ್ಥಲ ಬ್ರಹ್ಮೋಪದೇಶ ನೀಡಿ ದಂಡ ಕಮಂಡಲ ಸಮೇತ ಪಂಚ ಮುದ್ರಾ ಅನುಗ್ರಹಿಸಿ ಶ್ರೀ ಶುಭ ಹಾರೈಸಲಾಗಿದೆ ಎಂದರು.

ಪವಿತ್ರ ಧರ್ಮ ಸಮಾರಂಭವನ್ನು ಸಮಾರಂಭವನ್ನು ಉದ್ಘಾಟಿಸಿದ ಹಿರೇಕೆರೂರು ಶಾಸಕ ಯು.ಬಿ. ಬಣಕಾರ ಮಾತನಾಡಿ ಶಾಂತಿ ನೆಮ್ಮದಿ ಬದುಕಿಗೆ ಧರ್ಮವೊಂದೇ ಆಶಾಕಿರಣ. ವೀರಶೈವ ಧರ್ಮ ಸಕಲರ ಒಳಿತಿಗಾಗಿ ಸದಾ ಶ್ರಮಿಸುತ್ತಾ ಬಂದಿದೆ. ಈ ಧರ್ಮದ ಪಂಚಪೀಠಗಳು ರಾಷ್ಟ್ರೀಯ ಗುರುಪೀಠಗಳಾಗಿ ಧರ್ಮ ಸಂಸ್ಕೃತಿ ಪರಂಪರೆ ಆದರ್ಶ ಚಿಂತನೆಗಳನ್ನು ಬೋಧಿಸುತ್ತಾ ಬಂದಿದ್ದಾರೆ. ಕಡೇನಂದಿಹಳ್ಳಿ ಶ್ರೀ ರಂಭಾಪುರಿ ಪೀಠದ ಶಾಖಾ ಮಠಕ್ಕೆ ಶ್ರೀ ರೇವಣಸಿದ್ದೇಶ್ವರ ಶಿವಾಚಾರ್ಯರಿಗೆ ಪಟ್ಟ ಕಟ್ಟಿ ಅನುಗ್ರಹಿಸಿರುವುದು ಈ ಭಾಗದ ಭಕ್ತರ ಸೌಭಾಗ್ಯವೆಂದರು. ಮುಂಡಗೋಡ ಮಾಜಿ ಶಾಸಕ ವಿ.ಎಸ್. ಪಾಟೀಲ್ ಶ್ರೀಮಠದ ನೀಲ ನಕ್ಷೆಯನ್ನು ಬಿಡುಗಡೆ ಮಾಡಿ ಮಾತನಾಡಿದರು.

ನೂತನ ಪಟ್ಟಾಧ್ಯಕ್ಷರಾದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಬದುಕು ಬದಲು ಆಗಬೇಕಾದರೆ ಬದುಕುವ ದಾರಿ ಬದಲಾಗಬೇಕಾಗುತ್ತದೆ. ಸತ್ಯ ಧರ್ಮ ಸಂಸ್ಕೃತಿ ಬೆಳೆಯುವುದರಲ್ಲಿ ಮನುಷ್ಯನ ಕಲ್ಯಾಣ ಅಡಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಬೋಧನೆ ಸಾಧನೆ ನಿಮ್ಮೆಲ್ಲರ ಬಾಳಿಗೆ ಬಲ ತರುತ್ತದೆ. ಉಭಯ ಮಠಗಳ ಜವಾಬ್ದಾರಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ವಹಿಸಿದ್ದಾರೆ. ಎಲ್ಲ ಭಕ್ತರನ್ನು ಸನ್ಮಾರ್ಗದ ಕಡೆಗೆ ಕರೆತರುವ ಪ್ರಾಮಾಣಿಕ ಪ್ರಯತ್ನ ಮಾಡುವೆನೆಂದರು.

ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವ ವಹಿಸಿ ಮಾತನಾಡಿದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷ ಸಿಂದಗಿ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಚನ್ನಗಿರಿ, ತೊಗರ್ಸಿ, ಹಾರನಹಳ್ಳಿ, ರಟ್ಟಿಹಳ್ಳಿ, ನಾಗವಂದ, ಹೊನ್ನಾಳಿ, ಮಳಲಿ, ಕಾರ್ಜುವಳ್ಳಿ ಮೊದಲಾದ 25ಕ್ಕೂ ಹೆಚ್ಚು ಶ್ರೀಗಳು ಪಾಲ್ಗೊಂಡಿದ್ದರು.

# ಖಾಲಿಹುದ್ದೆ ನೇಮಕಾತಿಗೆ ಆಗ್ರಹ



**ರಾಯಚೂರು, ಮೇ. 9:** ರಾಜ್ಯ ಸರ್ಕಾರ ತೀರ್ಮಾನಿಸಿದಂತೆ 56,432 ಹುದ್ದೆಗಳಿಗೆ ಕೂಡಲೇ ನೇಮಕಾತಿ ಅಧಿಸೂಚನೆ ಹೊರಡಿಸಿ, ನೇಮಕಾತಿ ಪ್ರಕ್ರಿಯೆ ಆರಂಭಿಸಬೇಕು. ಯುವಕರು ಮುಷ್ಕರ ಹೂಡಿದಾಗ ಮಾತ್ರ ಭರವಸೆ ನೀಡಿ ಬೀಸೋ ದೊಣ್ಣೆ ತಪ್ಪಿಸಿಕೊಂಡಂತೆ ಅಗಬಾರದು. ಎಲ್ಲಾ ರೀತಿಯ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಹಾಗೂ ಪಾರದರ್ಶಕ ನೇಮಕಾತಿಗಾಗಿ, ಕೆಪಿಎಸ್‌ಸಿಯನ್ನು ಭ್ರಷ್ಟಾಚಾರ ಮುಕ್ತಗೊಳಿಸಲು ಪಿ.ಸಿ. ಹೋಟಾ ಸಮಿತಿಯ ವರದಿಯನ್ನು ತಕ್ಷಣವೇ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ ಜಿಲ್ಲಾ ಘಟಕದ ಪದಾಧಿಕಾರಿಗಳು ಜಿಲ್ಲಾಡಳಿತ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ದುಬಾರಿ ಅರ್ಜಿ ಶುಲ್ಕವನ್ನು ಕೈಬಿಡಬೇಕು, ನೇಮಕಾತಿ ಪರೀಕ್ಷೆ ಸಂದರ್ಭದಲ್ಲಿ ಅಭ್ಯರ್ಥಿಗಳಿಗೆ ಉಚಿತ ಸಾರಿಗೆ ಒದಗಿಸಬೇಕು. ಪ್ರತಿ ವರ್ಷ ನೇಮಕಾತಿ ಪ್ರಕ್ರಿಯೆಯ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಕೂಡಲೇ ಭರ್ತಿಮಾಡಬೇಕು ಎಂದು ಒತ್ತಾಯಿಸಿದರು.

ಎಫ್‌ಆರ್‌ಬಿಎಂ ಕಾಯ್ದೆ-2003ರನ್ನು ರದ್ದುಗೊಳಿಸಬೇಕು. ಬಜೆಟ್‌ನಲ್ಲಿ ಘೋಷಿಸಿದಂತೆ ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳು ಹೆಚ್ಚಿರುವ ಜಯನಗರ, ಸಪ್ತಾಪುರ, ಶ್ರೀನಗರ, ಕಲ್ಯಾಣನಗರ ಭಾಗದಲ್ಲಿ ಕೂಡಲೇ ಇಂದಿರಾ ಕ್ಯಾಂಟೀನ್ ತೆರೆಯಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ಎಡಿಸಿ ಜಗದೀಶ್ ಅವರಿಗೆ ಸಲ್ಲಿಸಲಾಯಿತು.

# ಭ್ರಷ್ಟಾಚಾರಕ್ಕೆ ಕಡಿವಾಣ ಹಾಕದಿದ್ದರೆ ಪ್ರಜಾಪ್ರಭುತ್ವಕ್ಕೆ ಅಪಾಯ: ವಾಟಾಳ್ ನಾಗರಾಜ್ ಎಚ್ಚರಿಕೆ

**ಮಂಡ್ಯ, ಮೇ 9:** ಶಾಸನ ಸಭೆಗಳು, ವಿಧಾನ ಪರಿಷತ್ತು, ಲೋಕಸಭೆಗಳು ಭ್ರಷ್ಟರಿಂದ ತುಂಬಿದೆ. ಭ್ರಷ್ಟಾಚಾರ ನಿಲ್ಲದಿದ್ದರೆ ಪ್ರಜಾಪ್ರಭುತ್ವಕ್ಕೆ ಅಪಾಯವಿದೆ ಎಂದು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.



ಭ್ರಷ್ಟಾಚಾರ ವಿರೋಧಿ ದಿನಾಚರಣೆ ಅಂಗವಾಗಿ ಮಂಡ್ಯದ ಜಯಚಾಮರಾಜೇಂದ್ರ ವೃತ್ತದಲ್ಲಿ ಶನಿವಾರ ಭ್ರಷ್ಟಾಚಾರದ ವಿರುದ್ಧ ಈಡುಗಾಯಿ ಒಡೆಯುವ ಚಳವಳಿ ನಡೆಸಿದರು.

ಮಹಾತ್ಮ ಗಾಂಧೀಜಿಯವರು ಈ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಮಾಣಿಕವಾದ ಹೋರಾಟ ನಡೆಸಿದ್ದಾರೆ. ಅವರ ಜೀವನವೇ ದಿವ್ಯ ಸಂದೇಶ. ಸ್ವಾತಂತ್ರ್ಯ ಬಂದಿರೋದು ಭ್ರಷ್ಟಾಚಾರ ನಡೆಸಲು ಅಲ್ಲ ಲೂಟಿ ಮಾಡಲು ಅಲ್ಲ ಎಂದು ಕಿಡಿಕಾರಿದರು.ಪ್ರತಿಭಟನೆಯಲ್ಲಿ ಕನ್ನಡ ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ್, ನಗರಸಭೆ ಮಾಜಿ ಸದಸ್ಯೆ ಸೌಭಾಗ್ಯ, ಬೆಟ್ಟಹಳ್ಳಿ ಮಂಜುನಾಥ್, ಎಚ್.ವಿ. ಗಿರೀಶ್‌ಗೌಡ, ಪಾರ್ಥಸಾರಥಿ, ನಾರಾಯಣಸ್ವಾಮಿ, ಮಣಿಕಂಠ, ಜಗದೀಶ್, ಪುಷ್ಪಲತಾ, ವಿ.ಎನ್. ಗಂಗಾಧರ, ಆರ್. ಜೆ. ಅರ್ಜುನ್, ಕೆ.ಜಯರಾಂ, ಕಲೀಂ ಪಾಷ ಭಾಗವಹಿಸಿದ್ದರು.

ಭ್ರಷ್ಟಾಚಾರ ಎಲ್ಲೆ ಮೀರಿದೆ. ಪ್ರಾಮಾಣಿಕತೆಗೆ ಬೆಲೆಯೇ ಇಲ್ಲ. ಭ್ರಷ್ಟಾಚಾರಿಗಳು ಪರಮಪವಿತ್ರರ ರೀತಿ ನಡೆದುಕೊಳ್ಳುತ್ತಿದ್ದಾರೆ. ಭ್ರಷ್ಟಾಚಾರಿಗಳನ್ನು ಹೊಗಳುತ್ತಿದ್ದಾರೆ. ಜೈಲಿನಿಂದ ಬಂದಂತಹ ಭ್ರಷ್ಟಾಚಾರಿಗಳಿಗೆ ಹಾರ, ತುರಾಯಿ ಹಾಕಿ ಸ್ವಾಗತಿಸಲಾಗುತ್ತಿದೆ ಎಂದು ಬೇಸರ ಹೊರಹಾಕಿದರು.

ಆಡಳಿತ ನಡೆಸುತ್ತಿರುವ ಅಧಿಕಾರಿಗಳು, ರಾಜಕಾರಣಿಗಳು, ಭ್ರಷ್ಟಾಚಾರದಲ್ಲಿ ಒಂದಾಗಿದ್ದಾರೆ. ಪರಮ ಪವಿತ್ರವಾದಂತಹ ಚುನಾವಣೆ ಭ್ರಷ್ಟಾಚಾರವಾಗಿದೆ. ತತ್ವ ಸಿದ್ಧಾಂತಗಳೆಲ್ಲವನ್ನು ಗಾಳಿಗೆ ತೂರಲಾಗಿದೆ ಎಂದು ದೂರಿದರು.ಭ್ರಷ್ಟರಿಗೆ ಜೆಸಿಬಿಯಲ್ಲಿ ಹಾರ, ತುರಾಯಿಗಳನ್ನು ಹಾಕುತ್ತಿದ್ದಾರೆ. ನೂರಾರು ಕೋಟಿ ಖರ್ಚು ಮಾಡಿ ಸಭೆ, ಸಮಾರಂಭಗಳು ನಡೆಯುತ್ತಿವೆ.

ಭ್ರಷ್ಟಾಚಾರ ತೊಲಗಿಸಲು ಕನ್ನಡ ಚಳವಳಿ ವಾಟಾಳ್ ಪಕ್ಷ ಬೀದಿಗಿಳಿದಿದೆ. ಬಿಜೆಪಿ-ಜೆಡಿಎಸ್-ಕಾಂಗ್ರೆಸ್ ದುರಾಡಳಿತ ನಡೆಸಿ ಭ್ರಷ್ಟಾಚಾರವೆಸಗಿವೆ. ಈಗ ಕನ್ನಡ ಶಕ್ತಿ ರಾಜ್ಯದಲ್ಲಿ ಉದಯವಾಗಬೇಕಾಗಿದೆ. ಬೀದರ್‌ನಿಂದ ಚಾಮರಾಜನಗರದವರೆಗೆ, ಕೋಲಾರದಿಂದ ಮಂಗಳೂರಿನವರೆಗೆ ಕರ್ನಾಟಕ ಹೊಸ ಶಕ್ತಿಯನ್ನು ಕಾಣಬೇಕಾಗಿದೆ. ಭ್ರಷ್ಟಾಚಾರ ನಿರ್ಮೂಲನೆ ಮಾಡಲು ತಮ್ಮ ಪಕ್ಷ ಹೋರಾಟದ ನಡೆಸುತ್ತಿದೆ ಎಂದು ವಾಟಾಳ್ ನಾಗರಾಜ್ ಹೇಳಿದರು.

# ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಎಲ್ಲರೂ ಶ್ರಮಿಸೋಣ: ಡಿ.ಸಿ ಪೂವಿತಾ

**ರಾಯಚೂರು, ಮೇ. 9:** ಜಿಲ್ಲೆಯ ಅಭಿವೃದ್ಧಿಗೆ ವಿವಿಧ ಇಲಾಖೆಯ ಎಲ್ಲಾ ಅಧಿಕಾರಿಗಳು ಒಟ್ಟಾಗಿ ಶ್ರಮಿಸೋಣ ಎಂದು ನೂತನ ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.



ಜಿಲ್ಲಾಡಳಿತ ವತಿಯಿಂದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ನೂತನ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರಿಗೆ ಸ್ವಾಗತ ಹಾಗೂ ನಿರ್ಗಮಿತ ಜಿಲ್ಲಾಧಿಕಾರಿ ನಿತೀಶ್ ಕೆ. ಅವರಿಗೆ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲೆಗೆ ನನ್ನ ಮೇಲಧಿಕಾರಿಗಳು ಹೋಗುತ್ತಿರಾ ಎಂದಾಗ ನಾನು ಹಿಂದೆ ಮುಂದೆ ಯೋಚನೆ ಮಾಡದೆ ಹೋಗುತ್ತೇನೆ ಎಂದು ಹೇಳಿದೆ. ನಾನು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆಲಸ ಮಾಡಿರಲಿಲ್ಲ, ಹಾಗಾಗಿ ನಾನು ಒಪ್ಪಿಕೊಂಡೆ. ನಿರ್ಗಮಿತ ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಜಿಲ್ಲೆಯಲ್ಲಿ ಉತ್ತಮ ಕೆಲಸ ಮಾಡಿ ನಮಗೆ ದಾರಿ ಸುಲಭವಾಗಿ ಮಾಡಿದ್ದಾರೆ. ಎರಡು ವರ್ಷಗಳ ಕಡಿಮೆ ಅವಧಿಯಲ್ಲಿ ಅವರು ಉತ್ತಮ ಕೆಲಸ ಮಾಡಿರುವುದಕ್ಕೆ ತಾವು ಹೇಳುತ್ತಿರುವುದರಿಂದ ತಿಳಿಯುತ್ತದೆ. ಜಿಲ್ಲೆಯ ಅಭಿವೃದ್ಧಿಯ ದಾರಿಯಲ್ಲಿ ನಾವೆಲ್ಲರೂ ಸಾಗೋಣ ಎಂದು ಕಿವಿ ಮಾತು ಹೇಳಿದರು.

ನಿರ್ಗಮಿತ ಜಿಲ್ಲಾಧಿಕಾರಿ ನಿತೀಶ್ ಕೆ. ಮಾತನಾಡಿ, ರಾಯಚೂರು ಜಿಲ್ಲೆಗೆ ಬರುವ ಮುಂಚೆ ಅನೇಕ ತಪ್ಪು ಕಲ್ಪನೆಗಳಿದ್ದವು. ಇಲ್ಲಿ ಪ್ರಾಮಾಣಿಕವಾಗಿ ಕಷ್ಟ ಪಟ್ಟು ಕೆಲಸ ಮಾಡಿದರೆ ಜನರು. ಜನಪ್ರತಿನಿಧಿಗಳು ಹಾಗೂ ಸಂಘಟನೆಗಳು ನಮಗೆ ಬಹಳ ಪ್ರೀತಿ ಮತ್ತು ಕಾಳಜಿಯನ್ನು ತೋರುತ್ತಾರೆ. ಬೇರೆ ಜಿಲ್ಲೆಗೆ ಹೋಲಿಸಿದರೆ ರಾಯಚೂರು ಜಿಲ್ಲೆಯಲ್ಲಿ ಬಹಳಷ್ಟು ಹೆಸರು ಮತ್ತು ಕೆಲಸ ಮಾಡಬಹುದು ಎಂದು ಹೇಳಿದರು.

ನನ್ನ 2 ವರ್ಷಗಳ ಅವಧಿಯಲ್ಲಿ ಜಿಲ್ಲೆಯ ಸಚಿವರು. ಶಾಸಕರು ಇಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಲು ಒಳ್ಳೆಯ ರೀತಿಯಲ್ಲಿ ಸಹಕಾರ ನೀಡಿದ್ದಾರೆ. ಗೋವಾದಿಂದ ಹೈದರಾಬಾದ್‌ವರೆಗೆ ರಾಷ್ಟ್ರೀಯ ಹೆದ್ದಾರಿ ಕ್ಯಾನ್ಸಲ್ ಆಗುವ ಹಂತದಲ್ಲಿದ್ದಾಗ ನಮ್ಮ ರೆವಿನ್ಯೂ ಅಧಿಕಾರಿಗಳು ಭೂ ಸ್ವಾಧೀನ ಮಾಡಿಕೊಂಡು ಅದನ್ನು ಮುಂದುವರಿಯುವಂತೆ ಮಾಡಿದರು. ರಾಯಚೂರು ವಿಮಾನ ನಿಲ್ದಾಣ ನನೆಗುದಿಗೆ ಬಿದ್ದಿತ್ತು. ಅದನ್ನು ಸರಿಪಡಿಸಿ ಜಿಲ್ಲೆಗೆ ಪ್ಲೈಟ್ ಬರುವ ಕಾಲ ಇನ್ನು ದೂರವಿಲ್ಲ ಎಂದರು.

ಪ್ರತಿಯೊಂದು ಜಿಲ್ಲೆ ಪುಣ್ಯಕ್ಷೇತ್ರವಿದ್ದಂತೆ ಜನರನ್ನು ದೇವರೆಂದು ನಾವು ಕೆಲಸ ಮಾಡಬೇಕು. ಜಿಲ್ಲೆಯಲ್ಲಿ ಕೆಲಸ ಮಾಡಲು ನನಗೆ ಸಹಕಾರ ನೀಡಿದಕ್ಕಾಗಿ ಎಲ್ಲರಿಗೂ ಧನ್ಯವಾದಗಳು. ನನ್ನಂತೆ ನೂತನ ಜಿಲ್ಲಾಧಿಕಾರಿಗಳಿಗೆ ಸಹಕಾರ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ. ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ ಹಾಗೂ ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಮಾತನಾಡಿದರು.

## ಅದ್ದೂರಿ ಅಭಿಮಾನೋತ್ಸವ



**ಚಿತ್ರದುರ್ಗ, ಮೇ 9:** ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷಗಳ ಸುದೀರ್ಘ ರಾಜಕೀಯ ಪಯಣ ಮತ್ತು ಜನಸೇವೆಯನ್ನು ಗೌರವಿಸಲು ಆಯೋಜಿಸಿದ್ದ 'ಯಡಿಯೂರಪ್ಪ ಅಭಿಮಾನೋತ್ಸವ' ಕಾರ್ಯಕ್ರಮಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅದ್ದೂರಿ ಚಾಲನೆ ನೀಡಿದರು.

ಸಮಾರಂಭದಲ್ಲಿ ಯಡಿಯೂರಪ್ಪ ಕುರಿತು ಎರಡು ಪುಸ್ತಕ ಬಿಡುಗಡೆ ಮಾಡಲಾಯಿತು. ಸನ್ಮಾನಕ್ಕೆ ಚೇರ್ ಬೇಡ ಅಂತ ಬಿಎಸ್‌ವೈ ಹೇಳಿದರೂ ಕೊನೆಗೆ ಯಡಿಯೂರಪ್ಪ ಕೈ ಹಿಡಿದು ಬಂದು ಅಮಿತ್ ಶಾ ಚೇರ್ ಮೇಲೆ ಕೂರಿಸಿದರು. ಬಿಎಸ್‌ವೈಗೆ ಪೇಟ ತೊಡಿಸಿ, ಶಾಲು ಹೊದಿಸಿ, ಹಾರ ಹಾಕಿ ಸನ್ಮಾನಿಸಿದರು.

ಕೋಲ್ಕತ್ತಾದಿಂದ ನೇರವಾಗಿ ಚಿತ್ರದುರ್ಗಕ್ಕೆ ಅಮಿತ್ ಶಾ ಆಗಮಿಸಿದರು. ವೇದಿಕೆಗೆ ಬರುತ್ತಿದ್ದಂತೆ ಜನರು ಹರ್ಷೋದ್ಗಾರ ವ್ಯಕ್ತಪಡಿಸಿದರು. ಯಡಿಯೂರಪ್ಪ ಅವರನ್ನು ಅಮಿತ್ ಶಾ ಅಪ್ಪಿಕೊಂಡು ಅಭಿನಂದಿಸಿದರು.

ನಂತರ ಬಿಎಸ್‌ವೈ ಅವರು ಸ್ವಾಮೀಜಿಗಳ ಆಶೀರ್ವಾದ ಪಡೆದರು. ಬಿ.ಎಲ್.ಸಂತೋಷ್ ಕೂಡ ಕಾರ್ಯಕ್ರಮದಲ್ಲಿ ಹಾಜರಿದ್ದರು. **ಈ ಸಂದರ್ಭದಲ್ಲಿ ಯಡಿಯೂರಪ್ಪ ಅವರನ್ನು ಗೌರವಿಸಲಾಯಿತು. ಇದೇ ವೇಳೆ ಹಲವು ಸ್ವಾಮೀಜಿಗಳನ್ನು ಬಿ.ವೈ. ವಿಜಯೇಂದ್ರ ಹಾಗೂ ಮತ್ತಿತರರು ಸನ್ಮಾನಿಸಿದರು.**



# ಬಿ.ಎಸ್. ಯಡಿಯೂರಪ್ಪ ಜೀವನ ಹೋರಾಟ ಯುವಜನತೆಗೆ ಮಾದರಿ



## ಅಭಿಮಾನದ ಸಾಗರದಲ್ಲಿ ಜನ ನನ್ನನ್ನು ತೇಲಿಸಿಬಿಟ್ಟಿದ್ದಾರೆ
## ಬಿಎಸ್‌ವೈ ಭಾವುಕ

**ಚಿತ್ರದುರ್ಗ, ಮೇ 9:** ಐವತ್ತು ವರ್ಷಗಳಿಂದ ನಾಡಿನ ಜನರ ಸೇವೆಗೆ ಜೀವನ ಸಮರ್ಪಣೆ ಮಾಡಿಕೊಂಡು ಬಂದಿದ್ದೇನೆ. ಹುಟ್ಟುವಾಗಲೇ ಚಿನ್ನದ ಚಮಚವನ್ನು ಬಾಯಿಯಲ್ಲಿ ಇಟ್ಟುಕೊಂಡು ಬಂದವನಲ್ಲ. ಸಾಮಾನ್ಯರಲ್ಲಿ ಸಾಮಾನ್ಯನಾಗಿ ಅನಿರೀಕ್ಷಿತವಾಗಿ ತಿರುವುಗಳ ನಡುವೆ ಬೆಳೆದವನು. ಅಭಿಮಾನೋತ್ಸವದ ಸಾಗರದಲ್ಲಿ ಜನರು ನನ್ನನ್ನು ತೇಲಿಸಿಬಿಟ್ಟಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭಾವುಕಾದರು.

ಅಭಿಮಾನೋತ್ಸವದಲ್ಲಿ ಗೌರವ ಸ್ವೀಕರಿಸಿ ಮಾತನಾಡಿದ ಅವರು, ತಮ್ಮ ರಾಜಕೀಯ ಹೋರಾಟದ ಜೀವನವನ್ನು ನೆನಪು ಮಾಡಿಕೊಂಡರು. ಪಕ್ಷ ಸಂಘಟನೆ ಮಾಡಲು, ರಾಜ್ಯದ ಜನರ ಕಷ್ಟ ತಿಳಿಯಲು ನಿರಂತರ ಪ್ರವಾಸ ಮಾಡಿದ್ದೇನೆ. ನಿರಂತರ ಹೋರಾಟದ ಬದುಕೇ ಶಕ್ತಿ ನೀಡಿದೆ. ಬೂಕನಕೆರೆಯಲ್ಲಿ ಹುಟ್ಟಿ ಶಿಕಾರಿಪುರವನ್ನು ಕರ್ಮಭೂಮಿಯಾಗಿಸಿಕೊಂಡು ರೈತರ, ನೊಂದಜನರ, ಬಡವರ ಸಮಸ್ಯೆಗಳ ಪರಿಹಾರಕ್ಕಾಗಿ ದುಡಿದಿದ್ದೇನೆ ಎಂದರು.

ಅಧಿಕಾರದಲ್ಲಿ ಇದ್ದಾಗ ತಾಯಂದಿರ, ಸಹೋದರಿಯರ ಕಣ್ಣೀರು ಒರೆಸುವಂತಹ ಯೋಜನೆಗಳನ್ನು ರೂಪಿಸಲು ಶ್ರಮಿಸಿದ್ದೇನೆ. ಭಾಗ್ಯಲಕ್ಷ್ಮಿ ಬಾಂಡ್ ಜಾರಿ ಮಾಡಿದ ಸಾರ್ಥಕ ಭಾವ ನನ್ನದು. ಸಾಧ್ಯವಾದಷ್ಟು ಅನ್ನದಾತರಿಗೆ ನೆರವಾಗುವ ಯೋಜನೆ ತಂದಿದ್ದೇನೆ. ರೈತರ ಬಜೆಟ್ ಅನ್ನು ಎಂದೂ ಮರೆಯುವುದಿಲ್ಲ. ಬಡ್ಡಿ ರಹಿತ ಸಾಲ, ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿದ್ದೇನೆ ಎಂದರು. ಹೋರಾಟದ ಮತ್ತು ಸಂಘಟನೆಯನ್ನು ತಪಸ್ಸು ಎಂದು ಸ್ವೀಕರಿಸಿದವನು. ನನಗೆ ಆರ್‌ಎಸ್‌ಎಸ್ ಸಂಸ್ಕಾರ ನೀಡಿತು. ಅಧಿಕಾರಕ್ಕಾಗಿ ಎಂದು ಹೋರಾಟ ಮಾಡಲಿಲ್ಲ. ಮುಖ್ಯಮಂತ್ರಿ ಹುದ್ದೆಯನ್ನು ಕನಸಿನಲ್ಲೂ ಕಂಡಿರಲಿಲ್ಲ. ಪುರಸಭೆಯ ಹುದ್ದೆಯಿಂದ, ವಿರೋಧಪಕ್ಷದ ನಾಯಕ, ಮುಂದೆ ಮುಖ್ಯಮಂತ್ರಿಯಾದೆ. ಇದನ್ನೆಲ್ಲ ನಾಡಿನ ಜನರೇ ಬಯಸಿದ್ದರು. ನನ್ನ ರಾಜಕೀಯ ಜೀವನದ ಐವತ್ತು ವರ್ಷಗಳ ಪಯಣ ಸಾರ್ಥಕವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

**ಕಾರ್ಯಕರ್ತರೇ ನನ್ನ ಶಕ್ತಿ:** ಅಭಿಮಾನೋತ್ಸವಕ್ಕೆ ರಾಜ್ಯದ ವಿವಿಧ ಮಠಾಧೀಶರು, ಸ್ವಾಮೀಜಿಗಳು ಬಂದಿದ್ದಾರೆ. ಇದು ಒಬ್ಬ ವ್ಯಕ್ತಿಯ ಸಂಭ್ರಮ ಅಲ್ಲ. ಶಿಕಾರಿಪುರದಿಂದ ವಿಧಾನಸೌಧದ ಮೆಟ್ಟಿಲುಗಳವರೆಗೆ ನನ್ನ ರಾಜಕೀಯ ಪ್ರಯಾಣವನ್ನು ವಿಶ್ರಾಂತಿ ಇಲ್ಲದ ಕಾರ್ಯಕರ್ತರ ರೂಪಿಸಿದರು. ಅವರೇ ನನಗೆ ಶಕ್ತಿ. ಅವರಿಗೆ ನಾನು ಕೃತಜ್ಞನಾಗಿದ್ದೇನೆ. ಇದು ನನ್ನ ಜೀವನದ ಪರ್ವದಿನ. ನಿಮ್ಮ ಅಭಿಮಾನದಲ್ಲಿ ತೇಲಿಸಿದ ನನ್ನ ಪ್ರೀತಿಯ ಕರುನಾಡ ಜನತೆಗೆ ಋಣಿಯಾಗಿದ್ದೇನೆ ಎಂದರು. ನಾನು ಇಲ್ಲಿ ಕೇವಲ ರಾಜಕಾರಣಿಯಾಗಿ ನಿಂತಿಲ್ಲ, ಬದಲಿಗೆ ನಿಮ್ಮ ಮನೆ ಮಗನಾಗಿ ನಿಂತಿದ್ದೇನೆ ಎಂದು ನುಡಿದರು. ಮದಕರಿ ನಾಯಕ, ಒನಕೆ ಓಬವ್ವನ ನಾಡು ಚಿತ್ರದುರ್ಗ, ಶರಣರು ನಡೆದಾಡುವ ತಪೋವನ ಇದು. ಇಲ್ಲಿ ಅಭಿಮಾನೋತ್ಸವ ಆಯೋಜಿಸಿರುವುದು ಅತೀವ ಖುಷಿ ನೀಡಿದೆ ಎಂದು ಹೇಳಿದರು. ಕನ್ನಡ ನಾಡಿನ ಮೂಲೆ ಮೂಲೆಯಿಂದ ಹರಿದು ಬಂದಿರುವ ಅಭಿಮಾನದ ಸಾಗರದ ಮಧ್ಯೆ ನಿಂತಿರುವ ನನಗೆ ಅಕ್ಷರಶಃ ಮಾತು ಬರುತ್ತಿಲ್ಲ. ಐವತ್ತು ವರ್ಷದ ರಾಜಕೀಯ ಜೀವನವನ್ನು ನಿಮ್ಮೊಂದಿಗೆ ಕಳೆದ ನನ್ನನ್ನು ಈ ಸಾಗರದಲ್ಲಿ ತೋಯಿಸಿ ಸಡಗರ ಪಡುತ್ತಿರುವುದಕ್ಕೆ ನಿಮಗೆ ಋಣಿಯಾಗಿದ್ದೇನೆ ಎಂದರು. ಅಮಿತ್ ಶಾ ಜೀ ಅವರು ಎಷ್ಟೇ ಕಾರ್ಯ ಒತ್ತಡ ಇದ್ದರೂ ಇಲ್ಲಿಗೆ ಬಂದಿದ್ದಾರೆ. ದುರ್ಗದ ನೆಲದಲ್ಲಿ ವೀರ ಮದಕರಿ ನಾಯಕನಂತೆ ಅವರು ಕಂಗೊಳಿಸುತ್ತಿದ್ದಾರೆ. ಪಶ್ಚಿಮ ಬಂಗಾಳದ ಬಿಜೆಪಿ ಐತಿಹಾಸಿಕ ಗೆಲುವು ಸಾಧಿಸಿದೆ. ಪ್ರಧಾನಿ ಮೋದಿ ಅವರೊಂದಿಗೆ ಹೆಗಲು ಕೊಟ್ಟು ಅಮಿತ್ ಶಾ ಜೀ ಅವರು ಕೆಲಸ ಮಾಡಿದ್ದಾರೆ. ಪ್ರಜಾಪ್ರಭುತ್ವಕ್ಕೆ ಬಂಗಾಳದಲ್ಲಿ ಜಯ ಸಿಕ್ಕಿದೆ. ಮೋದಿ ಅವರಿಗೆ ಜನರ ಪರವಾಗಿ ಅಭಿನಂದನೆಗಳು ಎಂದರು. ಭಾರತ ನಂಬರ್ ಒನ್ ಸ್ಥಾನಕ್ಕೆ ಏರಲು ಮೋದಿ ಅವರು ಇನ್ನೂ ಹತ್ತು ದೇಶವನ್ನು ಮುನ್ನಡಸಬೇಕು. ಭವಿಷ್ಯದಲ್ಲಿ ಭಾರತದ ಕನಸು ಸಾಕಾರವಾಗಲಿ ಎಂದರು.

### ರಾಜಕೀಯ ಜೀವನದ ಐವತ್ತು ವರ್ಷಗಳ ಪಯಣ ಸಾರ್ಥಕವಾಗಿದೆ: ಬಿಎಸ್‌ವೈ ಹರ್ಷ

### ಯಡಿಯೂರಪ್ಪ ಅವರಿಗೆ ಅಭಿನಂದನೆ ಸಲ್ಲಿಸಿ ಸನ್ಮಾನಿಸಿದ ಅಮಿತ್ ಶಾ

**ಚಿತ್ರದುರ್ಗ, ಮೇ 9:** ಯಡಿಯೂರಪ್ಪ ಅವರ 5 ದಶಕಗಳ ಸಾರ್ವಜನಿಕ ಜೀವನ, ಹೋರಾಟವು ಯುವಜನತೆಗೆ ಮಾದರಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೇಳಿದ್ದಾರೆ. ಚಿತ್ರದುರ್ಗದಲ್ಲಿ ಶನಿವಾರ ಬಿಎಸ್‌ವೈ ಅಭಿಮಾನೋತ್ಸವದಲ್ಲಿ ಯಡಿಯೂರಪ್ಪ ಅವರನ್ನು ಅಭಿನಂದಿಸಿ ಮಾತನಾಡಿದರು.

ಇರುವ ರಸ್ತೆಯಲ್ಲೇ ಚಲಿಸುವವರು, ಹೊಸದಾಗಿ ಮಾರ್ಗದರ್ಶನ ಮಾಡು ವವರು ಇರುತ್ತಾರೆ. ಯಡಿಯೂರಪ್ಪ ಅವರು ಮಾರ್ಗದರ್ಶನ ಮಾಡುವ ನಾಯಕರಾಗಿ ಹೊರ ಹೊಮ್ಮಿದ್ದಾರೆ. ಅವರು ಸಾಧಾರಣ ಕುಟುಂಬದಿಂದ ಬಂದವರು. ಅವರ ಇಚ್ಛಾಶಕ್ತಿ, ಸಂಘದ ಸಂಸ್ಕಾರ, ರಾಷ್ಟ್ರಭಕ್ತಿಯು ಅವರ ಜೀವನದುದ್ದಕ್ಕೂ ಮಾರ್ಗದರ್ಶನ ನೀಡಿದೆ ಎಂದು ತಿಳಿಸಿದರು. ಬಸ್ ಸಿಗದಿದ್ದರೆ ಸೈಕಲ್‌ನಲ್ಲೇ ಹಳ್ಳಿಗೆ ತೆರಳಿ ಬಿಜೆಪಿಯನ್ನು ಸದೃಢವಾಗಿ ಕಟ್ಟಿದರು. ಸಾವಿರಾರು ಕಿಮೀ ಪಾದಯಾತ್ರೆ ಮಾಡಿ ರೈತರ ಪರವಾಗಿ ಹೋರಾಟ ಮಾಡಿದವರು. ಈ ಮೂಲಕ ರೈತ ನಾಯಕರಾಗಿ ಹೊರಹೊಮ್ಮಿದರು. ಇದಕ್ಕಾಗಿ ಅವರು ಜೈಲುವಾಸ ಅನುಭವಿಸಬೇಕಾಯಿತು ಎಂದು ಅಮಿತ್ ಶಾ ಹೇಳಿದರು.

**ಪ.ಬಂಗಾಳದಲ್ಲಿ ಹೊಸ ಶಕೆ ಆರಂಭ:** ಪಶ್ಚಿಮ ಬಂಗಾಲದಲ್ಲಿ ಇಂದು ಬಿಜೆಪಿಯ ಮುಖ್ಯಮಂತ್ರಿಯ ಪದಗ್ರಹಣ ನಡೆದಿದೆ. ಇದೇದಿನ ಯಡಿಯೂರಪ್ಪನವರ 50 ವರ್ಷಗಳ ರಾಜಕೀಯ ಸೇವೆಗೆ ಸಂಬಂಧಿಸಿದ ಕಾರ್ಯಕ್ರಮ ನಡೆಯುತ್ತಿದೆ. ವಿವೇಕಾನಂದರು, ಶ್ಯಾಮಪ್ರಸಾದ ಮುಖರ್ಜಿ ಮೊದಲಾದವರು ಹುಟ್ಟಿದ ನಾಡಿನಲ್ಲಿ ಹೊಸ ಶಕೆ ಆರಂಭವಾಗಿದೆ ಎಂದು ಅಮಿತ್‌ಶಾ ಹೇಳಿದರು.

### ಮೂರು ಕೃತಿಗಳ ಬಿಡುಗಡೆ

**ಇದೇ ಸಂದರ್ಭದಲ್ಲಿ 'ಕೆಂದಾವರೆ– ಕಮಲ ಅರಳಿದ ಕಥೆ', 'ಸದನ ಶಿಕಾರಿ– ಯಡಿಯೂರಪ್ಪನವರ ಗುಡುಗಿನ ನುಡಿಗಳು' ಪುಸ್ತಕಗಳನ್ನು ಅಮಿತ್‌ಶಾ ಬಿಡುಗಡೆ ಮಾಡಿದರು. ಅಭಿಮಾನೋತ್ಸವದಲ್ಲಿ ಮಾಜಿ ಸಚಿವ ಸಿ.ಟಿ.ರವಿ ಅವರು ಜನಸೇವೆಯಲ್ಲಿ ಸಾರ್ಥಕ 50 ವರ್ಷದ ಸಾಧನೆಗಳ ವಿವರ ನೀಡಿದರು. ಬಿಎಸ್ವೈ ಅವರನ್ನು ಅಭಿನಂದಿಸಲಾಯಿತು. ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಹಾಗೂ ಗಣ್ಯರು, ಸ್ವಾಮೀಜಿಗಳು ಭಾಗವಹಿಸಿದ್ದರು.**



## ಹೋರಾಟಕ್ಕೆ ಮತ್ತೊಂದು ಹೆಸರೇ ಯಡಿಯೂರಪ್ಪ: ವಿಜಯೇಂದ್ರ

**ಚಿತ್ರದುರ್ಗ, ಮೇ 9:** ನಾಡು ಕಂಡ ಧೀಮಂತ ರೈತನಾಯಕ ಬಿ.ಎಸ್.ಯಡಿಯೂರಪ್ಪ ಅವರು ಅಧಿಕಾರಕ್ಕಾಗಿ ಹೋರಾಟ ಮಾಡಲಿಲ್ಲ. ಬದಲಿಗೆ ಜನರಿಗಾಗಿ ಹೋರಾಟ ಮಾಡಿದವರು. ತ್ಯಾಗ, ಪರಿಶ್ರಮ, ಹೋರಾಟಕ್ಕೆ ಮತ್ತೊಂದು ಹೆಸರೇ ಯಡಿಯೂರಪ್ಪ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರು ಹೇಳಿದರು.



ಅಭಿಮಾನೋತ್ಸವದಲ್ಲಿ ಮಾತನಾಡಿದ ಅವರು, ಬಿಎಸ್ವೈ ಅವರು, ಜನನಾಯಕರಾದವರು. ನನ್ನಂತ ಅನೇಕರಿಗೆ ಪ್ರೇರಣೆಯಾದವರು. ಇಂದು ಈ ಅಭಿಮಾನೋತ್ಸವಕ್ಕೆ ರಾಜ್ಯದ ಮೂಲೆಮೂಲೆಗಳಿಂದ ಜನರು ಬಂದಿರುವುದು ನೋಡಿದರೆ ಬಿಎಸ್ವೈ ಅವರ ಮೇಲೆ ಎಂತಹ ಅಭಿಮಾನ ಇದೆ ಎಂಬುದು ತಿಳಿಯುತ್ತದೆ. ಇದೊಂದು ಐತಿಹಾಸಿಕ ಕ್ಷಣ. ಬಿಎಸ್ವೈ ಅವರ ಐವತ್ತು ವರ್ಷಗಳ ರಾಜಕೀಯ ಜೀವನಕ್ಕೆ ಗೌರವ ಸಲ್ಲಿಸುವ ಕ್ಷಣ ಎಂದು ಹೇಳಿದರು. ಅವರ ಹೋರಾಟಗಳನ್ನು ನಾನು ಹತ್ತಿರದಿಂದ ನೋಡಿದ್ದೇನೆ. ಅವರು ತಮ್ಮ ಜೀವನದಲ್ಲಿ ಅನೇಕ ಏಳು–ಬೀಳುಗಳನ್ನು ಕಂಡಿದ್ದಾರೆ. ಜೀವನದುದ್ದಕ್ಕೂ ಯಾವುದೇ ಸವಾಲುಗಳು ಬಂದರೂ ಬೆನ್ನು ತೋರಿಸಿ ಓಡಿ ಹೋದವರಲ್ಲ. ಯಾವುದೇ ರಾಜಕೀಯ ಷಡ್ಯಂತ್ರ, ಸವಾಲು ಬಂದರೂ ಅದನ್ನು ಧೈರ್ಯವಾಗಿ ಎದುರಿಸಿದವರು ಎಂದು ವಿವರಿಸಿದರು. ಗೃಹ ಅಮಿತ್ ಶಾ ಅವರು, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರದ ಪ್ರಮಾಣವಚನ ಸಮಾರಂಭದಲ್ಲಿ ಭಾಗಿಯಾಗಿ ಪುಣ್ಯಭೂಮಿ ಚಿತ್ರದುರ್ಗಕ್ಕೆ ಬಂದಿದ್ದಾರೆ. ಅವರಿಗೆ ನಾಡಿನ ಜನತೆಯ ಪರವಾಗಿ ಧನ್ಯವಾದಗಳು ಎಂದರು. ಚಿತ್ರದುರ್ಗ ವೀರರ ಭೂಮಿ, ಮದಕರಿ ನಾಯಕ ಹಾಗೂ ಒನಕೆ ಓಬವ್ವನ ತ್ಯಾಗದ ಭೂಮಿ, ಅಲ್ಲದೇ ಸ್ವಾಮೀಜಿಗಳ ತಪೋಭೂಮಿ. ಇಂತಹ ನೆಲದಲ್ಲಿ ಅಭಿಮಾನೋತ್ಸವ ಆಚರಿಸಲು ನಾವು ತೀರ್ಮಾನಿಸಿದೆವು. ರಾಜ್ಯದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಸ್ವಾಮೀಜಿಗಳು ಒಂದೇ ವೇದಿಕೆಯಲ್ಲಿ ಸೇರಿದ್ದಾರೆ ಎಂದರು.

## ಅಪ್ರತಿಮ ನಾಯಕ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಬಣ್ಣನೆ

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ಜಗತ್ತು ಕಂಡ ಅತ್ಯಂತ ನೇರ ವ್ಯಕ್ತಿತ್ವದ ನಾಯಕ. ಗುಜರಾತ್‌ನ ಮುಖ್ಯಮಂತ್ರಿಯಾಗಿ 13 ವರ್ಷ ಹಾಗೂ ದೇಶದ ಪ್ರಧಾನಿಯಾಗಿ ಕಳೆದ 12 ವರ್ಷಗಳಿಂದ ಅಧಿಕಾರ ನಡೆಸುತ್ತಿರುವ ಅವರು, ವಿಶ್ವಾಸಾರ್ಹ ನಾಯಕರಾಗಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಸುವೇಂದು ಅಧಿಕಾರಿ ನೇತೃತ್ವದಲ್ಲಿ ಹೊಸ ಸರ್ಕಾರ ರಚನೆಯಾಗಿದೆ. ಈ ಮೂಲಕ ಬಿಜೆಪಿ ಮತ್ತು ಎನ್‌ಡಿಎ ದೇಶದ 21 ರಾಜ್ಯಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಬಿ ಎಸ್ ಯಡಿಯೂರಪ್ಪ ನೇತೃತ್ವದಲ್ಲಿ ಕರ್ನಾಟಕದಲ್ಲೂ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದರು. ಯಡಿಯೂರಪ್ಪ ಅವರು 50 ವರ್ಷಗಳ ಸಾರ್ವಜನಿಕ ಜೀವನದಲ್ಲಿ ರೈತ ಪರವಾಗಿ ಹೋರಾಟ ನಡೆಸಿದ್ದಾರೆ. ಈ ನಾಡು ಕಂಡ ಅಪ್ರತಿಮ ನಾಯಕರು. ರೈತರ ಜೊತೆಗೆ ಕೂಲಿ ಕಾರ್ಮಿಕರು, ಜೀತದಾಳುಗಳು, ಬಗರ್ ಹುಕುಂ ಸಾಗುವಳಿದಾರರ ಪರವಾಗಿಯೂ ಹೋರಾಟ ನಡೆಸಿ, ನ್ಯಾಯ ಕೊಡಿಸಿದ್ದ ಧೀಮಂತ ನಾಯಕ ಎಂದು ಹೇಳಿದರು. ಇದೇ ವೇಳೆ ಯಡಿಯೂರಪ್ಪ ಅವರ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಶೇಷ ಪ್ರೀತಿ ಮತ್ತು ಅಭಿಮಾನವಿದ್ದು, ಕಾರ್ಯಕ್ರಮಕ್ಕಾಗಿ ಸಂದೇಶ ಕಳುಹಿಸಿದ್ದಾರೆ ಎಂದು ಪ್ರಧಾನಿ ಅವರ ಸಂದೇಶ ವಾಚಿಸಿದರು.



## ಮಧ್ಯ ಕರ್ನಾಟಕ ಬರ ನೀಗಿಸಿದ ಭಗೀರಥ: ಬೊಮ್ಮಾಯಿ

**ಚಿತ್ರದುರ್ಗ, ಮೇ 9:** ಬರಪೀಡಿತ ಮಧ್ಯ ಕರ್ನಾಟಕ ಸೇರಿದಂತೆ ರಾಜ್ಯದ ಉದ್ದಗಲಕ್ಕೂ ಗಂಗಾ ಮಾತೆಯನ್ನು ಭೂಮಿತಾಯಿಗೆ ಉಣಬಡಿಸಿ ಅದಕ್ಕೆ ರೈತರ ಬೆವರು ಸೇರಿದಾಗ ಅಲ್ಲಿ ಬಂಗಾರದ ಬೆಳೆ ಬೆಳೆಯಲು ಅವಕಾಶ ಒದಗಿಸಿದ ಭಗೀರಥ ಬಿ.ಎಸ್. ಯಡಿಯೂರಪ್ಪ. ರಾಜ್ಯದ ಇತಿಹಾಸದಲ್ಲಿ ಇದನ್ನು ಯಾರು ಮರೆಯಲು ಸಾಧ್ಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಶ್ಲಾಘಿಸಿದ್ದಾರೆ.

ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಡಿಯೂರಪ್ಪ ಅನ್ನುವ ಹೆಸರಿನಲ್ಲಿಯೇ ದೊಡ್ಡ ಶಕ್ತಿ ಇದೆ. ಇಡೀ ಕರ್ನಾಟಕದಲ್ಲಿ ಬಡವರ ಮನೆಯಲ್ಲಿ, ಬಡವರ ಮನದಲ್ಲಿ ದಲಿತರ ಹೃದಯದಲ್ಲಿ ಮಿಡಿಯುತ್ತಿರುವ ಹೆಸರು ಯಡಿಯೂರಪ್ಪ. ಕೋಟೆ ನಾಡು, ಒನಕೆ ಓಬವ್ವನ ನಾಡು, ಮದಕರಿ ನಾಯಕನ ನಾಡಿನಲ್ಲಿ ಬಿಸಿಲು ಬರಗಾಲ ಶಾಶ್ವತವಾಗಿದ್ದಾಗ ಈ ನಾಡಿಗೆ ಶಾಶ್ವತವಾಗಿ ನೀರು ಉಣಿಸಬೇಕೆಂದು ಭದ್ರಾ ಮೇಲ್ದಂಡೆ ಯೋಜನೆ ಬಹಳ ವರ್ಷದಿಂದ ನನೆಗುದಿಗೆ ಬಿದ್ದಿತ್ತು. ಈ ಯೋಜನೆಗೆ ಯಡಿಯೂರಪ್ಪ ಅವರು 2008 ರಲ್ಲಿ ಮುಖ್ಯಮಂತ್ರಿ ಆದ ತಕ್ಷಣವೇ ಭದ್ರಾ ಮೇಲ್ದಂಡೆ ಯೋಜನೆಗೆ ಚಾಲನೆ ಕೊಟ್ಟಿದ್ದಾರೆ. ಅದೇ ರೀತಿ ವಾಣಿವಿಲಾಸ ಸಾಗರಕ್ಕೆ ಐದು ಟಿಎಂಸಿ ನೀರು ಕೊಟ್ಟಿದ್ದರಿಂದ ಚಿತ್ರದುರ್ಗ ಜಿಲ್ಲೆಗೆ ಕುಡಿಯುವ ನೀರು, ಕೃಷಿಗೆ ನೀರು ಕೊಟ್ಟಿರುವ ಭಗೀರಥ ನಮ್ಮ ನಾಯಕ ಬಿ.ಎಸ್. ಯಡಿಯೂರಪ್ಪ ಎಂದರು. ಬಿಜಾಪುರದಲ್ಲಿ ಕೆರೆ ತುಂಬಿಸುವ ಯೋಜನೆ, ಶಿಗ್ಗಾವಿಯಲ್ಲಿ ಕೆರೆ ತುಂಬಿಸುವ ಯೋಜನೆ, ದಾವಣಗೆರೆಯ ರಾಜನಹಳ್ಳಿಯ ಕೆರೆ ತುಂಬಿಸುವ ಯೋಜನೆ, ಉಮ್ರಾಣಿ ಅಮೃತಪುರ ಯೋಜನೆ, ಚನ್ನಗಿರಿ ಯೋಜನೆ, ಅದೇ ರೀತಿ ತುಮಕೂರು ಜಿಲ್ಲೆಯಲ್ಲಿ ಗೂಳೂರು–ಹೆಬ್ಬೂರು ಯೋಜನೆ, ಬರಪೀಡಿತ ಚಾಮರಾಜನಗರದಲ್ಲಿಯೂ ಕೆರೆ ತುಂಬಿಸುವ ಯೋಜನೆ, ರಾಜ್ಯದ ಉದ್ದಗಲಕ್ಕೂ ಕೂಡ ಗಂಗಾಮಾತೆಯನ್ನು ಭೂಮಿತಾಯಿಗೆ ಉಣಬಡಿಸಿ ಅದಕ್ಕೆ ರೈತರ ಬೆವರು ಸೇರಿದಾಗ ಅಲ್ಲಿ ಬಂಗಾರದ ಬೆಳೆ ಬೆಳೆಯಲು ಅವಕಾಶ ಒದಗಿಸಿದ ನಾಯಕ ಬಿ.ಎಸ್. ಯಡಿಯೂರಪ್ಪ. ರಾಜ್ಯ ಹಾಗೂ ರಾಜ್ಯದ ಜನರು ಇದನ್ನು ಗುರುತಿಸಬೇಕು. ರಾಜಕಾರಣದಲ್ಲಿ ಸುಳ್ಳುಹೇಳಿ ಜನರನ್ನು ಜನಾಂಗವನ್ನು ದಾರಿತಪ್ಪಿಸಿ ಕೇವಲ ಅಧಿಕಾರಕ್ಕಾಗಿ ರಾಜಕಾರಣ ಮಾಡುವಂತಹ ಈ ದಿನಮಾನಗಳಲ್ಲಿ ಒಬ್ಬ ಪ್ರಾಮಾಣಿಕ ಜನಪರವಾಗಿರುವ ಜನನಾಯಕರಾಗಿರುವಂತ ರೈತನ ಮಗ ಆಗಿರುವಂತವರ ಕೈಯಲ್ಲಿ ಅಧಿಕಾರ ಕೊಟ್ಟರೆ ಏನಾಗುತ್ತದೆ ಎನ್ನುವುದಕ್ಕೆ ಯಡಿಯೂರಪ್ಪ ನವರು ರಾಜ್ಯಕ್ಕೆ ಮಾಡಿ ತೋರಿಸಿದ್ದಾರೆ. ರಾಜ್ಯದ ಇತಿಹಾಸದಲ್ಲಿ ಇದನ್ನು ಯಾರು ಮರೆಯಲು ಸಾಧ್ಯವಿಲ್ಲ. ಯಾರೇ ಪ್ರಯತ್ನ ಮಾಡಿದರೂ ಸಾಧ್ಯವಿಲ್ಲ ಎಂದು ಹೇಳಿದರು.

**ಕೋವಿಡ್ ಅಗ್ನಿಪರೀಕ್ಷೆ ಯಶಸ್ವಿ ತೇರ್ಗಡೆ**

ಇನ್ನೊಂದು ಅಗ್ನಿಪರೀಕ್ಷೆ ಕೊವಿಡ್ ಸಂದರ್ಭದಲ್ಲಿ. ಅಕ್ಕಪಕ್ಕದ ರಾಜ್ಯಗಳು ಕೇರಳ, ಆಂಧ್ರಪ್ರದೇಶ ಮಹಾರಾಷ್ಟ್ರದಲ್ಲಿ ಹಲವಾರು ಸಾವು ನೋವುಗಳಾಗಿದ್ದವು. ಅದು ಕರ್ನಾಟಕದಲ್ಲಿ ಆಗಬಾರದು ಎಂದು ಮೊದಲನೇ ದಿನದಿಂದಲೇ ಹಠ ಮಾಡಿ ಔಷಧಿಗಳನ್ನು ತಂದು ಕೊವಿಡ್‌ನ್ನು ನಿಯಂತ್ರಣ ಮಾಡಿ, ಕೂಲಿ ಕಾರ್ಮಿಕರಿಗೆ ವಿಶೇಷ ಅನುದಾನ ಕೊಟ್ಟು, ಅವರ ಬದುಕನ್ನು ಉಳಿಸಿ ಆಕ್ಸಿಜನ್ ಇಲ್ಲದಾಗ ಬೇರೆ ಬೇರೆ ಪ್ರದೇಶಗಳಿಂದ ಆಕ್ಸಿಜನ್ ತಂದು ಆಸ್ಪತ್ರೆಗೆ ತಂದು ಕೊಟ್ಟಿರುವ ಧೀಮಂತ ನಾಯಕ ಯಡಿಯೂರಪ್ಪ. ಅಂತ ನಾಯಕನ ಅಭಿಮಾನೋತ್ಸವ ಮಾಡುವ ಸೌಭಾಗ್ಯ ನಮ್ಮದಾಗಿದೆ. ವಯಕ್ತಿಕವಾಗಿ ನನಗೆ ಆಶೀರ್ವಾದ ಮಾಡಿ, ಮಾರ್ಗದರ್ಶನ ಮಾಡಿ, ಸ್ಥಾನ ಮಾನ, ಗೌರವ ಕೊಟ್ಟು, ನಮಗೆ ಶಕ್ತಿ ಕೊಟ್ಟು, ಇನಷ್ಟು ಶಕ್ತಿ ತುಂಬಿರುವ ನನ್ನ ನೆಚ್ಚಿನ ನಾಯಕ ಯಡಿಯೂರಪ್ಪ ನವರಿಗೆ ನೂರು ವರ್ಷಕಾಲ ಭಗವಂತ ಆಶೀರ್ವಾದ ಮಾಡಲಿ, ಆರೋಗ್ಯದಿಂದ ಇರಲಿ, ಕರ್ನಾಟಕವನ್ನು ಮುನ್ನಡೆಸಲಿ ನಮ್ಮೆಲ್ಲರಿಗೂ ಆಶೀರ್ವಾದ ಮಾಡಲಿ ಎಂದು ಆಶಿಸಿದರು.

### ರೈತನಾಯಕ: ಕೋಟ ಶ್ರೀನಿವಾಸ ಪೂಜಾರಿ

**ಸಂಸದ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ಯಡಿಯೂರಪ್ಪ ಅವರು ರೈತ ಪರವಾಗಿ ಹೋರಾಟ ನಡೆಸಿ, ಸಂಕಷ್ಟದಲ್ಲಿದ್ದ ರೈತರಿಗೆ ನೆರವಾಗಿದ್ದರು. 50 ವರ್ಷಗಳ ರಾಜಕಾರಣದಲ್ಲಿ ಬಿಜೆಪಿಯನ್ನು ಕಟ್ಟಿ, ಬೆಳೆಸುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ ಎಂದರು.**



### ಭಾಗವಹಿಸಿದ್ದ ಗಣ್ಯರು

ಸಮಾರಂಭದಲ್ಲಿ ಪೇಜಾವರ ಶ್ರೀ, ಸುತ್ತೂರು ಮಠ ಸ್ವಾಮೀಜಿ, ನಿರಂಜನಾಪುರಿ ಸ್ವಾಮೀಜಿ, ಫಕೀರ ದಿಂಗಾಲೇಶ್ವರ ಸ್ವಾಮೀಜಿ, ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ, ಶಾಂತವೀರ ಮಹಾ ಸ್ವಾಮೀಜಿ, ಮುರುಘರಾಜೇಂದ್ರ ಸ್ವಾಮೀಜಿ, ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ, ಸರ್ದಾರ್ ಸೇವಾಲಾಲ್ ಸ್ವಾಮೀಜಿ, ಬಸವ ಯಾದವನಾಂದ ಸ್ವಾಮೀಜಿ, ಬಸರ ಕುಂಬಾರ ಮಹಾಸ್ವಾಮಿ, ಹೊಸದುರ್ಗದ ಪುರುಷೋತ್ತಮಾನಂದ ಸ್ವಾಮೀಜಿ, ತರಳಬಾಳು ಪಂಡಿತಾರಾಧ್ಯ ಶ್ರೀಗಳು, ವಚನಾನಂದ ಸ್ವಾಮೀಜಿ, ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ರಾಧಾ ಮೋಹನ್ ದಾಸ್ ಅಗರ್‌ವಾಲ್, ಆರ್. ಅಶೋಕ, ಛಲವಾದಿ ನಾರಾಯಣಸ್ವಾಮಿ, ಗೋವಿಂದ ಕಾರಜೋಳ, ಸದಾನಂದಗೌಡ, ಪ್ರಭಾಕರ ಕೋರೆ, ಜಗದೀಶ ಶೆಟ್ಟರ್, ಶ್ರೀರಾಮುಲು, ಸಿ.ಟಿ. ರವಿ,ಅಶ್ವತ್ಥನಾರಾಯಣ, ಎ. ನಾರಾಯಣಸ್ವಾಮಿ, ತಿಪ್ಪಾರೆಡ್ಡಿ, ಚಂದ್ರಪ್ಪ ಮತ್ತಿತರರು ಭಾಗವಹಿಸಿದ್ದರು.